24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 99 | ನವದೆಹಲಿ | ಬೆಲೆ ₹ 10 | ಅಕ್ಟೋಬರ್ 4 2026 ಭಾನುವಾರ


# D.S.V. Foundation And
# PITHAMAHA PRAKASHANA
# BANGALORE




WRITER, ORGANISER, JOURNALIST

## Shri. D.S. Veeraiah's
## Two Books Lanching of

Nation's Healer
(English) &
ರಾಷ್ಟ್ರ ಚಿಕಿತ್ಸಕ ಅಂಬೇಡ್ಕರ್
(ಕನ್ನಡ)




## Dignitaries & Guests



**Shri. Thaavarchand Gehelot**
Hon'ble Governer of Karnataka



**Shri. Vishwanath Rajendra Arlekar**
Hon'ble Governer Tamilnadu & Keralam



**Shri. B.S.Yediyurappa**
Former Chief Minister of Karnataka



**Shri. H.D. Kumarswamy**
Union Minister Coal, Heavy Industires & Former Chief Minister of Karnataka



**Dr. G. Parameshwar**
Deputy Chief Minister of Karnataka



**Shri Vishveshwara Bhat**
Editor Vishwavani



**Shri. D.S. Veeraiah**
Writer

(Introductory Speech)



**Shri. Mallepuram G. Venktesh**
Former V.C. Sanskrit University

Date: On Monday 5-10-2026 : Time: 4.00 P.M.
Venue: Ravindra Kala kshethra Bangalore
Warm Welcome

## ನಿತ್ಯ ಪಂಚಾಂಗ 4.10.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ–ಆಶ್ವಯುಜ ಮಾಸ

ಭಾದ್ರಪದ ಬಹುಳ, ಸಪ್ತಮಿ,
ಶತಭಿಷ ನಕ್ಷತ್ರ,
ವಿಶ್ವ ರಕ್ತ ದಾನಿಗಳ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

OFFICE OF THE RESIDENT COMMISSIONER
No.10, Kautilya Marg, Karnataka Bhavan-1 (Cauvery), Chanakyapuri, New Delhi-110 021
No. KB/KPT/14/2026/313933 Date:03.10.2026

E-TENDER NOTIFICATION
(Through e-Procurement Portal only)

**Subject: Tender through e-Procurement for Providing Manpower services to Karnataka Bhavan-DPAR/2026-27/ SE0073**

Office of the Resident Commissioner, Government of Karnataka, Karnataka Bhavan has invited tender through e-Procurement for Providing Manpower services to Karnataka Bhavan from eligible firm/agencies. Last date for submission of tender: **15.10.2026 till 5.30 PM.** Details can be obtained from **https://kppp.karnataka.gov.in**

**Sd/- Resident Commissioner**
**Karnataka Bhavan, New Delhi**
DIPR/DD-C.P/3047/KSMCA/2026-27

# ನೈಸ್ ಅಕ್ರಮ: ಕಾನೂನು ಮೂಲಕವೇ ಉತ್ತರಿಸುತ್ತೇನೆ–ಸಿಎಂ ಡಿ.ಕೆ.ಶಿವಕುಮಾರ್



**ಮೈಸೂರು, ಅ.3:** ನೈಸ್ ಅಕ್ರಮದಲ್ಲಿ ಯಾರು ಏನೇ ಹೇಳಲಿ, ಎಲ್ಲದಕ್ಕೂ ಕಾನೂನಿದೆ. ಯಾರು ಸರಿ, ಯಾರು ತಪ್ಪು ಎನ್ನುವುದಕ್ಕೆ ಕಾನೂನು ಮೂಲಕವೇ ಉತ್ತರಿಸುತ್ತೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ನೈಸ್ ಅಕ್ರಮದ ಕುರಿತು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆರೋಪದ ಬಗ್ಗೆ ಪಿರಿಯಾಪಟ್ಟಣದಲ್ಲಿ ಮಾಧ್ಯಮದವರೊಂದಿಗೆ ಶನಿವಾರ ಮಾತನಾಡಿ, ಎಲ್ಲದಕ್ಕೂ ಪ್ರತಿಕ್ರಿಯೆ ಕೊಟ್ಟು ವಿಚಾರವನ್ನು ಡೈವರ್ಟ್ ಮಾಡುವುದಿಲ್ಲ. ಕಾನೂನು ಮೂಲಕ ಉತ್ತರ ಕೊಡುತ್ತೇನೆ. ಈಗ ಈ ವಿಚಾರದ ಬಗ್ಗೆ ಉತ್ತರಿಸುವುದಿಲ್ಲ ಎಂದರು. ಎಸ್ಐಆರ್ ಗೊಂದಲ ವಿಚಾರದಲ್ಲಿ ರಾಜ್ಯ ಸರ್ಕಾರದಿಂದ ಪ್ರತ್ಯೇಕ ತನಿಖೆ ಸದ್ಯಕ್ಕಿಲ್ಲ. ಚುನಾವಣಾ ಆಯೋಗವೇ ತನಿಖೆ ಮಾಡುತ್ತದೆ. ಎಲ್ಲಿಂದ ಫಾರ್ಮ್‌ಗಳು ಮುದ್ರಣವಾದವು ಹೇಗೆ ಬಿಜೆಪಿ ಕೈಗೆ ತಲುಪಿದವು? ಎಂಬೆಲ್ಲಾ ವಿಚಾರಗಳು ಗೊತ್ತಾಗುತ್ತವೆ. ಈ ವಿಚಾರದಲ್ಲಿ ಕೇಂದ್ರ ಚುನಾವಣಾ ಆಯೋಗಕ್ಕೆ ಸತ್ಯದರ್ಶನ ಆಗಿದೆ. ಅವರು ಏನು ಕ್ರಮ ಕೈಗೊಳ್ಳುತ್ತಾರೆಂದು ನೋಡೋಣ. ಆಮೇಲೆ ತೀರ್ಮಾನ ಮಾಡುತ್ತೇವೆ ಎಂದು ತಿಳಿಸಿದರು.

### ದಸರಾದಲ್ಲಿ ಹೊರರಾಜ್ಯದ ಸ್ತಬ್ಧಚಿತ್ರ

ಈ ಬಾರಿ ದಸರಾ ಜಂಬೂ ಸವಾರಿಯಲ್ಲಿ ಹೊರರಾಜ್ಯದ ಸ್ತಬ್ಧಚಿತ್ರಗಳನ್ನು ಕಳುಹಿಸುವಂತೆ ಮನವಿ ಮಾಡಿದ್ದೇವೆ, ಅದು ಶೀಘ್ರವೇ ತೀರ್ಮಾನವಾಗುತ್ತದೆ. ಜೊತೆಗೆ ಹೊರರಾಜ್ಯದ ಸಿಎಂಗಳಿಗೂ ದಸರಾ ಜಂಬೂಸವಾರಿಗೆ ಆಹ್ವಾನ ಕೊಟ್ಟಿದ್ದೇವೆ. ಆದ್ರೆ ಯಾರ್‍ಯಾರು ಬರುತ್ತಾರೆ ಎಂಬುದು ತೀರ್ಮಾನ ಆಗಿಲ್ಲ ಎಂದರು. ನಮ್ಮ ರಾಜ್ಯದ ನೀರು, ತರಕಾರಿಗಳು ಹೊರರಾಜ್ಯಕ್ಕೆ ಹೋಗುತ್ತವೆ. ನಮ್ಮ ಕಲೆಗಳು ಹೊರಕ್ಕೆ ಹೋಗುತ್ತವೆ.

ಅದೇರೀತಿ ಎಲ್ಲ ಕಲೆಗಳನ್ನು ದಸರಾದಲ್ಲಿ ಬಿಂಬಿಸುವ ಪ್ರಯತ್ನ ನಡೆದಿದೆ. ಜಂಬೂ ಸವಾರಿಯಲ್ಲಿ ಸಿನಿಮಾದವರು ಮೆರವಣಿಗೆಯಲ್ಲಿ ಬರುವಂತೆ ಹೇಳಿದ್ದೇನೆ. ಏರ್‌ಶೋಗೂ ಮನವಿ ಮಾಡಿದ್ದೇವೆ. ಈ ಬಾರಿ ಜಂಬೂ ಸವಾರಿ ಮೆರವಣಿಗೆ ಹೊಸತನದಿಂದ ಇರಬೇಕು ಎಂಬುದು ನನ್ನ ಆಸೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

# ನೈಸ್ ಗುತ್ತಿಗೆದಾರ ಖೇಣಿ ಬಂಧನಕ್ಕೆ ಎಚ್‌ಡಿಕೆ ಆಗ್ರಹ



**ಬೆಂಗಳೂರು, ಅ.3:** ಶಿವೈಕ್ಯ ಪರಮಪೂಜ್ಯ ಶ್ರೀಗಳಾದ ಡಾ. ಶ್ರೀ ಶಿವಕುಮಾರ ಮಹಾಸ್ವಾಮೀಜಿಯವರ ಬಗ್ಗೆ ಲಘುವಾಗಿ ಮಾತನಾಡಿರುವ ನೈಸ್ ಗುತ್ತಿಗೆದಾರ ಅಶೋಕ್ ಖೇಣಿಯನ್ನು ತಕ್ಷಣವೇ ಬಂಧಿಸಬೇಕು ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹಿಸಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಹೇಳಿಕೆ ಹಾಕಿರುವ ಅವರು, ಡಾ. ಶಿವಕುಮಾರ ಸ್ವಾಮೀಜಿಯವರ ಬಗ್ಗೆ ಲಘುವಾಗಿ ಮಾತನಾಡಿರುವ ಈ ಫ್ರಾಡ್ ವ್ಯಕ್ತಿಗೆ ರಾಜ್ಯದ ಮುಖ್ಯಮಂತ್ರಿ ರಕ್ಷಣೆ ಕೊಡುತ್ತಾ ಬಂದಿದ್ದಾರೆ. ಅಲ್ಲದೆ ಆತನ ಜತೆ ಶಾಮೀಲಾಗಿ ಮಾಡಬಾರದ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ.

ಈ ಅಶೋಕ್ ಖೇಣಿ ಸಿದ್ಧಗಂಗಾ ಮಠದ ಆಸ್ತಿಯನ್ನು ಕೂಡ ಲೂಟಿಮಾಡಿದ್ದಾನೆ. ಇಂತಹ ಧರ್ಮದ್ರೋಹಿಗೆ ಡಿ.ಕೆ.ಶಿವಕುಮಾರ್ ಸಹಕಾರ ಕೊಡುತ್ತಾ ಬಂದಿದ್ದಾರೆ. ಇದು ನಾಚಿಕೆಗೇಡು ಎಂದು ವಾಗ್ದಾಳಿ ನಡೆಸಿದ್ದಾರೆ. ಅಧಿಸೂಚಿತ ಭೂಮಿ ಖರೀದಿಸಿರುವ ಡಿಕೆಶಿ ಕುಟುಂಬ

ಬೆಂಗಳೂರಿನ ಹೊಸಕೆರೆಹಳ್ಳಿ ಟೋಲ್ ಬಳಿ ಇರುವ ಶೋಭಾ ಅಪಾರ್ಟ್‌ಮೆಂಟ್ ಯಾರದು, ಅದಕ್ಕೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರವರ ಕುಟುಂಬ, ಅವರ ಸಹೋದರ ಡಿ.ಕೆ. ಸುರೇಶ್‌ಗೂ ಏನು ಸಂಬಂಧ. ಅಮಾಸೆಗೌಡ, ಭಾಗ್ಯಲಕ್ಷ್ಮಿ, ಕೆಂಪೇಗೌಡ ಎನ್ನುವವರು ಯಾರು ಎಂದು ಅವರು ಪ್ರಶ್ನಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಮ್ಮ ಮತ್ತು ತಾಯಿ ಹೆಸರಿಗೆ ಈ ಭೂಮಿಯನ್ನು ಖರೀದಿಸಿದ್ದು ಹೇಗೆ, ಒಮ್ಮೆ ಸರ್ಕಾರಿ ಯೋಜನೆಗೆ ನೋಟಿಫೈ ಆಗಿರುವ ಭೂಮಿಯನ್ನು ಇವರು ಖರೀದಿಸಲು ಹೇಗೆ ಸಾಧ್ಯವಾಯಿತು. ಎನ್‌ಓಸಿ ಹೇಗೆ ಸಿಕ್ಕಿತು ಎಂದು ಕುಮಾರಸ್ವಾಮಿ ಪ್ರಶ್ನಿಸಿದ್ದಾರೆ.

ಈ ಅಪಾರ್ಟ್‌ಮೆಂಟ್ ಅಕ್ಕಪಕ್ಕದಲ್ಲಿ ಸ್ವಾಧೀನ ಆಗಿರುವ ಭೂಮಿಗೆ ಬಡವರಿಗೆ ಯಾರಿಗೂ ನೈಸ್ ಕಂಪೆನಿ ಗುತ್ತಿಗೆದಾರ ಅಶೋಕ್ ಖೇಣಿ ಎನ್‌ಓಸಿ ಕೊಟ್ಟಿಲ್ಲ. ಅಷ್ಟೇ ಅಲ್ಲ, ಸಿದ್ಧಗಂಗಾ ಮಠಕ್ಕೆ ಎನ್‌ಓಸಿ ಕೊಡಲು ನಿರಾಕರಿಸುತ್ತಾನೆ. ಆದರೆ ಈ ರಸ್ತೆಯ ಸುತ್ತಮುತ್ತ 200 ರಿಂದ 300 ಎಕರೆಯಷ್ಟು ಭೂಮಿಯನ್ನು ಮುಖ್ಯಮಂತ್ರಿ ಮತ್ತವರ ಪರಿವಾರ ಖರೀದಿಸಿದ್ದು ಹೇಗೆ. ಅವರು ಅನ್ಯಾಯ ಮಾರ್ಗದಲ್ಲಿ ಕಸಿದುಕೊಂಡಿದ್ದಾರೆ. ಹೆದರಿಸಿ, ಬೆದರಿಸಿ ಭೂಮಿಯನ್ನು ಕಿತ್ತುಕೊಂಡಿದ್ದಾರೆ ಎಂದು ಕುಮಾರಸ್ವಾಮಿ ಆರೋಪಿಸಿದ್ದಾರೆ.

# 217 ತಾಲೂಕುಗಳಲ್ಲಿ ಬರ, 50ರಿಂದ 60 ಸಾವಿರ ಕೋಟಿ ನಷ್ಟ ಅಂದಾಜು: ಡಿಸಿಎಂ

**ಬೆಂಗಳೂರು, ಅ.3:** ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ ಉಂಟಾಗಿರುವ ಬೆಳೆ ನಷ್ಟದ ಅಂದಾಜು ?50 ಸಾವಿರ ಕೋಟಿಯಿಂದ 60 ಸಾವಿರ ಕೋಟಿ ರೂಪಾಯಿಗಳವರೆಗೆ ತಲುಪುವ ಸಾಧ್ಯತೆಯಿದ್ದು, ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ಬರ ಪರಿಹಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಒಟ್ಟು 217 ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಈ ಪೈಕಿ 177 ತಾಲೂಕುಗಳಲ್ಲಿ ಉಂಟಾಗಿರುವ ನಷ್ಟದ ಅಂದಾಜು ಮಾಡಲಾಗಿದ್ದು, ಸುಮಾರು 46,000 ಕೋಟಿ ನಷ್ಟವಾಗಿದೆ ಎಂದು ಕೇಂದ್ರಕ್ಕೆ ಸಲ್ಲಿಸಿರುವ ಎರಡನೇ ಮೆಮೊರಾಂಡಂನಲ್ಲಿ ತಿಳಿಸಲಾಗಿದೆ. ಅಕ್ಟೋಬರ್ 1ರಂದು ಘೋಷಿಸಲಾದ



ಇನ್ನೂ 40 ತಾಲೂಕುಗಳಲ್ಲಿನ ನಷ್ಟದ ಅಂದಾಜು ಪ್ರಕ್ರಿಯೆಯೂ ನಡೆಯುತ್ತಿದೆ. ಈ ಎಲ್ಲ ತಾಲೂಕುಗಳ ನಷ್ಟದ ಅಂದಾಜನ್ನು ಒಟ್ಟುಗೂಡಿಸಿದಾಗ 50 ಸಾವಿರ ಕೋಟಿಯಿಂದ 60 ಸಾವಿರ ಕೋಟಿ ರೂಪಾಯಿಗಳವರೆಗೆ ನಷ್ಟವಾಗುವ ಸಾಧ್ಯತೆಯಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ರಾಜ್ಯಕ್ಕೆ ಬರಬೇಕಾದ ಪರಿಹಾರವನ್ನು ಕೋರಲಾಗುವುದು ಎಂದು ಹೇಳಿದರು.

ಇನ್ನೂ ಘೋಷಣೆಯಾಗದ 22 ತಾಲೂಕುಗಳ ವಿಚಾರವಾಗಿ ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಆ ತಾಲೂಕುಗಳಲ್ಲಿಯೂ ಗ್ರೌಂಡ್ ಟ್ರೂಥಿಂಗ್ ನಡೆಸಲಾಗುವುದು. ಪರಿಶೀಲನೆಯ ವೇಳೆ ಒಂದೆರಡು ಅಥವಾ ಮೂರು ತಾಲೂಕುಗಳು ಬರಪೀಡಿತ ಎಂದು ಕಂಡುಬರಬಹುದು. ಕರಾವಳಿ ಭಾಗದ ಕೆಲವು ತಾಲೂಕುಗಳಲ್ಲಿ ಅಂತಹ ಪರಿಸ್ಥಿತಿ ಇಲ್ಲ. ಪರಿಶೀಲನೆಯ ನಂತರ ವಾಸ್ತವ ಸ್ಥಿತಿಯನ್ನು ಆಧರಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

# ಚುನಾವಣಾ ಆಯೋಗದ ಎದುರು ಪ್ರತಿಭಟನೆಗೆ ಹೋಗಿರಲಿಲ್ಲ ನಮಗೂ ಕನಿಷ್ಠ ಪ್ರಜ್ಞೆ ಇದೆ: ಡಿಸಿಎಂ ಪರಂ ತಿರುಗೇಟು

**ಬೆಂಗಳೂರು, ಅ.3:** ಫಾರಂ 7 ಮೂಲಕ ಅರ್ಹ ಮತದಾರರ ಹೆಸರುಗಳನ್ನು ತೆಗೆದುಹಾಕಿರುವ ಆರೋಪದ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾಧಿಕಾರಿಗಳ ಕಚೇರಿಗೆ ತೆರಳಿದ್ದ ಕಾಂಗ್ರೆಸ್ ನಾಯಕರ ವಿರುದ್ಧ ಬಿಜೆಪಿ ಟೀಕೆಗೆ ಡಿಸಿಎಂ ಡಾ.ಜಿ. ಪರಮೇಶ್ವರ್ ಪ್ರತಿಕ್ರಿಯಿಸಿದ್ದು, ನಾವು ಪ್ರತಿಭಟನೆ ಮಾಡಲು ಹೋಗಿರಲಿಲ್ಲ. ಚುನಾವಣಾ ಆಯೋಗಕ್ಕೆ ಮೆಮೊರಾಂಡಂ ಸಲ್ಲಿಸಲು ಹೋಗಿದ್ದೆವು. ಅವರು ನಮಗೆ ಸರಿಯಾಗಿ ಉತ್ತರ ನೀಡದ ಹಿನ್ನೆಲೆಯಲ್ಲಿ ಉತ್ತರ ನೀಡುವವರೆಗೂ ಅಲ್ಲಿಯೇ ಕುಳಿದ್ದೆದ್ದೆವು. ಸರ್ಕಾರ ನಡೆಸುವವರು ನಾವು. ನಾವೇತಕ್ಕೆ ಪ್ರತಿಭಟನೆ ನಡೆಸುವುದಕ್ಕೆ ಹೋಗುತ್ತೇವೆ. ಮುಖ್ಯಮಂತ್ರಿಗಳಾಗಲಿ, ಸಚಿವರಾಗಲಿ ಯಾರೂ ಪ್ರತಿಭಟನೆ ಮಾಡಲು ಹೋಗಿರಲಿಲ್ಲ. ಈ ಕನಿಷ್ಠ ಪ್ರಜ್ಞೆ ನಮಗಿದೆ ಎಂದು ಸ್ಪಷ್ಟವಾಗಿ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫಾರಂ7 ಅರ್ಜಿಗಳ ವಿಚಾರವಾಗಿ ಈಗಾಗಲೇ ಹಲವು ಕಡೆ ಎಫ್ಐಆರ್‌ಗಳು ದಾಖಲಾಗಿವೆ. ಫಾರಂ7 ಅರ್ಜಿಗಳನ್ನು ಒಟ್ಟಾಗಿ ಸಂಗ್ರಹಿಸಿ, ಸಹಿ ಮಾಡಿ ಬಂಡಲ್‌ಗಳ ರೂಪದಲ್ಲಿ ಸಲ್ಲಿಸಿರುವವರ ವಿರುದ್ಧ ಕೆಲವು ಕಡೆ ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಎಫ್ಐಆರ್ ದಾಖಲಿಸುವಂತೆ ಚುನಾವಣಾ ಆಯೋಗವನ್ನು ಕೋರಿದ್ದೇವೆ. ಏಳು ದಿನಗಳ ಕಾಲ ನೋಟಿಸ್ ನೀಡಿ ಕಾಯ್ದು, ನಂತರ ಎಫ್ಐಆರ್ ದಾಖಲಿಸುವುದಾಗಿ ಚುನಾವಣಾ ಆಯೋಗವು ಪತ್ರದ ಮೂಲಕ ತಿಳಿಸಿದೆ. ಅದರಂತೆ ಮುಂದಿನ ಕ್ರಮ ಕೈಗೊಳ್ಳಬೇಕಿದೆ. ಎಫ್ಐಆರ್ ದಾಖಲಾದ ನಂತರ ಪ್ರಕರಣದಲ್ಲಿ ಬೇರೆ ರೀತಿಯ ಬೆಳವಣಿಗೆಗಳು ನಡೆಯಲಿವೆ. ಅಗತ್ಯವಿರುವ ಪುರಾವೆಗಳನ್ನು ಸಂಬಂಧಪಟ್ಟ ತನಿಖಾ ಸಂಸ್ಥೆಗಳ ಮುಂದೆ ಸೂಕ್ತ ಸಮಯದಲ್ಲಿ ಸಲ್ಲಿಸಲಾಗುವುದು. ಈಗ ಆರೋಪದ ಬಗ್ಗೆ ಪ್ರಸ್ತಾಪಿಸಿದ್ದೇವೆ. ಅಗತ್ಯವಿರುವ ದಾಖಲೆಗಳನ್ನು ಸಂಬಂಧಪಟ್ಟ ಏಜೆನ್ಸಿಗಳ ಮುಂದೆ ನೀಡುತ್ತೇವೆ ಎಂದು ತಿಳಿಸಿದರು.

### ಆರೋಪಗಳ ಕುರಿತು ತನಿಖೆ ನಡೆಯಲಿ

ಅರ್ಜಿಗಳನ್ನು ಸಲ್ಲಿಸಿದವರು ಬೆದರಿಕೆಗೆ ಒಳಗಾಗಿ ಹಿಂಪಡೆದಿದ್ದಾರೆ ಎಂಬ ಮಾಧ್ಯಮದವರ ಮಾತಿಗೆ ಪ್ರತಿಕ್ರಿಯಿಸಿದ ಅವರು, ಅರ್ಜಿ ಹಿಂಪಡೆದವರು ಚಿಕ್ಕಮಕ್ಕಳಲ್ಲ. ಅರ್ಜಿ ಸಲ್ಲಿಸುವಾಗ ಅವರಿಗೆ ಪ್ರಜ್ಞೆ ಇತ್ತು ಅಲ್ವಾ. ಈಗ ವಿರೋಧ ಪಕ್ಷದವರು ತಮ್ಮನ್ನು ರಕ್ಷಿಸಿಕೊಳ್ಳಲು ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಈ ಪ್ರಕರಣದ ಸತ್ಯಾಸತ್ಯತೆ ಹೊರಬರಬೇಕು. ತನಿಖೆ ನಡೆಸುವುದಕ್ಕೆ ನಮ್ಮ ಯಾವುದೇ ತಕರಾರಿಲ್ಲ. ತನಿಖೆ ನಡೆಸಿ, ಯಾವುದೇ ತಪ್ಪು ನಡೆದಿಲ್ಲ ಮತ್ತು ಎಲ್ಲವೂ ಸರಿಯಾಗಿದೆ ಎಂದು ಸಾಬೀತಾದರೆ ಅದನ್ನು ಒಪ್ಪಿಕೊಳ್ಳಲು ಸಿದ್ಧರಿದ್ದೇವೆ ಎಂದು ಪರಮೇಶ್ವರ್ ಹೇಳಿದರು.

# ದುಬಾರಿ ಬೆಲೆ ಔಷಧಗಳಿಗೆ ಕಡಿವಾಣ ಹಾಕಲು ಕೇಂದ್ರಕ್ಕೆ ಖಾದರ್ ಒತ್ತಾಯ

**ಮಂಗಳೂರು, ಅ.3:** ಖಾಸಗಿ ಆಸ್ಪತ್ರೆಗಳಲ್ಲಿ ಮಾರಾಟವಾಗುವ ಕ್ರಿಟಿಕಲ್ ಔಷಧಗಳ ಅತಿಯಾದ ಲಾಭಕೋರತನಕ್ಕೆ ಕಡಿವಾಣ ಹಾಕಲು ಕೇಂದ್ರ ಸರ್ಕಾರ ಕಾನೂನು ರೂಪಿಸಬೇಕು ಎಂದು ಒತ್ತಾಯಿಸಿರುವ ಆರೋಗ್ಯ ಸಚಿವ ಯು.ಟಿ. ಖಾದರ್, ಹಾಸ್ಟೆಲ್, ಪಿಜಿ ಹಾಗೂ ಹೋಟೆಲ್‌ಗಳಲ್ಲಿ ಸ್ವಚ್ಛತೆ ಮತ್ತು ಆಹಾರ ಗುಣಮಟ್ಟ ಖಚಿತಪಡಿಸಿಕೊಳ್ಳಲು ಜನಸಾಮಾನ್ಯರಿಗೆ ನೆರವಾಗುವ ಕ್ಯೂಆರ್ ಕೋಡ್ ವ್ಯವಸ್ಥೆ ತರಲಾಗಿದೆ ಎಂದು ಹೇಳಿದರು.

ಮಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಔಷಧ ದರ ನಿಯಂತ್ರಣ ಪ್ರಾಧಿಕಾರಕ್ಕೆ ಕೇವಲ ಶೆಡ್ಯೂಲ್ಡ್ (ಪಟ್ಟಿ ಮಾಡಲಾದ) ಔಷಧಗಳ ಬೆಲೆಯನ್ನು ನಿಯಂತ್ರಿಸುವ ಅಧಿಕಾರವಿದೆಯೇ ಹೊರತು ಎಲ್ಲ ಔಷಧಗಳ ಮೇಲಿಲ್ಲ. ಹೀಗಾಗಿ ಶೆಡ್ಯೂಲ್ ವ್ಯಾಪ್ತಿಗೆ ಬಾರದ ಔಷಧಗಳಿಗೆ ಕಂಪನಿಗಳು ನೂರಾರು ಪಟ್ಟು ಹೆಚ್ಚಿನ ಲಾಭ ನಿಗದಿಪಡಿಸುತ್ತಿವೆ: 5 ಸಾವಿರ ಬೆಲೆಯ ಇಂಜೆಕ್ಷನ್‌ಗೆ 60 ಸಾವಿರ ದರ ವಿಧಿಸಲಾಗುತ್ತಿದೆ; ರೋಗಿಗೆ 12 ಇಂಜೆಕ್ಷನ್ ನೀಡಿದರೆ 70 ಸಾವಿರದಿಂದ 80 ಸಾವಿರ ವೆಚ್ಚವಾಗುವ ಜಾಗದಲ್ಲಿ 7.5 ಲಕ್ಷದವರೆಗೆ ವಸೂಲಿ ಮಾಡಲಾಗುತ್ತಿದೆ. ಔಷಧಗಳ ಬೆಲೆ ನಿಯಂತ್ರಿಸುವ ನೇರ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲದ ಕಾರಣ, ಎಲ್ಲ ಜೀವರಕ್ಷಕ ಔಷಧಗಳನ್ನು ಬೆಲೆ ನಿಯಂತ್ರಣ ಪಟ್ಟಿಗೆ ಸೇರಿಸುವಂತೆ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ವರದಿ ಸಲ್ಲಿಸಲಾಗಿದೆ.

### ನ.15ಕ್ಕೆ ಬೆಂಗಳೂರಿನಲ್ಲಿ ಚಿಂತನಾ ಸಭೆ

ಕನ್‌ಸ್ಯೂಮರ್ ಇಂಜೆಕ್ಷನ್ ಹಾಗೂ ಇಂಪ್ಲಾಂಟ್‌ಗಳ ದರ ತಪಾಸಣೆ ನಡೆಯುತ್ತಿದ್ದು, ಮುಂದಿನ



ಹಂತದಲ್ಲಿ 186 ಪ್ರಮುಖ ಹೈಬ್ರ್ಯಾಂಡ್ ಔಷಧಗಳ ಕುರಿತು ಅಧ್ಯಯನ ನಡೆಸಲಾಗುತ್ತಿದೆ. ಈ ಕುರಿತಂತೆ ಸುಪ್ರೀಂ ಕೋರ್ಟ್ ಕೂಡ ಚಾಟಿ ಬೀಸಿದ್ದು, ಕೇಂದ್ರ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಆಹಾರ ಮತ್ತು ಔಷಧ ಗುಣಮಟ್ಟ ಸುಧಾರಣೆ ಹಾಗೂ ರಾಜ್ಯ – ಕೇಂದ್ರ ಸರ್ಕಾರಗಳ ಜವಾಬ್ದಾರಿಯನ್ನು ನಿರ್ದಿಷ್ಟಪಡಿಸುವ ನಿಟ್ಟಿನಲ್ಲಿ ನವೆಂಬರ್ 15ರಂದು ಬೆಂಗಳೂರಿನಲ್ಲಿ ವಿವಿಧ ರಾಜ್ಯಗಳ ಆಹಾರ ಮತ್ತು ಔಷಧ ಇಲಾಖೆಗಳ ಆಯುಕ್ತರು ಹಾಗೂ ಹಿರಿಯ ಅಧಿಕಾರಿಗಳ ರಾಷ್ಟ್ರಮಟ್ಟದ ಮಹತ್ವದ ಚಿಂತನ ಸಭೆಯನ್ನು ಆಯೋಜಿಸಲಾಗುವುದು ಎಂದು ಸಚಿವ ಯು.ಟಿ ಖಾದರ್ ಹೇಳಿದರು.

### ಆಂಬುಲೆನ್ಸ್‌ನಲ್ಲಲಿಯೇ ಹಾವು ಕಡಿತದ ಔಷಧ

ರಾಜ್ಯದ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಲಾ 10 ವೈಲ್ಸ್, ತಾಲೂಕು ಮಟ್ಟದಲ್ಲಿ 30 ವೈಲ್ಸ್ ಹಾಗೂ ಜಿಲ್ಲಾ ಗೋದಾಮುಗಳಲ್ಲಿ ಅಗತ್ಯವಿರುವಷ್ಟು ಹಾವು ಕಡಿತ ನಿಗ್ರಹ ಇಂಜೆಕ್ಷನ್‌ಗಳನ್ನು ದಾಸ್ತಾನು ಇರಿಸಲಾಗಿದ್ದು, ಯಾವುದೇ ಕೊರತೆಯಿಲ್ಲ. 108 ಆಂಬುಲೆನ್ಸ್‌ಗಳಲ್ಲಿ ಹಾವು ಕಡಿತದ ಔಷಧಗಳನ್ನು ಇರಿಸಲು ಕೋಲ್ಡ್ ಸ್ಟೋರೇಜ್ (ಶೀತಲೀಕರಣ) ವ್ಯವಸ್ಥೆ ಅಗತ್ಯವಿದ್ದು, ಮುಂದಿನ ಒಂದು–ಎರಡು ತಿಂಗಳಲ್ಲಿ ಆಂಬ್ಯುಲೆನ್ಸ್ ಸೇವೆಗೆ ಹೊಸ ವ್ಯವಸ್ಥೆ ತರಲು ಯೋಜನೆ ರೂಪಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

# ಬಿಜೆಪಿ ದ್ವಂದ್ವನೀತಿ: ಸಚಿವ ರಾಮಲಿಂಗಾರೆಡ್ಡಿ ಆರೋಪ

**ಬೆಂಗಳೂರು, ಅ.3:** ಕಾಂಗ್ರೆಸ್ ನಾಯಕರು ಚುನಾವಣಾ ಆಯುಕ್ತರ ವಿರುದ್ಧ ಪ್ರಜಾಪ್ರಭುತ್ವದ ಹಕ್ಕಿಗಾಗಿ ಧ್ವನಿ ಎತ್ತಿದಾಗ ವಿರೋಧ ವ್ಯಕ್ತಪಡಿಸಿದ್ದ ಬಿಜೆಪಿ ನಾಯಕರು, ಇದೀಗ ತಾವೇ ಪೊಲೀಸ್ ಆಯುಕ್ತರ ಕಚೇರಿ ಎದುರು ಧರಣಿ ನಡೆಸುತ್ತಿರುವುದು ದ್ವಂದ್ವನೀತಿಗೆ ಸಾಕ್ಷಿ ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಆರೋಪಿಸಿದ್ದಾರೆ. ಕಾಂಗ್ರೆಸ್ ಮಾಡಿದರೆ ತಪ್ಪು,ಅದೇ ಕೆಲಸವನ್ನು ಬಿಜೆಪಿ ಮಾಡಿದರೆ ನ್ಯಾಯವೇ, ಜನಸಾಮಾನ್ಯರಿಗೆ ಮತ್ತು ಕಾಂಗ್ರೆಸ್‌ಗೆ ಒಂದು ಕಾನೂನು, ಬಿಜೆಪಿ ನಾಯಕರಿಗೆ ಮತ್ತೊಂದು ಕಾನೂನು ಎಂಬ ಪ್ರತ್ಯೇಕ ನೀತಿ ರಾಜ್ಯದ ಜನತೆಗೆ ತಿಳಿದಿದೆ ಎಂದು ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ. ಚುನಾವಣಾ ಆಯುಕ್ತರನ್ನು ಮುಂದಿಟ್ಟುಕೊಂಡು ಕೇಂದ್ರ ಬಿಜೆಪಿ ಸರ್ಕಾರ ಹಾಗೂ ಅದರ ನಾಯಕರು ತಮ್ಮ ರಾಜಕೀಯ ಹಿತಾಸಕ್ತಿಗಾಗಿ ತೆರೆಮರೆಯಲ್ಲಿ ಹುನ್ನಾರ ನಡೆಸುತ್ತಿದ್ದಾರೆ ಎಂದು ರಾಮಲಿಂಗಾ ರೆಡ್ಡಿ ಆರೋಪಿಸಿದ್ದಾರೆ. ಇದು ಪ್ರಜಾಪ್ರಭುತ್ವ ಮತ್ತು ಜನರ ಮೂಲಭೂತ ಹಕ್ಕುಗಳ ಮೇಲಿನ ದಾಳಿ. ಮತದಾರರ ಹಕ್ಕುಗಳು ಹಾಗೂ ಸಂವಿಧಾನಿಕ ಮೌಲ್ಯಗಳನ್ನು ರಕ್ಷಿಸಲು ಎಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು ಎಂದು ಅವರು ಹೇಳಿದ್ದಾರೆ. ಪೊಲೀಸ್ ಆಯುಕ್ತರ ಕಚೇರಿ ಮೆಟ್ಟಿಲುಗಳ ಮೇಲೆ ಕುಳಿತು ಪ್ರತಿಭಟನೆ ನಡೆಸುವುದನ್ನು ರಾಜಕೀಯ ತಂತ್ರ ಎಂದು ಟೀಕಿಸಿರುವ ಅವರು, ಜವಾಬ್ದಾರಿಯುತ ವಿರೋಧ ಪಕ್ಷವಾಗಿ ವರ್ತಿಸುವಂತೆ ಬಿಜೆಪಿ ನಾಯಕರಿಗೆ ಸಲಹೆ ನೀಡಿದ್ದಾರೆ.

# ಫಾರ್ಮ್–7 ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ವಿರುದ್ಧದ ಪ್ರಕರಣ ಹಿಂಪಡೆಯಿರಿ: ಬಿ.ವೈ.ವಿಜಯೇಂದ್ರ ಆಗ್ರಹ

ಬೆಂಗಳೂರು, ಅ.3: ಚುನಾವಣಾ ಆಯೋಗದ ನಿಯಮಾನುಸಾರ ಫಾರ್ಮ್–7 ಸಲ್ಲಿಸಿದ ಬಿಜೆಪಿ ಕಾರ್ಯಕರ್ತರ ಮೇಲೆ ರಾಜ್ಯ ಸರ್ಕಾರ ಪೊಲೀಸ್ ಇಲಾಖೆಯ ಮೂಲಕ ಎಫ್ಐಆರ್ ದಾಖಲಿಸಿರುವುದು ಖಂಡನೀಯ. ಈ ಪ್ರಕರಣಗಳನ್ನು ಕೂಡಲೇ ಹಿಂಪಡೆಯಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಗ್ರಹಿಸಿದ್ದಾರೆ.

ರಾಜ್ಯದ ಪೊಲೀಸ್ ಮಹಾನಿರ್ದೇಶಕರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಹಾಗೂ ಸಚಿವರು ಚುನಾವಣಾ ಆಯೋಗದ ಮುಂದೆ ಧರಣಿ ನಡೆಸಿದ ಬಳಿಕ ಪೊಲೀಸರ ಮೇಲೆ ಒತ್ತಡ ಹೇರಿ ಫಾರ್ಮ್–7 ಸಲ್ಲಿಸಿದ ನಮ್ಮ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿದರು. ಫಾರ್ಮ್–7 ಸಲ್ಲಿಸುವುದು ಚುನಾವಣಾ ಆಯೋಗವೇ ನಾಗರಿಕರಿಗೆ ನೀಡಿರುವ ಕಾನೂನುಬದ್ಧ ಅವಕಾಶ. ಮತದಾರರ ಪಟ್ಟಿಯಲ್ಲಿ ಅನರ್ಹರು ಅಥವಾ ನಿಯಮಬಾಹಿರವಾಗಿ ಹೆಸರುಗಳಿದ್ದರೆ, ಯಾವುದೇ ವ್ಯಕ್ತಿ ಫಾರ್ಮ್–7 ಮೂಲಕ ಆಕ್ಷೇಪಣೆ ಸಲ್ಲಿಸಬಹುದು. ಅರ್ಜಿ ಪರಿಶೀಲಿಸಿದ ಬಳಿಕ ಅದು ಸರಿಯಾಗಿದ್ದರೆ ಚುನಾವಣಾ ಆಯೋಗ ಕ್ರಮ ಕೈಗೊಳ್ಳುತ್ತದೆ; ಆಕ್ಷೇಪಣೆ ಸಮರ್ಥವಾಗಿಲ್ಲದಿದ್ದರೆ ಅದನ್ನು ತಿರಸ್ಕರಿಸುತ್ತದೆ. ಇದು ಚುನಾವಣಾ ಪ್ರಕ್ರಿಯೆಯ ಸಹಜ ಭಾಗವಾಗಿದೆ ಎಂದು ವಿಜಯೇಂದ್ರ ವಿವರಿಸಿದರು. ಆದರೆ, ಈ ಪ್ರಕ್ರಿಯೆಯನ್ನು ದುರುಪಯೋಗಪಡಿಸಿಕೊಂಡು ಬಿಎನ್‌ಎಸ್ ಕಾಯ್ದೆಯಡಿ ಬಿಜೆಪಿ ಕಾರ್ಯಕರ್ತರ ಮೇಲೆ ಎಫ್ಐಆರ್ ದಾಖಲಿಸುವ ಮೂಲಕ ರಾಜ್ಯ ಸರ್ಕಾರ ಪೊಲೀಸ್ ಇಲಾಖೆಯನ್ನು ರಾಜಕೀಯವಾಗಿ ಬಳಸಿಕೊಳ್ಳುತ್ತಿದೆ ಎಂದು ಅವರು ಆರೋಪಿಸಿದರು.

### ಪೊಲೀಸ್ ಠಾಣೆಗಳ ಎದುರು ಪ್ರತಿಭಟನೆ ಎಚ್ಚರಿಕೆ

ನಮ್ಮ ಕಾರ್ಯಕರ್ತರ ರಕ್ಷಣೆಗೆ ಯಾವುದೇ ಹಂತಕ್ಕೂ ಹೋಗಲು ಸಿದ್ಧರಿದ್ದೇವೆ. ಅನ್ಯಾಯವಾಗಿ ದಾಖಲಿಸಿರುವ ಪ್ರಕರಣಗಳನ್ನು ಹಿಂಪಡೆಯಬೇಕು. ಇಲ್ಲವಾದರೆ ರಾಜ್ಯಾದ್ಯಂತ ಪೊಲೀಸ್ ಠಾಣೆಗಳ ಮುಂದೆ ಪ್ರತಿಭಟನೆ ನಡೆಸುವುದು ಸೇರಿದಂತೆ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ವಿಜಯೇಂದ್ರ, ಎಚ್ಚರಿಕೆ ನೀಡಿದರು.

# ಪ್ರವಾಸಿಗರ ಬಳಿಗೇ ಮಯೂರ ಹೋಟೆಲ್‌ಗಳ ರುಚಿ: ಸಚಿವ ಕೆ.ಜೆ. ಜಾರ್ಜ್

**ಬೆಂಗಳೂರು, ಅ.3:** ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಪ್ರವಾಸಿಗರಿಗೆ ಗುಣಮಟ್ಟದ, ಸ್ವಚ್ಛ ಮತ್ತು ರುಚಿಕರ ಆಹಾರವನ್ನು ಅವರು ಇರುವ ಸ್ಥಳದಲ್ಲೇ ಒದಗಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ಮಯೂರ ರುಚಿ ಆನ್ ವೀಲ್ಸ್ – ಸೇವೆಯನ್ನು ಆರಂಭಿಸಲು ನಿರ್ಧರಿಸಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಪ್ರವಾಸಿಗರು ಉತ್ತಮ ತಾಣವನ್ನು ನೋಡುವುದರ ಜೊತೆಗೆ ಉತ್ತಮ ಆಹಾರದ ಅನುಭವವನ್ನೂ ಪಡೆಯಬೇಕು. ಮಯೂರ ಹೋಟೆಲ್‌ಗಳ ರುಚಿ ಮತ್ತು ಗುಣಮಟ್ಟವನ್ನು ಪ್ರವಾಸಿಗರ ಬಳಿಗೇ ಕೊಂಡೊಯ್ಯುವ ಈ ಹೊಸ ಯೋಜನೆಯಿಂದ ಪ್ರವಾಸಿ ಅನುಭವ ಇನ್ನಷ್ಟು ಉತ್ತಮವಾಗಲಿದೆ. ಸ್ಥಳೀಯ ಆಹಾರಕ್ಕೂ ಉತ್ತೇಜನ ದೊರೆಯಲಿದ್ದು, ಉದ್ಯೋಗಾವಕಾಶಗಳು ಸೃಷ್ಟಿಯಾಗುವುದರ ಜೊತೆಗೆ ಕೆ.ಎಸ್.ಟಿ.ಡಿ.ಸಿಯ ಆದಾಯವನ್ನೂ



ಹೆಚ್ಚಿಸಲು ಇದು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ಕೆ.ಎಸ್.ಟಿ.ಡಿ.ಸಿ ಅಧ್ಯಕ್ಷ ಎಂ. ಶ್ರೀನಿವಾಸ್ ಮಾತನಾಡಿ, ಕೆ.ಎಸ್.ಟಿ.ಡಿ.ಸಿ ಮೊದಲ ಬಾರಿಗೆ ಇಂತಹ ಮೊಬೈಲ್ ಆಹಾರ ಸೇವಾ ಉಪಕ್ರಮವನ್ನು ಕೈಗೆತ್ತಿಕೊಳ್ಳುತ್ತಿದೆ. ಪ್ರವಾಸಿಗರು ಹೆಚ್ಚು ಸೇರುವ ಸ್ಥಳಗಳಲ್ಲಿ ಮಯೂರದ ಗುಣಮಟ್ಟದ ಆಹಾರ ಲಭ್ಯವಾಗುವಂತೆ ಮಾಡುವುದು ನಮ್ಮ ಗುರಿ. ಸ್ಥಳೀಯ ಖಾದ್ಯಗಳಿಗೆ ಆದ್ಯತೆ ನೀಡುವುದರಿಂದ ಸ್ಥಳೀಯರಿಗೆ ಉದ್ಯೋಗ ಮತ್ತು ವ್ಯಾಪಾರ ಅವಕಾಶಗಳೂ ಸೃಷ್ಟಿಯಾಗಲಿವೆ ಎಂದರು.

ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ರಾಮ್‌ಪ್ರಸಾತ್ ಮನೋಹರ್ ಮಾತನಾಡಿ, ಆಹಾರವು ಪ್ರವಾಸಿ ಅನುಭವದ ಪ್ರಮುಖ ಭಾಗವಾಗಿದೆ. 'ಮಯೂರ ರುಚಿ ಆನ್‌ವೀಲ್ಸ್' ಮೂಲಕ ಕೆಎಸ್‌ಟಿಡಿಸಿ ಆತಿಥ್ಯ ಸೇವೆಯನ್ನು ಹೋಟೆಲ್‌ಗಳ ಹೊರಗೂ ವಿಸ್ತರಿಸಲಾಗುತ್ತಿದೆ. ಸ್ಥಳೀಯ ಆಹಾರ ಸಂಸ್ಕೃತಿ, ಗುಣಮಟ್ಟದ ಸೇವೆ ಮತ್ತು ಪ್ರವಾಸಿಗರ ಅನುಕೂಲ ಈ ಮೂರನ್ನೂ ಒಂದೇ ವೇದಿಕೆಯಲ್ಲಿ ಜೋಡಿಸುವುದು ಈ ಯೋಜನೆಯ ಉದ್ದೇಶವಾಗಿದೆ ಎಂದರು.

### ಎಲ್ಲೆಲ್ಲಿ ಫುಡ್ ವ್ಯಾನ್ ನಿಯೋಜನೆ?

ಕೆ.ಎಸ್.ಟಿ.ಡಿ.ಸಿಯ ಮಯೂರ ಹೋಟೆಲ್‌ಗಳಲ್ಲಿ ತಯಾರಾಗುವ ಆಹಾರವನ್ನು ಹೋಟೆಲ್ ಆವರಣಕ್ಕೆ ಮಾತ್ರ ಸೀಮಿತಗೊಳಿಸದೆ, ಹೆಚ್ಚಿನ ಪ್ರವಾಸಿಗರು ಸೇರುವ ಪ್ರವಾಸಿ ತಾಣಗಳಿಗೆ ಕೊಂಡೊಯ್ಯುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಹಂಪಿ, ಮಡಿಕೇರಿ, ಜೋಗ್ ಫಾಲ್ಸ್, ಮೈಸೂರು, ನಂದಿಹಿಲ್ಸ್ ಹಾಗೂ ಬೆಂಗಳೂರಿನ ಪ್ರಮುಖ ಪ್ರವಾಸಿ ಪ್ರದೇಶಗಳಲ್ಲಿ ಹಂತ ಹಂತವಾಗಿ ಫುಡ್ ವ್ಯಾನ್‌ಗಳನ್ನು ನಿಯೋಜಿಸಲು ಯೋಜಿಸಲಾಗಿದೆ. ಕೆ.ಎಸ್.ಟಿ.ಡಿ.ಸಿ ರಾಜ್ಯಾದ್ಯಂತ 24 ಮಯೂರ ಹೋಟೆಲ್‌ಗಳನ್ನು ನಿರ್ವಹಿಸುತ್ತಿದ್ದು, ಕೆಲವು ಪ್ರವಾಸಿ ತಾಣಗಳಲ್ಲಿ ಹೋಟೆಲ್‌ಗಳು ಮುಖ್ಯ ಪ್ರವಾಸಿ ಕೇಂದ್ರಗಳಿಂದ ದೂರವಿವೆ. ಈ ಹಿನ್ನೆಲೆಯಲ್ಲಿ ಮಯೂರ ಹೋಟೆಲ್‌ಗಳ ಗುಣಮಟ್ಟದ ಆಹಾರವನ್ನು ನೇರವಾಗಿ ಪ್ರವಾಸಿಗರ ಬಳಿಗೆ ತಲುಪಿಸುವ ಹೊಸ ಮೊಬೈಲ್ ಸೇವಾ ಮಾದರಿಯನ್ನು ರೂಪಿಸಲಾಗಿದೆ. ಕರ್ನಾಟಕದ ವಿವಿಧ ಭಾಗಗಳ ಜನಪ್ರಿಯ ಉಪಾಹಾರ, ತಿಂಡಿ, ಊಟ ಹಾಗೂ ಆಯ್ದ ಪ್ರಾದೇಶಿಕ ಖಾದ್ಯಗಳನ್ನು ಮಯೂರ ರುಚಿ ಆನ್‌ವೀಲ್ಸ್ ಮೂಲಕ ಒದಗಿಸುವ ಉದ್ದೇಶವಿದ್ದು, ಪ್ರವಾಸಿಗರಿಗೆ ರಾಜ್ಯದ ಆಹಾರ ವೈವಿಧ್ಯವನ್ನೂ ಪರಿಚಯಿಸಲಾಗುವುದು.

# ಎಂಆರ್‌ಪಿಎಲ್‌ಗೆ ಟಿ.ಎಂ. ಶಾಹಿದ್ ತೆಕ್ಕಿಲ್ ಭೇಟಿ

## ಕಾರ್ಮಿಕರ ಮತ್ತು ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಲು ಸೂಚನೆ





**ಮಂಗಳೂರು, ಅ.3:** ಮಂಗಳೂರು ರಿಫೈನರಿ ಆಂಡ್ ಪೆಟ್ರೋಕೆಮಿಕಲ್ಸ್ ಲಿಮಿಟೆಡ್ (ಎಂಆರ್‌ಪಿಎಲ್) ಘಟಕದಲ್ಲಿ ಇತ್ತೀಚೆಗೆ ನಡೆದ ಸ್ಫೋಟದ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಅಧ್ಯಕ್ಷ (ಸಚಿವ ದರ್ಜೆ) ಟಿ.ಎಂ. ಶಾಹಿದ್ ತೆಕ್ಕಿಲ್ ಸಂಸ್ಥೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಘಟನಾ ಸ್ಥಳವನ್ನು ಪರಿಶೀಲಿಸಿದ ಬಳಿಕ ಮಾತನಾಡಿದ ಅವರು, ಘಟಕದಲ್ಲಿ ದುಡಿಯುವ ಕಾರ್ಮಿಕರ ಹಿತರಕ್ಷಣೆ ಮತ್ತು ಸಾರ್ವಜನಿಕರ ಸುರಕ್ಷತೆ ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ಕೈಗಾರಿಕಾ ಘಟಕದಲ್ಲಿ ಮತ್ತು ಪರಿಸರ ಪ್ರದೇಶಗಳಲ್ಲಿ ಸುರಕ್ಷತೆಗೆ ಪ್ರಥಮ ಆದ್ಯತೆ ಸಿಗಬೇಕು ಎಂದ ಅವರು, ಅಗ್ನಿಶಾಮಕ ಹಾಗೂ ರಕ್ಷಣಾ ದಳವು ಸದಾ ಜಾಗರೂಕರಾಗಿದ್ದು ಇಡೀ ಆವರಣದ ಮೇಲೆ ಮತ್ತು ಸುತ್ತುಮುತ್ತಲಿನ ಪ್ರದೇಶ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು ಎಂದು ಸೂಚಿಸಿದರು. ಕೆಲಸ ಮಾಡುವ ಯಾವುದೇ ಕಾರ್ಮಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಂಸ್ಥೆಯು ಅಗತ್ಯವಿರುವ ಎಲ್ಲಾ ರಕ್ಷಣಾ ಮುನ್ನೆಚ್ಚರಿಕೆಗಳನ್ನು ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಹಾಗೂ ಇಂತಹ ಅವಘಡಗಳು ಭವಿಷ್ಯದಲ್ಲಿ ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಆಡಳಿತ ಮಂಡಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ಎಂಆರ್‌ಪಿಎಲ್ ಸಂಸ್ಥೆಯ ಕಾರ್ಯವೈಖರಿಯನ್ನು ಶ್ಲಾಘಿಸಿದ ಟಿ.ಎಂ. ಶಾಹಿದ್ ತೆಕ್ಕಿಲ್, ಎಂಆರ್‌ಪಿಎಲ್ ದೇಶದ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಒಂದಾಗಿದ್ದು, ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸುಮಾರು ಒಂದು ಲಕ್ಷಕ್ಕೂ ಅಧಿಕ ಜನರಿಗೆ ಉದ್ಯೋಗಾವಕಾಶ ಒದಗಿಸಿ ಬದುಕು ರೂಪಿಸಿದೆ ಎಂದರು. ಕಂಪನಿಯ ಸಿಎಸ್‌ಆರ್ (ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ) ನಿಧಿಯ ಬಳಕೆಯು ವ್ಯವಸ್ಥಿತವಾಗಿದ್ದು, ಸ್ಥಳೀಯ ಸಮಾಜಮುಖಿ ಕಾರ್ಯಗಳು ಹಾಗೂ ಅಭಿವೃದ್ಧಿಗೆ ಸೂಕ್ತವಾಗಿ ವಿನಿಯೋಗವಾಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಮಿಕರ ಸುರಕ್ಷತೆಯನ್ನು ಖಾತ್ರಿಪಡಿಸಿ ಕೊಂಡು ಕೈಗಾರಿಕಾ ಪ್ರಗತಿ ಮುಂದುವರಿಯಬೇಕೆಂದು ಅವರು ಆಶಿಸಿದರು. ಈ ಸಂದರ್ಭದಲ್ಲಿ ಸತೀಶ್ ಎಂ., ಜಿ.ಎಂ. (ಎಚ್‌ಆರ್), ನವೀನ್‌ಚಂದ್ರ ಪೈ, ಸಿಜಿಎಂ, ಸೌಮ್ಯ ಚಂದ್ರಕರ್, ಜಿ.ಎಂ. (ಎಚ್.ಆರ್.ಕಾಂಟ್ರಾಕ್ಟ್ ಸೆಲ್), ಹಾಗೂ ಜಿ.ಮೀನಾಕ್ಷಿ, ಚೀಫ್ ಮ್ಯಾನೇಜರ್ – ಎಚ್ಆರ್ ಉಪಸ್ಥಿತರಿದ್ದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಅಕ್ಟೋಬರ್ 4 2026 ಭಾನುವಾರ

## ಒಳಪುಟಗಳಲ್ಲಿ

ಧರ್ಮಸ್ಥಳದಲ್ಲಿ 28ನೇ ವರ್ಷದ ಭಜನಾ ಕಮ್ಮಟ: ಇಂದು ಸಮಾರೋಪ ಸಮಾರಂಭ - ಪು.4

## ಏಷ್ಯನ್‌ಗೇಮ್ಸ್ ಪದಕ ವಿಜೇತೆ ಪೂವಮ್ಮ ಅವರಿಗೆ ಸಿಎಂ ಡಿಕೆಶಿ ಅಭಿನಂದನೆ



ಬೆಂಗಳೂರು, ಅ.3: ಏಷ್ಯನ್ ಗೇಮ್ಸ್‌ನ ಮಹಿಳೆಯರ 4/400 ಮೀಟರ್ ರಿಲೇ ಸ್ಪರ್ಧೆಯಲ್ಲಿ ಚಿನ್ನ ಹಾಗೂ ಮಿಶ್ರ 4/400 ಮೀಟರ್ ರಿಲೇ ಸ್ಪರ್ಧೆಯಲ್ಲಿ ಬೆಳ್ಳಿಪದಕ ಗೆದ್ದ ಕರ್ನಾಟಕದ ಓಟಗಾರ್ತಿ ಎಂ.ಆರ್.ಪೂವಮ್ಮ ಅವರಿಗೆ ಸಿಎಂ ಡಿ.ಕೆ. ಶಿವಕುಮಾರ್ ಅವರು ದೂರವಾಣಿ ಕರೆಮಾಡಿ ಅಭಿನಂದನೆ ಸಲ್ಲಿಸಿದರು. ಈ ಗಮನಾರ್ಹ ಸಾಧನೆಯನ್ನು ಶ್ಲಾಘಿಸಿದ ಅವರು, ಕರ್ನಾಟಕದ ಕ್ರೀಡಾಪಟುಗಳ ಪ್ರತಿಭೆಗೆ ಬೆಂಬಲ ನೀಡಲು ಹಾಗೂ ಅಥ್ಲೀಟ್‌ಗಳು ಇನ್ನಷ್ಟು ಉನ್ನತ ಎತ್ತರಕ್ಕೆ ಬೆಳೆಯಲು ಶಕ್ತಿ ತುಂಬಲು ಸರ್ಕಾರ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

# ರಾಜ್ಯಕ್ಕೆ 7,142.64 ಕೋಟಿ ರೂ. ಬರ ಪರಿಹಾರ ನೀಡಿ

## ಕೇಂದ್ರ ಬರ ಅಧ್ಯಯನ ತಂಡಕ್ಕೆ ಸಿಎಂ ಡಿ ಕೆ.ಶಿವಕುಮಾರ್ ಮನವಿ



ಬೆಂಗಳೂರು, ಅ.3: ಕರ್ನಾಟಕ ರಾಜ್ಯವು ತೀವ್ರ ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ರೈತರು, ಜನಸಾಮಾನ್ಯ ತೀವ್ರ ಸಂಕಷ್ಟಕ್ಕೊಳಗಾಗಿದ್ದಾರೆ. ಎನ್.ಡಿ.ಆರ್.ಎಫ್ ಮಾನದಂಡಗಳನ್ವಯ ರಾಜ್ಯಕ್ಕೆ 7,142.64 ಕೋಟಿ ರೂ. ಬರ ಪರಿಹಾರ ನೀಡಿ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಕೇಂದ್ರ ಬರ ಅಧ್ಯಯನ ತಂಡಕ್ಕೆ ಮನವಿ ಮಾಡಿದರು.

ಬರ ಅಧ್ಯಯನಕ್ಕೆ ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್ ಕುಮಾರ್ ಸಾಹು ನೇತೃತ್ವದ ಕೇಂದ್ರದ ಅಂತರಸಚಿವಾಲಯ ತಂಡದೊಂದಿಗೆ ಅವರು ಶನಿವಾರ ಗೃಹ ಕಚೇರಿ ಕೃಷ್ಣಾದಲ್ಲಿ ಸಮಾಲೋಚನೆ ನಡೆಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯಿಂದ 240 ತಾಲ್ಲೂಕುಗಳ ಪೈಕಿ 217 ತಾಲ್ಲೂಕುಗಳನ್ನು ಬರ ಪೀಡಿತವಾಗಿವೆ. ಅದರಲ್ಲಿ ಘೋಷಣೆಯಾಗಿರುವ 177 ತಾಲ್ಲೂಕುಗಳಲ್ಲಿ ಒಟ್ಟು 46,324.50 ಕೋಟಿ ರೂ. ನಷ್ಟವಾಗಿದೆ ಎಂದು ಅಂದಾಜಿಸಲಾಗಿದೆ. ಸರ್ಕಾರ ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ, 3,701 ಕೋಟಿ ರೂ. ಬರ ಪರಿಹಾರಕ್ಕೆ ಮನವಿ ಮಾಡಿತ್ತು. ಈಗ ಪರಿಷ್ಕೃತ ಪಟ್ಟಿಯಲ್ಲಿ ಘೋಷಣೆಯಾಗಿರುವ 177 ಬರ ಪೀಡಿತ ತಾಲ್ಲೂಕುಗಳಿಗೆ ಒಟ್ಟು 7,142.64 ಕೋಟಿ ರೂ. ಪರಿಹಾರಕ್ಕೆ ಮನವಿ ಮಾಡಲಾಗಿದೆ.

ರಾಜ್ಯದ ಕೃಷ್ಣಾ ಜಲಾನಯನ ಪ್ರದೇಶ ಹೊರತು ಪಡಿಸಿ ಎಲ್ಲ ಜಲಾಶಯಗಳಲ್ಲಿ ನೀರಿನ ಹರಿವು ಕಡಿಮೆ ಇದೆ. ಮಲೆನಾಡು, ಕರಾವಳಿ ಪ್ರದೇಶಗಳಲ್ಲಿಯೂ ಮಳೆಯ ತೀವ್ರ ಕೊರತೆಯಾಗಿದೆ. ಅದಾಗ್ಯೂ ಕಾವೇರಿ ನದಿಗೆ ನೀರು ಬಿಡುಗಡೆ ಮಾಡುವಂತೆ ಸಿಡಬ್ಲ್ಯುಸಿ ಆದೇಶ ನೀಡುತ್ತಿದೆ. ನಗರ ಪ್ರದೇಶಗಳಲ್ಲಿಯೂ ನೀರಿನ ಸಮಸ್ಯೆ ಎದುರಾಗಿದೆ. ರೈತರಿಗೆ ರಾಜ್ಯ ಸರ್ಕಾರದ ಹಂತದಲ್ಲಿ 2500 ರೂ. ಪರಿಹಾರ ಮೊತ್ತ ಘೋಷಿಸಲಾಗಿದೆ. ಆದರೆ ಕೇಂದ್ರದಿಂದ ಹೆಚ್ಚಿನ ಸಹಕಾರವನ್ನು ನಿರೀಕ್ಷಿಸುತ್ತಿದ್ದೇವೆ" ಎಂದರು.

ರಾಜ್ಯ ಸರ್ಕಾರದ ಎಲ್ಲ ಸಚಿವರೂ ಜಿಲ್ಲೆಗಳಿಗೆ ಭೇಟಿ ನೀಡಿ ವಸ್ತುಸ್ಥಿತಿ ಪರಿಶೀಲನೆ ನಡೆಸಿದ್ದಾರೆ. ಅಧಿಕಾರಿಗಳೂ ತಮ್ಮ ಇಲಾಖೆಗಳಿಗೆ ಸಂಬಂಧಿಸಿದಂತೆ ಮುನ್ನೆಚ್ಚರಿಕೆ, ಪರಿಹಾರ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ. ಮಾನ್ಯ ಪ್ರಧಾನಮಂತ್ರಿಯವರು ಬರ ಪರಿಸ್ಥಿತಿಯ ಕುರಿತು ರಾಜ್ಯಕ್ಕೆ ಭೇಟಿ ನೀಡಿದಾಗ ಮುನ್ನೆಚ್ಚರಿಕೆ ನೀಡಿದ್ದರು. ಅದರಂತೆ ನಾನೂ ಸಚಿವ ಸಂಪುಟ ಸಹೋದ್ಯೋಗಿಗಳು ಹಾಗೂ ಅಧಿಕಾರಿಗಳಿಗೆ ಸೂಚನೆ ನೀಡಿದ್ದೆನು. ರೈತರಿಗೂ ಬಿತ್ತನೆ ಕುರಿತು ಮಾರ್ಗದರ್ಶನ ನೀಡಲಾಗಿತ್ತು" ಎಂದು ವಿವರಿಸಿದರು.

ರೈತರು ತೀವ್ರ ಸಂಕಷ್ಟದಲ್ಲಿದ್ದಾರೆ. ಕಬ್ಬು ಬೆಳೆಗಾರರು ಹೆಚ್ಚಿನ ಬೆಲೆಗೆ ಒತ್ತಾಯಿಸುತ್ತಿದ್ದಾರೆ. ಅಂತೆಯೇ ಹಾಲು ಉತ್ಪಾದಕರೂ ಕನಿಷ್ಠ 10 ರೂ. ದರ ಏರಿಕೆಗೆ ಒತ್ತಾಯಿಸುತ್ತಿದ್ದಾರೆ. ಈ ಸವಾಲಿನ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜೊತೆಯಾಗಿ ಕೆಲಸ ಮಾಡೋಣ" ಎಂದು ಕರೆ ನೀಡಿದರು.

ಸಭೆಯಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಡಾ. ಉಮಾ ಮಹಾದೇವನ್, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ಮತ್ತು ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ವಸ್ತುನಿಷ್ಠ ವರದಿ ಸಲ್ಲಿಕೆ: ಕೇಂದ್ರ ತಂಡ ಮುಖ್ಯಸ್ಥರ ಭರವಸೆ

ಮುಖ್ಯಮಂತ್ರಿಗಳ ಮನವಿಗೆ ಪ್ರತಿಕ್ರಿಯೆ ನೀಡಿದ ಕೇಂದ್ರ ಬರ ಪರಿಸ್ಥಿತಿ ಅಧ್ಯಯನ ತಂಡದ ಮುಖ್ಯಸ್ಥ ಅಜಿತ್‌ಕುಮಾರ್ ಸಾಹು ಮಾತನಾಡಿ, ತಾವು ಮೂರು ದಿನಗಳ ಕಾಲ ರಾಜ್ಯದಲ್ಲಿ ಪ್ರವಾಸ ಮಾಡಿ ವಸ್ತುಸ್ಥಿತಿ ಅರಿಯುವುದರೊಂದಿಗೆ ದತ್ತಾಂಶಗಳನ್ನೂ ರಾಜ್ಯ ಸರ್ಕಾರದ ಅಧಿಕಾರಿಗಳಿಂದ ಪಡೆದುಕೊಂಡು ವಸ್ತುನಿಷ್ಠ ವರದಿ ಸಲ್ಲಿಸುವುದಾಗಿ ಭರವಸೆ ನೀಡಿದರು.

### ಕರ್ನಾಟಕಕ್ಕೆ ತುರ್ತು 3,705.30 ಕೋಟಿ ರೂ. ಬಿಡುಗಡೆ ಮಾಡುವಂತೆ ಪ್ರಧಾನಿಗೆ ಮಲ್ಲಿಕಾರ್ಜುನ ಖರ್ಗೆ ಪತ್ರ



ಕರ್ನಾಟಕ ತೀವ್ರ ಬರ ಪರಿಸ್ಥಿತಿ ಎದುರಿಸುತ್ತಿದ್ದು, ರಾಜ್ಯಕ್ಕೆ ತುರ್ತು ಕೇಂದ್ರ ನೆರವು ನೀಡುವಂತೆ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ಪತ್ರದಲ್ಲಿ ರಾಜ್ಯದ ಬರ ಪರಿಸ್ಥಿತಿಯ ಸಮಗ್ರ ಚಿತ್ರಣ ನೀಡಿರುವ ಖರ್ಗೆ, ಎನ್‌ಡಿಆರ್‌ಎಫ್ ಅಡಿ ಕರ್ನಾಟಕ ಸರ್ಕಾರ ಕೋರಿರುವ 3,705.30 ಕೋಟಿ ರೂ. ಕೇಂದ್ರ ಹಣಕಾಸು ನೆರವನ್ನು ಸಂಪೂರ್ಣವಾಗಿ ಹಾಗೂ ತಕ್ಷಣ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ. ಕರ್ನಾಟಕದಲ್ಲಿ ಸೆಪ್ಟೆಂಬರ್‌ವರೆಗೆ 58% ಮಳೆ ಕೊರತೆ ದಾಖಲಾಗಿದ್ದು, ರಾಜ್ಯದ 31 ಜಿಲ್ಲೆಗಳೂ ಮಳೆ ಕೊರತೆಯಿಂದ ಸಂತ್ರಸ್ತವಾಗಿವೆ. 240 ತಾಲೂಕುಗಳ ಪೈಕಿ 217 ತಾಲೂಕುಗಳು ಮಳೆ ಕೊರತೆ ಎದುರಿಸಿದ್ದು, 101 ತಾಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಿಸಲಾಗಿದೆ. ಇನ್ನೂ 116 ತಾಲೂಕುಗಳ ಪರಿಶೀಲನೆ ನಡೆಯುತ್ತಿದೆ ಎಂದು ಖರ್ಗೆ ವಿವರಿಸಿದ್ದಾರೆ.

# ಮತದಾನ ಬಡವರಿಗೆ ಅಧಿಕಾರ ನೀಡಿದೆ, ಹಕ್ಕು ಕಸಿಯುವ ಯತ್ನಕ್ಕೆ ವಿರೋಧ: ಮಲ್ಲಿಕಾರ್ಜುನ ಖರ್ಗೆ



ಕಲಬುರಗಿ, ಅ.3: ಮತದಾನದ ಹಕ್ಕು ಬಡವರಿಗೆ ಅಧಿಕಾರ ನೀಡಿದೆ. ಅದನ್ನು ಕಸಿಯುವ ಯಾವುದೇ ಪ್ರಯತ್ನವನ್ನು ವಿರೋಧಿಸುತ್ತೇವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಕಲಬುರಗಿಯಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ಹೆಸರಿನಲ್ಲಿ (ಎಸ್‌ಐಆರ್) ಒಂದು ಬಾರಿ ಮತದಾರರ ಹೆಸರು ಅಳಿಸುವುದು, ಮತ್ತೊಮ್ಮೆ ಸೇರಿಸುವ ಪ್ರಕ್ರಿಯೆ ನಡೆಯುತ್ತಿದೆ. ಇದರಿಂದ ಮತದಾನದ ಹಕ್ಕಿಗೆ ಧಕ್ಕೆಯಾಗುವ ಸಾಧ್ಯತೆ ಇದೆ. ಇದರ ವಿರುದ್ಧ ಹೋರಾಟ ಮುಂದುವರಿಸುತ್ತೇವೆ ಎಂದರು.

2023ರಲ್ಲಿ ಕೇಂದ್ರ ಸರ್ಕಾರ ಚುನಾವಣಾ ಆಯೋಗಕ್ಕೆ ಸಂಬಂಧಿಸಿದಂತೆ ಕಾನೂನಿನಲ್ಲಿ ಬದಲಾವಣೆ ತಂದಿದೆ. ಇದರಿಂದ ಚುನಾವಣಾ ಆಯುಕ್ತರ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶ ಕಡಿಮೆಯಾಗಿದೆ ಎಂದು ಆರೋಪಿಸಿದ ಅವರು, ಚುನಾವಣಾ ಆಯೋಗವು ಸರ್ಕಾರದ ಸೂಚನೆಯಂತೆ ಕಾರ್ಯನಿರ್ವಹಿಸುತ್ತಿದೆ ಎಂಬ ಅನುಮಾನ ಮೂಡಿದೆ ಎಂದರು.

ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಮತ್ತು ತೆಗೆದುಹಾಕಲು ಫಾರಂ 6 ಮತ್ತು 7 ಬಳಸಲಾಗುತ್ತಿದೆ. ಇದರಲ್ಲಿ ಅಕ್ರಮ ನಡೆಯದಂತೆ ಚುನಾವಣಾ ಆಯೋಗ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು ಎಂದು ಆಗ್ರಹಿಸಿದರು.

ಎಲೆಕ್ಟ್ರಾನಿಕ್ ಮತಯಂತ್ರಗಳ (ಇವಿಎಂ)ಬಗ್ಗೆ ಹಲವು ಅನುಮಾನಗಳಿವೆ. ಬಿಜೆಪಿ ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಿ ತೋರಿಸಲಿ. ದೇಶದಲ್ಲಿ ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಯಬೇಕು. ಚುನಾವಣೆಗಳಲ್ಲಿ ಅಕ್ರಮ ನಡೆದಿರುವುದು ಸಾಬೀತಾದರೆ,ಅಂತಹ ಚುನಾವಣೆಗಳನ್ನು ಮರುನಡೆಸಬೇಕು. ಪ್ರಜಾಪ್ರಭುತ್ವದ ವ್ಯವಸ್ಥೆಯನ್ನು ಬಲಪಡಿಸಲು ಎಲ್ಲರೂ ಜಾಗೃತರಾಗಬೇಕು ಎಂದರು.

ಕೇಂದ್ರ ಸರ್ಕಾರದ ಹಲವು ಕಾನೂನು ಬದಲಾವಣೆಗಳಿಗೆ ವಿರೋಧ ಪಕ್ಷಗಳ ಅಭಿಪ್ರಾಯವನ್ನು ಕಡೆಗಣಿಸಲಾಗಿದೆ. ಬಹುಮತದ ಆಧಾರದಲ್ಲಿ ಕಾಯ್ದೆಗಳನ್ನು ಅಂಗೀಕರಿಸುವ ಮೂಲಕ ಪ್ರಜಾಪ್ರಭುತ್ವದ ವ್ಯವಸ್ಥೆಗೆ ಧಕ್ಕೆ ತರುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ದೆಹಲಿ ಸೇರಿದಂತೆ ವಿವಿಧೆಡೆ ಪ್ರತಿಭಟನೆ ನಡೆಸುತ್ತಿರುವವರ ಬಂಧನದ ಬಗ್ಗೆಯೂ ಪ್ರತಿಕ್ರಿಯಿಸಿದ ಅವರು,ಎಷ್ಟೇ ಹೋರಾಟಗಾರರನ್ನು ಬಂಧಿಸಿದರೂ ನಮ್ಮ ಹೋರಾಟ ನಿಲ್ಲುವುದಿಲ್ಲ. ದೇಶದಾದ್ಯಂತ ಜನರು ಹೋರಾಟ ನಡೆಸುತ್ತಿದ್ದಾರೆ ಎಂದರು.

### ಪೈಲಟ್ ಸ್ಮಿತ್‌ಗೆ ಅಭಿನಂದನೆ

ವಿಮಾನ ಅಪಘಾತದ ಸಂದರ್ಭದಲ್ಲಿ ಪ್ರಯಾಣಿಕರ ಜೀವ ಉಳಿಸಿದ ಪೈಲಟ್ ಸ್ಮಿತ್ ಅವರನ್ನು ಅಭಿನಂದಿಸಿದ ಖರ್ಗೆ, ಅಂತಹ ಧೈರ್ಯಶಾಲಿ ವ್ಯಕ್ತಿ ಸಿಗುವುದು ವಿರಳ. ಅವರು ಭಾರತಕ್ಕೆ ಹೆಮ್ಮೆ ತಂದಿದ್ದಾರೆ. 172 ಜನರ ಪ್ರಾಣ ಉಳಿಸಿದ ಅವರಿಗೆ ಮೊದಲಿಗನಾಗಿ ರಾಹುಲ್ ಗಾಂಧಿ ಶುಭಾಶಯ ಕೋರಿದ್ದಾರೆ. ನಾನೂ ಅಭಿನಂದನೆ ಸಲ್ಲಿಸಿದ್ದೇನೆ. ಇಂತಹ ಮಗನನ್ನು ಹೆತ್ತ ತಂದೆ ತಾಯಿಗೂ ಅಭಿನಂದನೆಗಳು ಎಂದು ಹೇಳಿದರು.

# ಸತ್ಯಾಗ್ರಹ ಡಿಜಿಟಲ್ ವೇದಿಕೆ ಆರಂಭಿಸಿದ ರಾಹುಲ್ ಗಾಂಧಿ




ನವದೆಹಲಿ, ಅ.3: ದೇಶಾದ್ಯಂತ ಅನ್ಯಾಯದ ವಿರುದ್ಧ ನಡೆಯುತ್ತಿರುವ ಹೋರಾಟಗಳು ಹಾಗೂ ಪ್ರತಿಭಟನೆಗಳನ್ನು ಒಂದೇ ವೇದಿಕೆಯಲ್ಲಿ ದಾಖಲಿಸಿ, ಜನರ ಧ್ವನಿಯನ್ನು ರಾಷ್ಟ್ರೀಯ ಮಟ್ಟಕ್ಕೆ ತಲುಪಿಸುವ ಉದ್ದೇಶದಿಂದ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಸತ್ಯಾಗ್ರಹ ಹೆಸರಿನ ಹೊಸ ಡಿಜಿಟಲ್ ವೇದಿಕೆಯನ್ನು ಆರಂಭಿಸಿದ್ದಾರೆ.

ಮಹಾತ್ಮ ಗಾಂಧೀಜಿ ಜಯಂತಿ ಹಿನ್ನೆಲೆಯಲ್ಲಿ ವೇದಿಕೆ ಆರಂಭಿಸಲಾಗಿದ್ದು, ಸತ್ಯ, ಅಹಿಂಸೆ ಹಾಗೂ ಅನ್ಯಾಯದ ವಿರುದ್ಧ ನಿರ್ಭೀತ ಪ್ರತಿರೋಧದ ಆಶಯಗಳನ್ನು ಇಂದಿನ ಹೋರಾಟಗಳಿಗೆ ಸಂಪರ್ಕಿಸುವ ಉದ್ದೇಶ ಹೊಂದಿದೆ.

ದೇಶದ ವಿವಿಧ ಭಾಗಗಳಲ್ಲಿ ಜನರು ಅನ್ಯಾಯದ ವಿರುದ್ಧ ಧ್ವನಿ ಎತ್ತುತ್ತಿದ್ದಾರೆ. ಭೂಮಿ, ಮಹಿಳಾ ಹಕ್ಕುಗಳು, ದಲಿತರು, ಒಬಿಸಿ ಹಕ್ಕುಗಳು, ಶಿಕ್ಷಣ, ಪರೀಕ್ಷೆಗಳು ಸೇರಿದಂತೆ ಹಲವು ವಿಷಯಗಳಿಗೆ ಸಂಬಂಧಿಸಿದಂತೆ ಪ್ರತಿಭಟನೆಗಳು ನಡೆಯುತ್ತಿವೆ ಎಂದು ರಾಹುಲ್ ಗಾಂಧಿ ತಿಳಿಸಿದ್ದಾರೆ. ಇಂತಹ ವಿವಿಧ ಹೋರಾಟಗಳನ್ನು ಸಂಘಟಿಸಿ, ಒಂದೇ ನಕ್ಷೆಯಲ್ಲಿ ದಾಖಲಿಸಿ, ಹೋರಾಟಗಾರರೊಂದಿಗೆ ಕೈಜೋಡಿಸಿ ಅವರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ನೆರವಾಗುವುದು ವೇದಿಕೆಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

ಸತ್ಯಾಗ್ರಹ ವೆಬ್‌ಸೈಟ್ ಆರಂಭದ ಕುರಿತು ಮಾತನಾಡಿರುವ ರಾಹುಲ್ ಗಾಂಧಿ, ದೇಶದಾದ್ಯಂತ ಜನರು ಅನ್ಯಾಯದ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ. ಪ್ರತಿಪಕ್ಷ ನಾಯಕನಾಗಿ ಅವರ ಹೋರಾಟವೂ ತಮ್ಮ ಹೋರಾಟವೇ ಆಗಿದ್ದು, ಜನರು ತಾವು ಯಾವ ವಿಚಾರಕ್ಕಾಗಿ ಹೋರಾಡುತ್ತಿದ್ದಾರೆ ಎಂಬುದನ್ನು ತಿಳಿಸುವಂತೆ ಕರೆ ನೀಡಿದ್ದಾರೆ. ಜನರ ಸಮಸ್ಯೆಗಳನ್ನು ಆಲಿಸಲು ತಾವು ಸಿದ್ಧರಿರುವುದಾಗಿ ಹೇಳಿದ್ದಾರೆ.

ಸತ್ಯವನ್ನು ಹತ್ತಿಕ್ಕಲಾಗುತ್ತಿರುವ ಸಂದರ್ಭದಲ್ಲಿ ಜನರು ಪ್ರತಿರೋಧಿಸಲು ನೆರವಾಗುವುದು ಪ್ರತಿಪಕ್ಷ ನಾಯಕನಾಗಿ ತಮ್ಮ ಜವಾಬ್ದಾರಿ ಎಂದು ರಾಹುಲ್ ಗಾಂಧಿ ಹೇಳಿದ್ದಾರೆ. ದೇಶದಾದ್ಯಂತ ಸತ್ಯದ ಮಹತ್ವವಿದ್ದು, ದೇಶದ ಉನ್ನತ ಮಟ್ಟದಿಂದ ಹಿಡಿದು ಪ್ರತಿಯೊಂದು ಭಾಗದಲ್ಲೂ ಸತ್ಯಕ್ಕಾಗಿ ಹೋರಾಡುವುದು ಅಗತ್ಯ ಎಂದು ಪ್ರತಿಪಾದಿಸಿದ್ದಾರೆ.

ಸತ್ಯಾಗ್ರಹ ಮ್ಯಾಪ್‌ನಲ್ಲಿ ಸಮಸ್ಯೆಗಳ ದಾಖಲು

ಹೊಸ ಡಿಜಿಟಲ್ ವೇದಿಕೆಯ ಮೂಲಕ ನಾಗರಿಕರು ತಮ್ಮ ಸಮಸ್ಯೆಗಳನ್ನು ನೇರವಾಗಿ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಜನರು ತಮ್ಮ ಸಮಸ್ಯೆ, ತಮ್ಮ ಹಕ್ಕುಗಳಿಗೆ ಅಡ್ಡಿಯಾಗುತ್ತಿರುವ ವಿಚಾರ ಹಾಗೂ ಸಂಬಂಧಿಸಿದ ಮಾಹಿತಿಯನ್ನು ವೇದಿಕೆಯಲ್ಲಿ ಸಲ್ಲಿಸಬಹುದಾಗಿದೆ.

ವೇದಿಕೆಯಲ್ಲಿ ಸಲ್ಲಿಸಲಾದ ಪ್ರತಿಯೊಂದು ಸಮಸ್ಯೆಯೂ 'ಸತ್ಯಾಗ್ರಹ ಮ್ಯಾಪ್'ನಲ್ಲಿ ಪ್ರತ್ಯೇಕ ಪಿನ್ ಆಗಿ ಕಾಣಿಸಿಕೊಳ್ಳಲಿದೆ. ದೇಶದ ವಿವಿಧೆಡೆ ನ್ಯಾಯಕ್ಕಾಗಿ ನಡೆಯುತ್ತಿರುವ ಹೋರಾಟಗಳನ್ನು ಒಂದೇ ನಕ್ಷೆಯಲ್ಲಿ ತೋರಿಸುವ ಮೂಲಕ ಸ್ಥಳೀಯ ಸಮಸ್ಯೆಗಳನ್ನು ರಾಷ್ಟ್ರೀಯ ಮಟ್ಟದಲ್ಲಿ ಗಮನಕ್ಕೆ ತರುವ ಉದ್ದೇಶ ಹೊಂದಲಾಗಿದೆ. ಸಲ್ಲಿಕೆಯಾಗುವ ಸಮಸ್ಯೆಗಳ ಗಂಭೀರತೆಯನ್ನು ಆಧರಿಸಿ ವಿವಿಧ ಕ್ರಮಗಳನ್ನು ಕೈಗೊಳ್ಳಲಾಗುವುದು. ಜನರ ಧ್ವನಿ ಬೀದಿಯಿಂದ ಸಂಸತ್ತಿನವರೆಗೆ ತಲುಪುವಂತೆ ಮಾಡಲು ವೇದಿಕೆ ನೆರವಾಗಲಿದೆ ಎಂದು ಕಾಂಗ್ರೆಸ್ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಗಾಲ್ಫ್‌ನಲ್ಲಿ ಚಿನ್ನ ಗೆದ್ದ ಮೊದಲ ಭಾರತೀಯ ಮಹಿಳೆ ಏಷ್ಯನ್ ಗೇಮ್ಸ್‌ನಲ್ಲಿ ಇತಿಹಾಸ ಬರೆದ ಮೈಸೂರಿನ ಪ್ರಣವಿ



ಐಚಿ ನಗೋಯಾ, ಅ.3: ಏಷ್ಯನ್ ಗೇಮ್ಸ್‌ನ ಗಾಲ್ಫ್ ಸ್ಪರ್ಧೆಯಲ್ಲಿ ಮೈಸೂರು ಮೂಲದ 23 ವರ್ಷದ ಪ್ರಣವಿ ಅರಸ್ ಇತಿಹಾಸ ನಿರ್ಮಿಸಿದ್ದಾರೆ. ಏಷ್ಯನ್ ಗೇಮ್ಸ್‌ನ ಗಾಲ್ಫ್‌ನಲ್ಲಿ ಚಿನ್ನದ ಪದಕ ಗೆದ್ದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಶನಿವಾರ ನಡೆದ ಸ್ಪರ್ಧೆಯ ಅಂತಿಮ ಸುತ್ತಿನಲ್ಲಿ ಕೇವಲ ಒಂದು ಸ್ಟ್ರೋಕ್ ಮುನ್ನಡೆ ಕಾಯ್ದುಕೊಂಡು ಅವರು ಈ ಸಾಧನೆ ಮಾಡಿದರು. ಅವರ ಪ್ರದರ್ಶನದ ನೆರವಿನಿಂದ ಭಾರತ ತಂಡ ಬೆಳ್ಳಿ ಪದಕವನ್ನೂ ಗೆದ್ದುಕೊಂಡಿತು.

ಮೂರನೇ ಹೋಲ್‌ನಲ್ಲಿ ಮಾಡಿದ ಟ್ರಿಪಲ್ ಬೋಗಿಯಿಂದ ಮೂರು ಸ್ಟ್ರೋಕ್‌ಗಳ ಮುನ್ನಡೆ ಕಳೆದುಕೊಂಡಿದ್ದ ಪ್ರಣವಿ, ಬಳಿಕ ಮೂರು ಬರ್ಡಿಗಳನ್ನು ದಾಖಲಿಸಿ ಅದ್ಭುತವಾಗಿ ಪುಟಿದೆದ್ದರು.

ಅಂತಿಮ ಸುತ್ತಿನಲ್ಲಿ ಈವನ್-ಪಾರ್ 70 ಸ್ಕೋರ್ ದಾಖಲಿಸಿದ ಅವರು, ನಾಲ್ಕು ದಿನಗಳ ಒಟ್ಟು 15-ಅಂಡರ್ 265 ಸ್ಕೋರ್‌ನೊಂದಿಗೆ ಸ್ಪರ್ಧೆ ಮುಗಿಸಿದರು. ಎರಡನೇ ಸ್ಥಾನ ಪಡೆದವರಿಗಿಂತ ಒಂದು ಸ್ಟ್ರೋಕ್ ಮುನ್ನಡೆ ಸಾಧಿಸಿದರು.

ವರ ಪ್ರದರ್ಶನವು ಅದಿತಿ ಅಶೋಕ್ (ಅಂತಿಮ ಸುತ್ತಿನಲ್ಲಿ 67) ಮತ್ತು ದೀಕ್ಷಾ ದಾಗರ್ (77) ಅವರೊಂದಿಗೆ ಭಾರತ ತಂಡ ಬೆಳ್ಳಿ ಪದಕ ಗೆಲ್ಲುವಲ್ಲೂ ಪ್ರಮುಖ ಪಾತ್ರ ವಹಿಸಿತು.

ತಂಡದ ಪದಕ ನಿರ್ಧಾರಕ್ಕೆ ಇಬ್ಬರು ಆಟಗಾರ್ತಿಯರ ಅತ್ಯುತ್ತಮ ಸ್ಕೋರ್‌ಗಳನ್ನು ಪರಿಗಣಿಸಲಾಗುತ್ತದೆ. ಭಾರತ 14-ಅಂಡರ್ 546 ಸ್ಕೋರ್‌ನೊಂದಿಗೆ ಬೆಳ್ಳಿ ಪದಕ ಗೆದ್ದರೆ, 22-ಅಂಡರ್ 538 ಸ್ಕೋರ್ ದಾಖಲಿಸಿದ ಚೀನಾ ಚಿನ್ನದ ಪದಕ ತನ್ನದಾಗಿಸಿಕೊಂಡಿತು. 2002ರ ಏಷ್ಯನ್ ಗೇಮ್ಸ್‌ನಲ್ಲಿ ಪುರುಷರ ವೈಯಕ್ತಿಕ ವಿಭಾಗದಲ್ಲಿ ಶಿವ್ ಕಪೂರ್ ಚಿನ್ನ ಗೆದ್ದ ಬಳಿಕ, ಗಾಲ್ಫ್‌ನಲ್ಲಿ ಭಾರತಕ್ಕೆ ಒಲಿದ ಮೊದಲ ಚಿನ್ನದ ಪದಕ ಇದಾಗಿದೆ.

# ಏಷ್ಯನ್ ಕ್ರೀಡಾಕೂಟ: ಚಿನ್ನ ಗೆದ್ದ ಭಾರತದ ಪುರುಷರ ಹಾಕಿ ತಂಡ; ಒಲಿಂಪಿಕ್ಸ್‌ಗೆ ಅರ್ಹತೆ



ಐಚಿ-ನಗೋಯಾ, ಅ.3: ಏಷ್ಯನ್ ಕ್ರೀಡಾಕೂಟದ ಪುರುಷರ ಹಾಕಿ ಅಂತಿಮ ಪಂದ್ಯದಲ್ಲಿ ಮಲೇಷ್ಯಾವನ್ನು 5-1 ಅಂತರದಿಂದ ಭರ್ಜರಿಯಾಗಿ ಸೋಲಿಸಿದ ಭಾರತ ತಂಡ ಸತತ ಎರಡನೇ ಬಾರಿಗೆ ಚಿನ್ನದ ಪದಕವನ್ನು ಗೆದ್ದುಕೊಂಡಿತು.

ಈ ಕ್ರೀಡಾಕೂಟದ ಇತಿಹಾಸದಲ್ಲಿ ಭಾರತ ಈ ವಿಭಾಗದಲ್ಲಿ ತನ್ನ ಚಿನ್ನದ ಪದಕವನ್ನು ಉಳಿಸಿಕೊಂಡಿರುವುದು ಇದೇ ಮೊದಲು. ಈ ಗೆಲುವಿನೊಂದಿಗೆ, ಭಾರತ 2028 ಒಲಿಂಪಿಕ್ಸ್‌ನಲ್ಲಿ ನೇರ ಅರ್ಹತೆಯನ್ನು ಖಚಿತಪಡಿಸಿಕೊಂಡಿದೆ.

ನಾಯಕ ಹರ್ಮನ್‌ಪ್ರೀತ್ ಸಿಂಗ್ 11ನೇ ನಿಮಿಷದಲ್ಲಿ ಪೆನಾಲ್ಟಿ ಕಾರ್ನರ್ ಡ್ರ್ಯಾಗ್ ಫ್ಲಿಕ್ ಮೂಲಕ ಗೋಲು ಗಳಿಸಿ ಖಾತೆ ತೆರೆದರು, ಆದರೆ 14ನೇ ನಿಮಿಷದಲ್ಲಿ ಮಲೇಷ್ಯಾದ ಶೆಲ್ಲೊ ಸಿಲ್ವೆರಿಯಸ್ ಗೋಲು ಗಳಿಸಿ ಮೊದಲ ಕ್ವಾರ್ಟರ್ ಅಂತ್ಯಕ್ಕೆ ಸ್ಕೋರ್ ಅನ್ನು 1-1 ಸಮಬಲಗೊಳಿಸಿದರು.

ಎರಡನೇ ಕ್ವಾರ್ಟರ್‌ನಲ್ಲಿ ಜುಗ್ರಾಜ್ ಸಿಂಗ್ ಪೆನಾಲ್ಟಿ ಕಾರ್ನರ್ ಗೋಲಾಗಿ ಪರಿವರ್ತಿಸುವ ಮೂಲಕ ಭಾರತಕ್ಕೆ ಮತ್ತೆ ಮುನ್ನಡೆ ತಂದುಕೊಟ್ಟರು; ಇದರೊಂದಿಗೆ ಹಾಲಿ ಚಾಂಪಿಯನ್ ಭಾರತ ತಂಡ 2-1 ಮುನ್ನಡೆಯೊಂದಿಗೆ ವಿರಾಮಕ್ಕೆ ತೆರಳಿತು. ನಂತರ ಮೂರನೇ ಕ್ವಾರ್ಟರ್‌ನ 12ನೇ ನಿಮಿಷದಲ್ಲಿ ಹಾರ್ದಿಕ್ ಸಿಂಗ್ ಪೆನಾಲ್ಟಿ ಸ್ಟ್ರೋಕ್ ಗೋಲಾಗಿ ಪರಿವರ್ತಿಸಿ ಭಾರತದ ಮುನ್ನಡೆಯನ್ನು 3-1ಕ್ಕೆ ಹೆಚ್ಚಿಸಿದರು.

ಒಂದೇ ಏಷ್ಯನ್ ಕ್ರೀಡಾಕೂಟದಲ್ಲಿ ಭಾರತದ ಪುರುಷರ ಮತ್ತು ಮಹಿಳೆಯರ ತಂಡಗಳು ಚಿನ್ನದ ಪದಕಗಳನ್ನು ಗೆದ್ದಿರುವುದು ಕೂಡ ಇದೇ ಮೊದಲು.

# ಎಸ್‌ಐಆರ್ ಅಕ್ರಮ ತನಿಖೆಗೆ ಎಸ್‌ಐಟಿ ರಚಿಸಲು ಕರ್ನಾಟಕ ಸರ್ಕಾರ ಚಿಂತನೆ

ಬೆಂಗಳೂರು, ಅ.3: ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ನಡೆಸಲು ವಿಶೇಷ ತನಿಖಾ ತಂಡ ರಚಿಸುವ ಬಗ್ಗೆ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.

ಈ ಸಂಬಂಧ ಮಂಗಳವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಚರ್ಚೆ ನಡೆಯುವ ಸಾಧ್ಯತೆ ಇದ್ದು, ಸಂಪುಟ ಸಚಿವರ ಅಭಿಪ್ರಾಯ ಪಡೆದು ಮುಂದಿನ ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಿದೆ. ಎಸ್‌ಐಟಿ ರಚನೆಗೆ ಸಂಬಂಧಿಸಿದ ಪ್ರಸ್ತಾವನೆ ಈಗಾಗಲೇ ಸಂಪುಟದ ಕಾರ್ಯಸೂಚಿಯಲ್ಲಿ ಸೇರಿಸಲಾಗಿದೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕಲು ಪ್ರಯತ್ನಿಸಲಾಗಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಕೆಲವರು ದೂರುಗಳನ್ನು ಸಲ್ಲಿಸಿದ್ದಾರೆ. ಐವರು ಖಾಸಗಿ ವ್ಯಕ್ತಿಗಳಿಂದ ದೂರುಗಳು ಬಂದಿದ್ದು, ಈ ಸಂಬಂಧ ಎಫ್‌ಐಆರ್ ದಾಖಲಾಗುವ ಸಾಧ್ಯತೆಯೂ ಇದೆ.

ಎಫ್‌ಐಆರ್ ದಾಖಲಾದ ಬಳಿಕ ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಯನ್ನು ಪಡೆದು, ತನಿಖೆಯ ಸ್ವರೂಪ ಹಾಗೂ ಎಸ್‌ಐಟಿ ರಚನೆಯ ಕುರಿತು ಸರ್ಕಾರ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಈ ಕುರಿತು ಮಾಹಿತಿ ನೀಡುವಂತೆ ಕಂದಾಯ ಮತ್ತು ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ.

ಎಸ್‌ಐಟಿ ರಚಿಸಿದಲ್ಲಿ ಹಿರಿಯ ಪೊಲೀಸ್ ಅಧಿಕಾರಿಯ ನೇತೃತ್ವದಲ್ಲಿ ತನಿಖೆ ನಡೆಸುವ ಸಾಧ್ಯತೆಯಿದ್ದು, ಎಡಿಜಿಪಿ ಮಟ್ಟದ ಅಧಿಕಾರಿಯನ್ನು ನೇಮಿಸುವ ಬಗ್ಗೆಯೂ ಚರ್ಚೆ ನಡೆದಿದೆ ಎಂದು ಮೂಲಗಳು ಹೇಳಿವೆ.

ಈ ನಡುವೆ, ಅಳಂದ ಪ್ರಕರಣಕ್ಕೆ ಸಂಬಂಧಿಸಿದ ತನಿಖಾ ಪ್ರಗತಿಯ ಬಗ್ಗೆಯೂ ಸಿಎಂ ಮಾಹಿತಿ ಪಡೆದಿದ್ದಾರೆ. ಎಸ್‌ಐಆರ್‌ಗೆ ಸಂಬಂಧಿಸಿದ ದೂರುಗಳು ಹಾಗೂ ಈಗಾಗಲೇ ನಡೆದಿರುವ ತನಿಖೆಗಳ ಮಾಹಿತಿಯನ್ನು ಪರಿಶೀಲಿಸಿದ ಬಳಿಕ ಸರ್ಕಾರ ಮುಂದಿನ ಹೆಜ್ಜೆ ಇಡುವ ಸಾಧ್ಯತೆ ಇದೆ.

# ಲಾಭದತ್ತ ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ-ಉಕ್ಕು ಕಾರ್ಖಾನೆ: ಎಚ್‌ಡಿಕೆ

### ಪ್ರಧಾನಿ ಮೋದಿ ನೇತೃತ್ವದಲ್ಲಿ ವಿಐಎಸ್‌ಎಲ್ ಚೇತರಿಕೆ: ಎಚ್.ಡಿ.ಕುಮಾರಸ್ವಾಮಿ ಅಭಿನಂದನೆ



ನವದೆಹಲಿ, ಅ.3: ನಿರಂತರ ನಷ್ಟದ ಸುಳಿಗೆ ಸಿಲುಕಿದ್ದ ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ ಇದೀಗ ಲಾಭದತ್ತ ಮುಖಮಾಡಿದೆ. ಎಚ್.ಡಿ. ಕುಮಾರಸ್ವಾಮಿ ಅವರು ಕೇಂದ್ರದ ಉಕ್ಕು ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಕೈಗೊಂಡ ಸುಧಾರಣಾ ಕ್ರಮಗಳು ಹಾಗೂ ಕಾರ್ಖಾನೆಗೆ ನೀಡಿದ ನಿರಂತರ ಭೇಟಿಗಳ ಹಿನ್ನೆಲೆಯಲ್ಲಿ ಈ ಕಾರ್ಖಾನೆಯು ಇದೀಗ ಪುಟಿದೆದ್ದಿದ್ದು, ಕಳೆದ ಮೂರು ತಿಂಗಳಿಂದ ಸತತ ಲಾಭದ ದಾರಿಯಲ್ಲಿ ಸಾಗಿಬರುತ್ತಿದೆ. ಈ ಬಗ್ಗೆ ಸಚಿವರು ಸಂತಸ ವ್ಯಕ್ತಪಡಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತದ ಉಕ್ಕು ವಲಯ ಮತ್ತು ಅದರ ಸಂಸ್ಥೆಗಳನ್ನು ಬಲಪಡಿಸುವತ್ತ ಕೇಂದ್ರ ಸರಕಾರ ನಿರಂತರವಾಗಿ ಗಮನಹರಿಸುತ್ತಿದೆ. ಈ ಹಿನ್ನೆಲೆಯಲ್ಲಿ ಕಾರ್ಖಾನೆಯು ಇತ್ತೀಚಿನ ಕಾರ್ಯಕ್ಷಮತೆಯು ಒಂದು ಉತ್ತೇಜಕ ಬೆಳವಣಿಗೆಯಾಗಿದ್ದು, ಘಟಕವು ಸತತ ಮೂರು ತಿಂಗಳುಗಳ ಕಾಲ ನಿವ್ವಳ ಲಾಭವನ್ನು ದಾಖಲಿಸಿದೆ ಎಂದು ತಿಳಿಸಿದ್ದಾರೆ. ಕಾರ್ಖಾನೆಯು ಜುಲೈ 2026ರಲ್ಲಿ 0.33 ಕೋಟಿ, ಆಗಸ್ಟ್‌ನಲ್ಲಿ 1.71 ಕೋಟಿ ಮತ್ತು ಸೆಪ್ಟೆಂಬರ್ 2026ರಲ್ಲಿ 1.96 ಕೋಟಿ ನಿವ್ವಳ ಲಾಭವನ್ನು ದಾಖಲಿಸಿದೆ. ಈ ಸುಧಾರಣೆಯು ವಿಶೇಷವಾಗಿ ಸೆಪ್ಟೆಂಬರ್‌ನಲ್ಲಿ ಎದ್ದು ಕಾಣುವಂತಿತ್ತು. 2025ರ ಇದೇ ಅವಧಿಯಲ್ಲಿದ್ದ 27.48 ಕೋಟಿಗೆ ಹೋಲಿಸಿದರೆ, ಸೆಪ್ಟೆಂಬರ್ 2026ರಲ್ಲಿ ಕಾರ್ಖಾನೆಯ ನಿವ್ವಳ ಆದಾಯವು 51.87 ಕೋಟಿಗೆ ಏರಿಕೆಯಾಗಿದೆ. ಅಲ್ಲದೆ, 2025ರ ಸೆಪ್ಟೆಂಬರ್‌ನಲ್ಲಿ ದಾಖಲಾಗಿದ್ದ 3.78 ಕೋಟಿ ನಷ್ಟಕ್ಕೆ ವ್ಯತಿರಿಕ್ತವಾಗಿ, ಈ ವರ್ಷದ ಸೆಪ್ಟೆಂಬರ್‌ನಲ್ಲಿ ಘಟಕವು 1.96 ಕೋಟಿ ನಿವ್ವಳ ಲಾಭವನ್ನು ದಾಖಲಿಸಿದೆ ಎಂದು ಎಚ್‌ಡಿಕೆ ವಿವರಿಸಿದ್ದಾರೆ.

### ಏಷ್ಯನ್ ಗೇಮ್ಸ್ ಕ್ರಿಕೆಟ್: ಸತತ 2ನೇ ಬಾರಿ ಚಿನ್ನ ಗೆದ್ದ ಭಾರತ



ನಿಸ್ಸಿನ್‌ನ ಕೊರೋಗಿ ಸ್ಪೋರ್ಟ್ಸ್ ಪಾರ್ಕ್‌ನಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಪಾಕಿಸ್ತಾನದ ವಿರುದ್ಧ 19 ರನ್‌ಗಳ ರೋಚಕ ಜಯ ಸಾಧಿಸುವ ಮೂಲಕ ಭಾರತವು ಏಷ್ಯನ್ ಗೇಮ್ಸ್ ಪುರುಷರ ಕ್ರಿಕೆಟ್ ಚಿನ್ನದ ಪದಕವನ್ನು ಉಳಿಸಿಕೊಂಡಿತು. ಚಿನ್ನದ ಪದಕ ವಿಜೇತ ಭಾರತೀಯ ತಂಡದ ಸದಸ್ಯರು ವೇದಿಕೆಯ ಮೇಲೆ ಕಂಡ ಕ್ಷಣ.

# ರೆಪೊ ದರ ಶೇ.0.25 ಹೆಚ್ಚಳಕ್ಕೆ ಆರ್‌ಬಿಐ ಒಲವು

**ನವದೆಹಲಿ, ಅ.3:** ದೇಶದಲ್ಲಿ ಏರಿಕೆಯಾಗುತ್ತಿರುವ ಹಣದುಬ್ಬರವನ್ನು ನಿಯಂತ್ರಿಸುವ ಉದ್ದೇಶದಿಂದ ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ರೆಪೊ ದರವನ್ನು ಮತ್ತೆ 25 ಮೂಲಾಂಶಗಳಷ್ಟು (ಬೇಸಿಸ್ ಪಾಯಿಂಟ್ಸ್ 0.25%) ಹೆಚ್ಚಿಸುವ ಸಾಧ್ಯತೆಯಿದೆ. ಒಂದು ವೇಳೆ ಈ ಪರಿಷ್ಕರಣೆಯಾದಲ್ಲಿ, ಪ್ರಸ್ತುತ ಇರುವ ರೆಪೊ ದರವು ಶೇ. 5.5ಕ್ಕೆ ತಲುಪುವ ನಿರೀಕ್ಷೆಯಿದೆ.




ಗೃಹ, ವಾಹನ ಅಥವಾ ವೈಯಕ್ತಿಕ ಸಾಲ ಪಡೆದವರ ಮೇಲೆ ಈ ನಿರ್ಧಾರ ನೇರ ಪರಿಣಾಮ ಬೀರಲಿದೆ. ವಾಣಿಜ್ಯ ಬ್ಯಾಂಕುಗಳಿಗೆ ಆರ್‌ಬಿಐ ನೀಡುವ ಅಲ್ಪಾವಧಿ ಸಾಲದ ಮೇಲಿನ ಬಡ್ಡಿ ದರವನ್ನು ರೆಪೊ ದರ ಎಂದು ಕರೆಯಲಾಗುತ್ತದೆ. ಇದೀಗ ಆರ್‌ಬಿಐ ರೆಪೊ ದರವನ್ನು ಏರಿಕೆ ಮಾಡಿದರೆ, ವಾಣಿಜ್ಯ ಬ್ಯಾಂಕುಗಳು ಸಹಜವಾಗಿಯೇ ಗ್ರಾಹಕರಿಗೆ ನೀಡುವ ಸಾಲಗಳ ಮೇಲಿನ ಬಡ್ಡಿದರವನ್ನೂ ಹೆಚ್ಚಿಸಲಿವೆ. ಇದರ ಪರಿಣಾಮವಾಗಿ, ಸಾಲ ಪಡೆದಿರುವ ಸಾಮಾನ್ಯ ಗ್ರಾಹಕರ ಮಾಸಿಕ ಕಂತಿನ (ಇಎಂಐ) ಮೊತ್ತ ಮತ್ತಷ್ಟು ದುಬಾರಿಯಾಗಲಿದೆ.

ನಿರಂತರವಾಗಿ ಏರಿಕೆಯಾಗುತ್ತಿರುವ ಬೆಲೆಗಳು ಮತ್ತು ಹಣದುಬ್ಬರವೇ ಆರ್‌ಬಿಐನ ಈ ಸಂಭಾವ್ಯ ನಡೆಗೆ ಪ್ರಮುಖ ಕಾರಣವಾಗಿದೆ. ಮಾರುಕಟ್ಟೆಯಲ್ಲಿರುವ ಚಿಲ್ಲರೆ ಹಣದುಬ್ಬರವನ್ನು ತನ್ನ ನಿಗದಿತ ಮಿತಿಯೊಳಗೆ ತರಲು ಆರ್‌ಬಿಐನ ಹಣಕಾಸು ನೀತಿ ಸಮಿತಿ (ಎಂಪಿಸಿ) ಈ ಕಠಿಣ ಹೆಜ್ಜೆ ಇಡಲು ಮುಂದಾಗಿದೆ ಎಂದು ಆರ್ಥಿಕ ತಜ್ಞರು ವಿಶ್ಲೇಷಿಸಿದ್ದಾರೆ. ಮಾರುಕಟ್ಟೆಯಲ್ಲಿನ ನಗದು ಹರಿವನ್ನು ಕಡಿಮೆ ಮಾಡುವ ಮೂಲಕ ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಕಡಿವಾಣ ಹಾಕುವುದು ಇದರ ಹಿಂದಿನ ಪ್ರಮುಖ ಉದ್ದೇಶವಾಗಿದೆ.

ಜಾಗತಿಕ ಮಟ್ಟದಲ್ಲಿಯೂ ಹಲವು ಕೇಂದ್ರೀಯ ಬ್ಯಾಂಕುಗಳು ಆರ್ಥಿಕತೆಯನ್ನು ಸರಿದಾರಿಗೆ ತರಲು ಮತ್ತು ಹಣದುಬ್ಬರವನ್ನು ಹತ್ತಿಕ್ಕಲು ಬಡ್ಡಿದರ ಹೆಚ್ಚಳದ ಮೊರೆ ಹೋಗುತ್ತಿವೆ. ಇದೀಗ ಅದೇ ಹಾದಿಯಲ್ಲಿ ಸಾಗುತ್ತಿರುವ ಆರ್‌ಬಿಐ, ಆರ್ಥಿಕ ಬೆಳವಣಿಗೆ ಹಾಗೂ ಬೆಲೆ ಏರಿಕೆ ನಿಯಂತ್ರಣದ ನಡುವೆ ಸಮತೋಲನ ಕಾಯ್ದುಕೊಳ್ಳಲು ಈ ನಿರ್ಧಾರ ಕೈಗೊಳ್ಳುವ ಸಾಧ್ಯತೆ ದಟ್ಟವಾಗಿದೆ. ಮುಂಬರುವ ಆರ್‌ಬಿಐ ಹಣಕಾಸು ನೀತಿ ಪರಾಮರ್ಶೆ ಸಭೆಯಲ್ಲಿ ಈ ಬಗ್ಗೆ ಅಧಿಕೃತ ಪ್ರಕಟಣೆ ಹೊರಬೀಳುವ ನಿರೀಕ್ಷೆಯಿದೆ.

# ರಾಮಮಂದಿರದಲ್ಲಿ ಮಿಲಿಟರಿ ಮಾದರಿ ಶಿಸ್ತು

**ಅಯೋಧ್ಯೆ, ಅ.3:** ಕಾಣಿಕೆ ಹಣ ಕಳ್ಳತನದ ಘಟನೆ ಬಳಿಕ ಅಯೋಧ್ಯೆಯ ರಾಮಮಂದಿರದ ಆಡಳಿತ ವ್ಯವಸ್ಥೆಯಲ್ಲಿ ಹಲವು ಮಹತ್ವದ ಬದಲಾವಣೆಗಳನ್ನು ಜಾರಿಗೆ ತರಲು ಸಿದ್ಧತೆ ನಡೆದಿದೆ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿತೇಂದ್ರ ಮಿಶ್ರಾ ಅಧಿಕಾರ ವಹಿಸಿಕೊಂಡ ಬಳಿಕ ದೇವಾಲಯದ ಸಿಬ್ಬಂದಿ ನಿರ್ವಹಣೆ, ಭದ್ರತೆ, ಕಣ್ಗಾವಲು ಹಾಗೂ ಕಾಣಿಕೆ ಹಣದ ಎಣಿಕೆ ವ್ಯವಸ್ಥೆಯಲ್ಲಿ ಕಟ್ಟುನಿಟ್ಟಿನ ನಿಯಮಗಳನ್ನು ರೂಪಿಸಲಾಗುತ್ತಿದೆ. ದೇವಾಲಯದಲ್ಲಿ ಕಾರ್ಯನಿರ್ವಹಿಸುವ ಪ್ರತಿಯೊಬ್ಬ ಸಿಬ್ಬಂದಿಗೂ ಡಿಜಿಟಲ್ ಪ್ರೊಫೈಲ್ ಸಿದ್ಧಪಡಿಸಲು ನಿರ್ಧರಿಸಲಾಗಿದೆ. ನೇಮಕಾತಿ, ಹುದ್ದೆ, ಕರ್ತವ್ಯ, ನಿಯೋಜನೆ ಹಾಗೂ ಹಾಜರಾತಿ ಸೇರಿದಂತೆ ಸಿಬ್ಬಂದಿಯ ಸಂಪೂರ್ಣ ಮಾಹಿತಿಯನ್ನು ಡಿಜಿಟಲ್ ವ್ಯವಸ್ಥೆಯಲ್ಲಿ ದಾಖಲಿಸಲಾಗುತ್ತದೆ. ಸಿಬ್ಬಂದಿಯ ಕರ್ತವ್ಯ ಮತ್ತು ನಿಯೋಜನೆಗಳ ಮೇಲೂ ಸಾಫ್ಟ್‌ವೇರ್ ಮೂಲಕ ನಿಗಾ ಇರಿಸಲಾಗುತ್ತದೆ. ದೇವಾಲಯದಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬ ಸಿಬ್ಬಂದಿಗೂ ಪೊಲೀಸ್ ಪರಿಶೀಲನೆ ಕಡ್ಡಾಯಗೊಳಿಸಲಾಗುತ್ತಿದೆ. ಪರಿಶೀಲನೆ ಪೂರ್ಣಗೊಳ್ಳದೆ ಯಾರಿಗೂ ದೇವಾಲಯದಲ್ಲಿ ಸೇವೆ ಸಲ್ಲಿಸಲು ಅವಕಾಶ ನೀಡಲಾಗುವುದಿಲ್ಲ. ಸಿಬ್ಬಂದಿಯ ಸಂಬಂಧಿಕರು ಮತ್ತು ಕುಟುಂಬದವರ ವಿವರಗಳನ್ನೂ ದಾಖಲಿಸುವ ವ್ಯವಸ್ಥೆ ಮಾಡಲಾಗುತ್ತಿದೆ. ಅಗತ್ಯವಿದ್ದಲ್ಲಿ ಸಿಬ್ಬಂದಿಯ ಮೊಬೈಲ್ ಫೋನ್‌ಗಳನ್ನು ನಿಯಮಿತವಾಗಿ ಪರಿಶೀಲಿಸುವ ಯೋಜನೆಯೂ ಇದೆ. ಪ್ರತಿಯೊಂದು ಇಲಾಖೆಗೆ ಪ್ರತ್ಯೇಕ ಎಸ್‌ಒಪಿ (ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್) ಜಾರಿಗೊಳಿಸಲು ನಿರ್ಧರಿಸಲಾಗಿದೆ. ಕಣ್ಗಾವಲು ಮತ್ತಷ್ಟು ಬಿಗಿಗೊಳಿಸುವ ಉದ್ದೇಶದಿಂದ ಸುಮಾರು 40 ಹೊಸ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲು ಸಿದ್ಧತೆ ನಡೆದಿದೆ. ಪ್ರವೇಶ ಮತ್ತು ನಿರ್ಗಮನ ಸ್ಥಳಗಳಲ್ಲಿ ವಿಡಿಯೋ ಕಣ್ಗಾವಲು ಹಾಗೂ ದೈನಂದಿನ ತಪಾಸಣೆಗೆ ಒತ್ತು ನೀಡಲಾಗುತ್ತಿದೆ.

ಸಿಬ್ಬಂದಿಯ ಹಾಜರಾತಿ ದಾಖಲಿಸಲು ಫೇಸ್ ರೆಕಗ್ನಿಷನ್ ತಂತ್ರಜ್ಞಾನ ಬಳಸಲಾಗುತ್ತದೆ. ಸುಮಾರು 450 ಖಾಸಗಿ ಭದ್ರತಾ ಸಿಬ್ಬಂದಿಗೆ ಕರ್ತವ್ಯದ ವೇಳೆ ಮೊಬೈಲ್ ಬಳಕೆಯನ್ನು ನಿಷೇಧಿಸಲಾಗುತ್ತಿದೆ. ಸಿಬ್ಬಂದಿಯ ಚಟುವಟಿಕೆಗಳ ಮೇಲ್ವಿಚಾರಣೆಯಲ್ಲೂ ತಂತ್ರಜ್ಞಾನದ ಬಳಕೆಯನ್ನು ಹೆಚ್ಚಿಸಲಾಗುತ್ತಿದೆ.

**ಸಿಬ್ಬಂದಿಗೆ ಪ್ರತ್ಯೇಕ ಡ್ರೆಸ್ ಕೋಡ್**

ದೇವಾಲಯದ ವಿವಿಧ ವಿಭಾಗಗಳ ಸಿಬ್ಬಂದಿಗೆ ಪ್ರತ್ಯೇಕ ಸಮವಸ್ತ್ರ ನಿಗದಿಪಡಿಸಲಾಗಿದೆ. ಎಸ್‌ಬಿಐ ಸಿಬ್ಬಂದಿಗೆ ಸ್ಕೈ ಬ್ಲೂಶರ್ಟ್ ಮತ್ತು ಕಪ್ಪು ಪ್ಯಾಂಟ್, ಏಜೆನ್ಸಿ ಸಿಬ್ಬಂದಿಗೆ ಕೇಸರಿಶರ್ಟ್ ಮತ್ತು ಕಪ್ಪು ಪ್ಯಾಂಟ್, ಟ್ರಸ್ಟ್ ಸಿಬ್ಬಂದಿಗೆ ಬಿಳಿಶರ್ಟ್ ಮತ್ತು ಕಪ್ಪು ಪ್ಯಾಂಟ್ ನಿಗದಿಪಡಿಸಲಾಗಿದೆ. ಅರ್ಚಕರು, ಭಂಡಾರಿ ಮತ್ತು ಕೊಠಾರಿ ಸಿಬ್ಬಂದಿಗೆ ಪಿತಾಂಬರಿ ರೇಷ್ಮೆ ಧೋತಿ ಇರಲಿದೆ.

**ಕಾಣಿಕೆ ಹಣ ಎಣಿಕೆಯಲ್ಲೂ ಕಟ್ಟುನಿಟ್ಟು**

ಕಾಣಿಕೆ ಹಣದ ಎಣಿಕೆ ಪ್ರಕ್ರಿಯೆಯಲ್ಲೂ ಹೊಸ ನಿಯಮಗಳನ್ನು ಜಾರಿಗೆ ತರಲಾಗುತ್ತಿದೆ. ಎಸ್‌ಬಿಐ ತಂಡದಿಂದ ಎರಡು ಪಾಳಿಗಳಲ್ಲಿ ಪ್ರತ್ಯೇಕವಾಗಿ ನಗದು ಎಣಿಕೆ ನಡೆಸುವ ವ್ಯವಸ್ಥೆ ಮಾಡಲಾಗಿದೆ. ಹಣ ಎಣಿಸುವ ಸ್ಥಳದಲ್ಲಿ ಮೇಜು–ಕುರ್ಚಿಗಳನ್ನು ತೆರವುಗೊಳಿಸಿ ನೆಲದ ಮೇಲೆಯೇ ಹಣ ಎಣಿಕೆ ಮಾಡುವ ವ್ಯವಸ್ಥೆ ರೂಪಿಸಲಾಗುತ್ತಿದೆ.

# ಧರ್ಮಸ್ಥಳದಲ್ಲಿ 28ನೇ ವರ್ಷದ ಭಜನಾ ಕಮ್ಮಟ: ಇಂದು ಸಮಾರೋಪ ಸಮಾರಂಭ




**ಮುಂಬಯಿ, ಅ.3:** ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಸೆ. 28ರಿಂದ ನಡೆಯುತ್ತಿರುವ 28ನೇ ವರ್ಷದ ಭಜನಾ ಕಮ್ಮಟದ ಸಮಾರೋಪ ಸಮಾರಂಭ ಇಂದು ನಡೆಯಲಿದೆ. ಸಮಾರೋಪ ಸಮಾರಂಭದ ಹಿನ್ನೆಲೆಯಲ್ಲಿ ಶನಿವಾರ ಮೈಸೂರಿನ ಸುತ್ತೂರು ಮಠದ ಪೂಜ್ಯ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರು ಭಜನಾ ಕಮ್ಮಟಕ್ಕೆ ಭೇಟಿ ನೀಡಿ, ಶಿಬಿರಾರ್ಥಿಗಳಿಗೆ ನೀಡಲಾಗುತ್ತಿರುವ ಭಜನಾ ತರಬೇತಿಯನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಿ. ವೀರೇಂದ್ರ ಹೆಗ್ಗಡೆಯವರು ಹಾಗೂ ಮಾಣಿಲದ ಶ್ರೀಮೋಹನದಾಸ ಪರಮಹಂಸ ಸ್ವಾಮೀಜಿಯವರು ಉಪಸ್ಥಿತರಿದ್ದರು.

ಶಿಬಿರಾರ್ಥಿಗಳಿಗೆ ಶಿಸ್ತುಬದ್ಧವಾಗಿ ಭಜನಾ ತರಬೇತಿ ನೀಡುತ್ತಿರುವುದನ್ನು ವೀಕ್ಷಿಸಿದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

# ಮರುನೋಂದಣಿ ಸಾಧ್ಯವಿದ್ದರೆ ಎಸ್‌ಐಆರ್ ಏಕೆ: ಚಿದಂಬರಂ ಪ್ರಶ್ನೆ

**ನವದೆಹಲಿ, ಅ.3:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಕೈಬಿಡಲಾದ ಮತದಾರರು ಮತ್ತೆ ಹೆಸರು ನೋಂದಾಯಿಸಿಕೊಳ್ಳಲು ಫಾರ್ಮ್–6 ಸಲ್ಲಿಸಿದರೆ ಸಾಕು ಎಂದಾದರೆ ಎಸ್‌ಐಆರ್ ಏಕೆ ಬೇಕು. ಪಶ್ಚಿಮ ಬಂಗಾಳದ ಎಸ್‌ಐಆರ್ ಪ್ರಕರಣದ ವಿಚಾರಣೆ ವೇಳೆ ಈ ಮಾಹಿತಿಯನ್ನು ಚುನಾವಣಾ ಆಯೋಗ ಸುಪ್ರೀಂ ಕೋರ್ಟ್‌ಗೆ ಏಕೆ ತಿಳಿಸಲಿಲ್ಲ ಎಂದು ಕಾಂಗ್ರೆಸ್ ಹಿರಿಯ ನಾಯಕ ಹಾಗೂ ಮಾಜಿ ಕೇಂದ್ರ ಸಚಿವ ಪಿ. ಚಿದಂಬರಂ ಪ್ರಶ್ನಿಸಿದ್ದಾರೆ.

ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಕೈಬಿಟ್ಟಿರುವ ಕ್ರಮ ಹಾಗೂ ಮರುನೋಂದಣಿಗೆ ತಗಲುವ ವೆಚ್ಚದ ಕುರಿತು ಶನಿವಾರ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಶ್ನೆಗಳನ್ನು ಎತ್ತಿದ್ದಾರೆ. ಮತದಾರರ ಪಟ್ಟಿಯಿಂದ ಹೊರಗುಳಿದವರು ಫಾರ್ಮ್–6 ಸಲ್ಲಿಸುವ ಮೂಲಕ ಮತ್ತೆ ಹೆಸರು ಸೇರಿಸಿಕೊಳ್ಳಬಹುದಾದರೆ, ಪಶ್ಚಿಮ ಬಂಗಾಳದಲ್ಲಿ ಲಕ್ಷಾಂತರ ಮತದಾರರು ಸಲ್ಲಿಸಿದ್ದ ಮೇಲ್ಮನವಿಗಳು, ನ್ಯಾಯಾಧಿಕರಣಗಳ ರಚನೆ ಹಾಗೂ ವಿಚಾರಣೆಗೆ ವ್ಯಯಿಸಿದ ಸಮಯ ಮತ್ತು ಹಣದ ಅಗತ್ಯವೇನಿತ್ತು ಎಂದು ಪ್ರಶ್ನಿಸಿದ್ದಾರೆ. ನ್ಯಾಯಾಧಿಕರಣಗಳು 1.26 ಲಕ್ಷ ಮೇಲ್ಮನವಿಗಳನ್ನು ವಿಲೇವಾರಿ ಮಾಡಿದ್ದು, ಅವುಗಳಲ್ಲಿ ಶೇ.91ರಿಂದ 93ರಷ್ಟು ಮೇಲ್ಮನವಿಗಳಿಗೆ ಪುರಸ್ಕಾರ ದೊರೆತಿದೆ. ಇದರ ಪರಿಣಾಮವಾಗಿ ಹಲವು ಮತದಾರರ ಹೆಸರುಗಳನ್ನು ಮತ್ತೆ ಮತದಾರರ ಪಟ್ಟಿಗೆ ಸೇರಿಸಲಾಗಿದೆ. ಫಾರ್ಮ್–6 ಸಲ್ಲಿಸುವ ಮೂಲಕವೇ ಮರುನೋಂದಣಿ ಸಾಧ್ಯವಿದ್ದರೆ, ಪಶ್ಚಿಮ ಬಂಗಾಳದಲ್ಲಿ ನಡೆಸಿದ ಈ ಸಂಪೂರ್ಣ ಪ್ರಕ್ರಿಯೆಯು ಸಮಯ ಮತ್ತು ಹಣದ ವ್ಯರ್ಥವಲ್ಲವೇ ಎಂದೂ ಪ್ರಶ್ನಿಸಿದ್ದಾರೆ.



ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಶನಿವಾರ ನವದೆಹಲಿಯಲ್ಲಿ ನಡೆದ 5ನೇ ಕೌಟಿಲ್ಯ ಆರ್ಥಿಕ ಸಮಾವೇಶದಲ್ಲಿ ಭಾಗವಹಿಸಿದ್ದರು.

# ಎಲ್‌ಓಸಿ ದಾಟಿ ಬಂದ ಬಾಲಕಿಯ ಸೆರೆ

**ಶ್ರೀನಗರ, ಅ.3:** ಜಮ್ಮು ಮತ್ತು ಕಾಶ್ಮೀರದ ರಾಜೌರಿ ಜಿಲ್ಲೆಯ ನೌಶೇರಾ ವಲಯದಲ್ಲಿ ಗಡಿ ನಿಯಂತ್ರಣ ರೇಖೆಯನ್ನು ದಾಟಿ ಭಾರತೀಯ ಗಡಿಯೊಳಗೆ ಪ್ರವೇಶಿಸಿದ್ದ ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದ 17 ವರ್ಷದ ಅಪ್ರಾಪ್ತ ಬಾಲಕಿಯೊಬ್ಬಳನ್ನು ಭಾರತೀಯ ಸೇನೆಯ ಯೋಧರು ವಶಕ್ಕೆ ಪಡೆದಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ರಾಜೌರಿ ಜಿಲ್ಲೆಯ ನೌಶೇರಾ ವಲಯದಲ್ಲಿ ಎಲ್‌ಒಸಿ ಸಮೀಪ ಅನುಮಾನಾಸ್ಪದವಾಗಿ ಚಲಿಸುತ್ತಿದ್ದ ಬಾಲಕಿಯನ್ನು ಗಸ್ತು ತಿರುಗುತ್ತಿದ್ದ ಭಾರತೀಯ ಸೇನೆಯ ಯೋಧರು ತಡೆದು ವಶಕ್ಕೆ ಪಡೆದಿದ್ದಾರೆ. ಬಂಧಿತ ಅಪ್ರಾಪ್ತ ಬಾಲಕಿಯನ್ನು ಮಹಮ್ಮದ್ ಅಜೀಮ್ ಎಂಬವರ ಅವರ ಪುತ್ರಿ ಸಾಮಿಯಾ ಅಜೀಮ್ ಎಂದು ಗುರುತಿಸಲಾಗಿದೆ. . ಆದಾಗ್ಯೂ, ಗಡಿಭಾಗದಲ್ಲಿ ಭದ್ರತಾ ಕಾಳಜಿ ಹೆಚ್ಚಿರುವುದರಿಂದ, ಆಕೆಯ ಪ್ರವೇಶದ ಹಿಂದಿನ ನೈಜ ಸಂದರ್ಭ ಹಾಗೂ ಉದ್ದೇಶಗಳನ್ನು ಸ್ಪಷ್ಟಪಡಿಸಿಕೊಳ್ಳಲು ಭದ್ರತಾ ಪಡೆಗಳು ಹಾಗೂ ಸ್ಥಳೀಯ ಪೊಲೀಸರು ಜಂಟಿಯಾಗಿ ತನಿಖೆಯನ್ನು ಮುಂದುವರಿಸಿದ್ದಾರೆ. ಗಡಿ ನಿಯಂತ್ರಣ ರೇಖೆಯ ಬಳಿ ಈ ರೀತಿಯ ಘಟನೆಗಳು ಸಂಭವಿಸಿರುವುದು ಇದೇ ಮೊದಲೇನಲ್ಲ. ಇದಕ್ಕೂ ಮುನ್ನ, 2024ರ ಮೇ ತಿಂಗಳಲ್ಲಿ ಪಾಕ್ ಆಕ್ರಮಿತ ಕಾಶ್ಮೀರದ ಜೀಶಾನ್ ಮಿರ್ (22) ಎಂಬ ಯುವಕ ಸೋಶಿಯಲ್ ಮೀಡಿಯಾದಲ್ಲಿ ಪರಿಚಯವಾಗಿದ್ದ ತನ್ನ ಗೆಳತಿಯನ್ನು ಭೇಟಿಯಾಗುವ ಸಲುವಾಗಿ ಯಾವುದೇ ಸಿಂಧುತ್ವವಿಲ್ಲದೆ ಉತ್ತರ ಕಾಶ್ಮೀರದ ಉರಿ ವಲಯದ ಮೂಲಕ ಎಲ್‌ಒಸಿ ದಾಟಿ ಕಾಶ್ಮೀರಕ್ಕೆ ಪ್ರವೇಶಿಸಿದ್ದ. ಆಗ ಜಾಗರೂಕರಾಗಿದ್ದ ಭಾರತೀಯ ಸೇನಾ ಯೋಧರು ಆತನನ್ನು ಗಡಿಯಲ್ಲೇ ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದರು. ಸಾಮಾಜಿಕ ಜಾಲತಾಣದಲ್ಲಿ ಪ್ರೇಮಕ್ಕೆ ಒಳಗಾದ ಯುವತಿಯನ್ನು ಭೇಟಿಯಾಗಲು ಆತ ಗಡಿ ದಾಟಿರುವುದು ಸ್ಪಷ್ಟವಾಗಿತ್ತು.

# ಉತ್ತರ ಪ್ರದೇಶ: 9.5 ವರ್ಷದಲ್ಲಿ ಎನ್‌ಕೌಂಟರ್‌ಗೆ 303 ಅಪರಾಧಿಗಳು ಬಲಿ

**ಲಖನೌ, ಅ.3:** ಉತ್ತರ ಪ್ರದೇಶದಲ್ಲಿ ಅಪರಾಧಿಗಳ ವಿರುದ್ಧ ಕಳೆದ 9.5 ವರ್ಷಗಳಿಂದ ನಡೆಯುತ್ತಿರುವ ಪೊಲೀಸ್ ಕಾರ್ಯಾಚರಣೆಯ ಅಂಕಿ ಅಂಶಗಳು ಗಮನ ಸೆಳೆದಿವೆ. 2017ರ ಮಾರ್ಚ್‌ನಿಂದ 2026ರ ಸೆಪ್ಟೆಂಬರ್‌ವರೆಗೆ ನಡೆದ ಪೊಲೀಸ್ ಎನ್‌ಕೌಂಟರ್‌ಗಳಲ್ಲಿ 303 ಅಪರಾಧಿಗಳು ಹತರಾಗಿದ್ದಾರೆ.

ಈ ಅವಧಿಯಲ್ಲಿ ಪೊಲೀಸರ ಕಾರ್ಯಾಚರಣೆಯಲ್ಲಿ 12,202 ಮಂದಿ ಗಾಯಗೊಂಡಿದ್ದು, 23,601 ವಾಂಟೆಡ್ ಹಾಗೂ ಬಹುಮಾನ ಘೋಷಿತ ಆರೋಪಿಗಳನ್ನು ಬಂಧಿಸಲಾಗಿದೆ. ಗಂಭೀರ ಅಪರಾಧ ಪ್ರಕರಣಗಳು ಹಾಗೂ ಸಂಘಟಿತ ಅಪರಾಧದ ವಿರುದ್ಧ ರಾಜ್ಯ ಪೊಲೀಸರು ನಿರಂತರ ಕಾರ್ಯಾಚರಣೆ ನಡೆಸಿದ್ದಾರೆ. ಅಪರಾಧ ನಿಯಂತ್ರಣದ ಭಾಗವಾಗಿ ಗ್ಯಾಂಗ್‌ಸ್ಟರ್ ಕಾಯ್ದೆಯಡಿ 87,835 ಮಂದಿಯ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ಇದೇ ಕಾಯ್ದೆಯಡಿ 15,233 ಕೋಟಿಗೂ ಅಧಿಕ ಮೌಲ್ಯದ ಆಸ್ತಿಯನ್ನು ಜಪ್ತಿ ಮಾಡಲಾಗಿದೆ. ಇದಲ್ಲದೆ, ರಾಷ್ಟ್ರೀಯ ಭದ್ರತಾ ಕಾಯ್ದೆ ಅಡಿ 995 ಮಂದಿಯ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ. ರಾಜ್ಯದಲ್ಲಿ ಗುರುತಿಸಲಾದ ಮಾಫಿಯಾ ಹಾಗೂ ಗ್ಯಾಂಗ್‌ಗಳ ವಿರುದ್ಧವೂ ವಿಶೇಷ ಕಾರ್ಯಾಚರಣೆ ನಡೆಸಲಾಗಿದ್ದು, 68 ಮಾಫಿಯಾ/ಗ್ಯಾಂಗ್‌ಗಳಿಗೆ ಸಂಬಂಧಿಸಿದಂತೆ 909 ಪ್ರಕರಣಗಳನ್ನು ದಾಖಲಿಸಿ, 651 ಮಂದಿಯನ್ನು ಬಂಧಿಸಲಾಗಿದೆ ಎಂದು ಅಂಕಿಅಂಶಗಳು ತಿಳಿಸಿವೆ. ಸೈಬರ್ ಅಪರಾಧದ ವಿರುದ್ಧವೂ ಕ್ರಮ ಕೈಗೊಳ್ಳಲಾಗಿದ್ದು, ಸೈಬರ್ ಕ್ರೈಂ ಪ್ರಕರಣಗಳಿಗೆ ಸಂಬಂಧಿಸಿದಂತೆ 874.58 ಕೋಟಿಗೂ ಅಧಿಕ ಹಣವನ್ನು ಫ್ರೀಜ್ ಅಥವಾ ಹೋಲ್ಡ್ ಮಾಡಲಾಗಿದೆ. ರಾಜ್ಯದ 75 ಜಿಲ್ಲೆಗಳಲ್ಲೂ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ ಎಂದು ವರದಿ ಉಲ್ಲೇಖಿಸಿದೆ.

# ಬಿಜೈ ಕಾಪಿಕಾಡ್ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಬಟ್ಟೆಬ್ಯಾಗ್, ಆಟಿಕೆಗಳ ವಿತರಣೆ




**ಮುಂಬಯಿ, ಅ.3:** ಮಂಗಳೂರು, ಲೋಬೊ ಫೌಂಡೇಶನ್ ಮುಂಬಯಿ ಹಾಗೂ ಗ್ಲೋಬಲ್ ಸಿಂಪಥಿ ಫೌಂಡೇಶನ್ ವತಿಯಿಂದ ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಶಿಶು ಅಭಿವೃದ್ಧಿ ಯೋಜನೆ ವ್ಯಾಪ್ತಿಯ ಬಿಜೈ ಕಾಪಿಕಾಡ್ ಅಂಗನವಾಡಿ ಶಾಲೆಯ ಮಕ್ಕಳಿಗೆ ಬಟ್ಟೆಬ್ಯಾಗ್, ಆಟಿಕೆಗಳು ಹಾಗೂ ಸಿಹಿತಿಂಡಿ ವಿತರಣೆ ಮಾಡಲಾಯಿತು.

ಇದೇ ವೇಳೆ ಶಾಲಾ ಮಕ್ಕಳ ಶೈಕ್ಷಣಿಕ ಕಲಿಕೆಗೆ ಅಗತ್ಯವಿರುವ ಇಂಟರ್‌ನೆಟ್ ವ್ಯವಸ್ಥೆಯನ್ನು ಕಲ್ಪಿಸುವುದಾಗಿ ರೋನ್ಸ್ ಬಂಟ್ವಾಳ್ ತಿಳಿಸಿದರು. ಅಂಗನವಾಡಿ ಕೇಂದ್ರದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಾಯ ನೀಡಲಾಗುವುದು ಹಾಗೂ ಅಂಗನವಾಡಿ ಕೇಂದ್ರದ ಪುಟಾಣಿಗಳಿಗೆ ಸಮವಸ್ತ್ರ ಒದಗಿಸುವುದಾಗಿ ಅಂತಾರಾಷ್ಟ್ರೀಯ ಜೂಡೋ ತರಬೇತುದಾರ ಹಾಗೂ ಕರ್ನಾಟಕ ರಾಜ್ಯ ಜೂಡೋ ಅಸೋಸಿಯೇಷನ್ ಅಧ್ಯಕ್ಷ ಯತೀಶ್ ಎನ್. ಬಂಗೇರಾ ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಶ್ರೀನಿವಾಸ್ ನಾಯಕ್ ಇಂದಾಜೆ, ಶಾಲಾ ಶಿಕ್ಷಕಿಯರಾದ ನಂದಾ, ಲಕ್ಷ್ಮೀ ಉಪಸ್ಥಿತರಿದ್ದರು.

# ಸಿಜೆಪಿ ಪ್ರತಿಭಟನೆ: ಹೋರಾಟಗಾರರ ವಿರುದ್ಧ ಎಫ್‌ಐಆರ್

**ನವದೆಹಲಿ, ಅ.3:** ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯಲ್ಲಿ (ಎಸ್‌ಐಆರ್) ಅಕ್ರಮ ನಡೆದಿದೆ ಎಂದು ಆರೋಪಿಸಿ, ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ನವದೆಹಲಿಯ ಜಂತರ್ ಮಂತರ್‌ನಲ್ಲಿ ಶುಕ್ರವಾರ ನಡೆದ ಬೃಹತ್ ಪ್ರತಿಭಟನೆಗೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಮೂರು ಪ್ರತ್ಯೇಕ ಪ್ರಕರಣಗಳನ್ನು (ಎಫ್‌ಐಆರ್) ದಾಖಲಿಸಿದ್ದಾರೆ. ವಿದ್ಯಾರ್ಥಿ ಸಂಘಟನೆಗಳು, ರಾಜಕೀಯ ಪಕ್ಷಗಳು ಹಾಗೂ ಸಾಮಾಜಿಕ ಕಾರ್ಯಕರ್ತರು ಜಮಾಯಿಸಲು ಯತ್ನಿಸಿದಾಗ ಪೊಲೀಸರು ಮತ್ತು ಭದ್ರತಾ ಪಡೆಗಳು ಅವರನ್ನು ತಡೆದ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ.

ಪೊಲೀಸ್ ಅಧಿಕಾರಿಗಳು ಮಾಡಿಕೊಂಡ ದೈನಂದಿನ ಡೈರಿ (ಡಿಡಿ) ನಮೂದುಗಳ ಆಧಾರದ ಮೇಲೆ ಸಂಸತ್ ಮಾರ್ಗ (ಪಾರ್ಲಿಮೆಂಟ್ ಸ್ಟ್ರೀಟ್) ಮತ್ತು ಕನ್ನಾಟ್ ಪ್ಲೇಸ್ ಪೊಲೀಸ್ ಠಾಣೆಗಳಲ್ಲಿ ಈ ಮೂರು ಎಫ್‌ಐಆರ್‌ಗಳನ್ನು ದಾಖಲಿಸಲಾಗಿದೆ. ಆದರೆ, ಆರೋಪಿಗಳ ಕಾಲಂನಲ್ಲಿ ಯಾವುದೇ ನಿರ್ದಿಷ್ಟ ವ್ಯಕ್ತಿ ಅಥವಾ ಸಂಘಟನೆಯ ಹೆಸರನ್ನು ಉಲ್ಲೇಖಿಸಿಲ್ಲವಾದರೂ, ದೂರಿನ ವಿವರಗಳಲ್ಲಿ ಪ್ರತಿಭಟನೆಯನ್ನು ಆಯೋಜಿಸಿದ ಮತ್ತು ಅದರಲ್ಲಿ ಭಾಗವಹಿಸಿದ ಸಂಘಟನೆಗಳ ಬಗ್ಗೆ ಉಲ್ಲೇಖಿಸಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಎಎಪಿ, ಎಐಎಸ್‌ಎ, ಎಸ್‌ಎಫ್‌ಐ, ಎನ್‌ಎಸ್‌ಯುಐ, ಐವೈಸಿ ಮುಂತಾದ ವಿದ್ಯಾರ್ಥಿ ಮತ್ತು ಯುವ ಸಂಘಟನೆಗಳು ಶುಕ್ರವಾರ ಜಂತರ್ ಮಂತರ್‌ನಲ್ಲಿ ಪ್ರತಿಭಟನೆಗೆ ಕರೆ ನೀಡಿದ್ದವು. ಆದರೆ ಪ್ರತಿಭಟನಾಕಾರರು ಅಲ್ಲಿಗೆ ತಲುಪುವ ಮುನ್ನವೇ ದೆಹಲಿಯಾದ್ಯಂತ ಸುಮಾರು 1,000ಕ್ಕೂ ಹೆಚ್ಚು ಜನರನ್ನು ವಶಕ್ಕೆ ಪಡೆಯಲಾಯಿತು. ಜಂತರ್ ಮಂತರ್ ಸುತ್ತಮುತ್ತ 750 ಜನರನ್ನು ಮತ್ತು ದೆಹಲಿಯ ಇತರ ಭಾಗಗಳಲ್ಲಿ 400 ಮಂದಿಯನ್ನು ವಶಕ್ಕೆ ಪಡೆಯಲಾಗಿತ್ತು. ಇದರ ಜೊತೆಗೆ ಬೆಳಗ್ಗೆಯೇ 200 ಮಂದಿಯನ್ನು ಗೃಹಬಂಧನದಲ್ಲಿ ಇರಿಸಲಾಗಿತ್ತು. ಬೀದಿಯಲ್ಲಿದ್ದ ಪ್ರತಿಭಟನಾಕಾರರನ್ನು ಪೊಲೀಸರು ಬಸ್‌ಗಳ ಮೂಲಕ ವಿವಿಧ ಠಾಣೆಗಳಿಗೆ ಸ್ಥಳಾಂತರಿಸಿದರು.

ದೆಹಲಿಯ ಮಾಜಿ ಮುಖ್ಯಮಂತ್ರಿ ಹಾಗೂ ಎಎಪಿ ನಾಯಕಿ ಆತಿಶಿ, ಸ್ವರಾಜ್ ಇಂಡಿಯಾ ನಾಯಕ ಯೋಗೇಂದ್ರ ಯಾದವ್, ಎಐಎಸ್‌ಎ ಅಧ್ಯಕ್ಷೆ ನೇಹಾ ಬೋರಾ ಸೇರಿದಂತೆ ಹಲವು ಗಣ್ಯರನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಎಎಪಿ ನಾಯಕರು, ಎಡಪಂಥೀಯ ವಿದ್ಯಾರ್ಥಿ ಸಂಘಟನೆಗಳ ಸದಸ್ಯರು, ಕಾಂಗ್ರೆಸ್ ಯುವ ಘಟಕದ ಕಾರ್ಯಕರ್ತರು ಮತ್ತು ಸಾಮಾಜಿಕ ಹೋರಾಟಗಾರರು ಈ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಪ್ರತಿಭಟನಾಕಾರರು ಜಂತರ್ ಮಂತರ್ ತಲುಪದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಆ ಪ್ರದೇಶದ ಸುತ್ತಮುತ್ತ 5,000ಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು.

# ಕುತ್ಲೂರು ಸರಕಾರಿ ಶಾಲೆಗೆ ಗ್ಲೋಬಲ್ ಸಿಂಪತಿ ಫೌಂಡೇಶನ್‌ನಿಂದ ಆರ್ಥಿಕ ನೆರವು



**ಮುಂಬಯಿ, ಅ.3:** ಮಂಗಳೂರು, ಬೆಳ್ತಂಗಡಿ ತಾಲೂಕಿನ ಕುತ್ಲೂರು ಸರಕಾರಿ ಉನ್ನತಿಕರಿಸೀದ ಹಿರಿಯ ಪ್ರಾಥಮಿಕ ಶಾಲೆಗೆ ಅಂತರಾಷ್ಟ್ರೀಯ ಜೂಡೋ ತರಬೇತುದಾರ ಹಾಗೂ ಕರ್ನಾಟಕ ಸ್ಟೇಟ್ ಜೂಡೋ ಅಸೋಸಿಯೇಷನ್ ಅಧ್ಯಕ್ಷ ಯತೀಶ್ ಎನ್. ಬಂಗೇರಾ ಹಾಗೂ ಗ್ಲೋಬಲ್ ಸಿಂಪತಿ ಫೌಂಡೇಶನ್ ಅಧ್ಯಕ್ಷ ರೋನ್ಸ್ ಬಂಟ್ವಾಳ್ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ವಿದ್ಯಾರ್ಥಿಗಳ ಪರಿಸರ ಪ್ರೇಮದ ಮೆಚ್ಚುಗೆ ವ್ಯಕ್ತಪಡಿಸಿದರು. ಶಾಲಾ ಆವರಣದಲ್ಲಿರುವ ಫ್ರೂಟ್ಸ್ ಪಾರ್ಕ್‌ನಲ್ಲಿ ರಂಬೂಟಾನ್ ಗಿಡಗಳನ್ನು ನೆಟ್ಟು ಉಭಕೋರಿದರು. ಶಾಲಾ ಶೈಕ್ಷಣಿಕ ಚಟುವಟಿಕೆಗಳಿಗೆ ಗ್ಲೋಬಲ್ ಸಿಂಪತಿ ಫೌಂಡೇಶನ್ ವತಿಯಿಂದ ಆರ್ಥಿಕ ನೆರವು ಹಸ್ತಾಂತರಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅಂತಾರಾಷ್ಟ್ರೀಯ ಜೂಡೋ ತರಬೇತುದಾರ ಯತೀಶ್ ಎನ್.ಬಂಗೇರಾ ಮಾತನಾಡಿ ಗ್ರಾಮೀಣ ಪ್ರದೇಶದಲ್ಲಿರುವ ಈ ಸರಕಾರಿ ಶಾಲೆ ಮಾದರಿಯಾಗಿದೆ. ಈ ಶಾಲೆಯ ಅಭಿವೃದ್ಧಿಗೆ ಎಲ್ಲಾ ರೀತಿಯ ಸಹಾಯ ನೀಡಲಾಗುವುದು. ಮುಂದಿನ ದಿನಗಳಲ್ಲಿ ಗ್ರಾಮೀಣ ಭಾಗದ ಸರಕಾರಿ ಶಾಲೆಯ ಮಕ್ಕಳಿಗೆ ಉಚಿತ ಜೂಡೋ ತರಬೇತಿ ನೀಡಲಾಗುವುದು. ಈ ಮೂಲಕ ಒಲಂಪಿಕ್ಸ್ ಸೇರಿದಂತೆ ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಗ್ರಾಮೀಣ ಪ್ರದೇಶದ ಸರಕಾರಿ ಶಾಲಾ ವಿದ್ಯಾರ್ಥಿಗಳಿಗೂ ಭಾಗವಹಿಸಲು ಅವಕಾಶ ಮಾಡಿ ಕೊಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಶ್ರೀನಿವಾಸ್ ನಾಯಕ್ ಇಂದಾಜೆ, ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಕನಕ ವರ್ಮ ಜೈನ್ ಶಾಲಾ ಮುಖ್ಯ ಗುರು ಫ್ಲೆವಿಯಾ ಡಿ ಸೋಜಾ, ಶಾಲಾ ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಭಜನೆ, ನೈತಿಕತೆ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ: ಅನಿಲ್ ಕುಮಾರ್

**ಧರ್ಮಸ್ಥಳ, ಅ.3:** ಶನಿವಾರ: ಭಜನೆ ಮತ್ತು ನೈತಿಕತೆಯು ಆಳವಾಗಿ ಬೆರೆತುಕೊಂಡಿದ್ದು, ನೀತಿಯುತವಾದ ನಾಯಕತ್ವವನ್ನು ಬೆಳೆಸಿಕೊಳ್ಳುವಲ್ಲಿ ಭಜನೆಯು ಸಹಕಾರಿಯಾಗಿದೆ. ಭಜನೆಯಿಂದ ನಮ್ಮ ಆಂತರಿಕ ಗುಣಲಕ್ಷಣಗಳು ಪರಿವರ್ತನೆಯಾಗಿ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬಹುದಾಗಿದೆ ಎಂದು ಎಸ್. ಕೆ.ಡಿ.ಆರ್.ಡಿ.ಪಿ.ಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅನಿಲ್ ಕುಮಾರ್ ಅಭಿಪ್ರಾಯ ವ್ಯಕ್ತಪಡಿಸಿದರು.



ಶ್ರೀಕ್ಷೇತ್ರ ಧರ್ಮಸ್ಥಳದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಭಜನಾ ಪರಿಷತ್ ವತಿಯಿಂದ ಅ.03, ಶನಿವಾರದಂದು ನಡೆದ 28ನೇ ವರ್ಷದ ಭಜನಾ ಕಮ್ಮಟದ ಆರನೇ ದಿನ ಶಿಬಿರದ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಉಪನ್ಯಾಸಕ ನೆಲೆಯಲ್ಲಿ ಮಾತನಾಡಿದರು.

ನಮ್ಮ ಯಾವುದೇ ಕಾರ್ಯವನ್ನು ಅತಿ ಶ್ರದ್ದೆಯಿಂದ ಕೈಗೊಂಡಾಗ ಮಾತ್ರ, ಆ ಕಾರ್ಯದ ಒಬ್ಬ ಉತ್ತಮ ನಾಯಕನಾಗಲು ಸಾಧ್ಯ. ಪ್ರತಿಯೊಬ್ಬ ಭಜಕನು ಯಾವ ರೀತಿಯ ದುರಭ್ಯಾಸಗಳಿಗೆ ಬಲಿಯಾಗದೆ, ಮಾದರಿ ತತ್ವವನ್ನು ಮೈಗೂಡಿಸಿಕೊಂಡು ಸಮಾಜಕ್ಕೆ ಒಬ್ಬ ಆದರ್ಶ ನಾಯಕನಾಗಬೇಕಾಗಿದೆ. ಆಧ್ಯಾತ್ಮಿಕ ಪ್ರಕ್ರಿಯೆಯಲ್ಲಿ ಭಾಗಿಯಾಗುದರಿಂದ ಕುಟುಂಬದಲ್ಲಿ ಪ್ರೀತಿ, ಸೌಹಾರ್ದತೆ, ಐಕತೆ ಹಾಗೂ ಒಗ್ಗಟ್ಟನ್ನು ಹೆಚ್ಚಿಸಬಹುದಾಗಿದೆ. ಈ ದಿಸೆಯಲ್ಲಿ ನಾವು ಮುನ್ನಡೆಯಬೇಕು ಎಂದು ಹೇಳಿದರು.

ಆಧುನಿಕತೆಯ ಜೀವನಶೈಲಿಯಲ್ಲಿ ಸಾರ್ಥಕ ಬದುಕು ಅಸಾಧ್ಯವಾಗಿದ್ದು, ಪೂರ್ವಕಾಲದ ಸಂಸ್ಕೃತಿಯನ್ನು ಎತ್ತಿ ಹಿಡಿಯುವಲ್ಲಿ ಪ್ರಮುಖ ಪಾತ್ರ ವಹಿಸಿದ ಭಜನೆಯನ್ನು ಮೈಗೂಡಿಸಿಕೊಳ್ಳುವ ಮೂಲಕ ಸಾರ್ಥಕ ಬದುಕನ್ನು ಸಾಧ್ಯವಾಗಿಸಬಹುದಾಗಿದೆ ಎಂದು ಶಿಬಿರಾರ್ಥಿಗಳಿಗೆ ಬೋಧಿಸಿದರು.

ಖಾವಂದರ ಹಾಗೂ ಹೇಮಾವತಿ ಅಮ್ಮನವರ ದಿವ್ಯ ಚಿಂತನೆಯಿಂದ ಹೊರಬಂದ ಗ್ರಾಮೀಣ ಅಭಿವೃದ್ಧಿ ಯೋಜನೆಯು ಇಂದು ಕರ್ನಾಟಕದ ಸಾವಿರಾರು ಜನರ ಬದುಕಿಗೆ ನೆರಳಾಗಿ ನಿಂತಿದೆ. ಜನತೆಗೆ ಮೂಲ ಸೌಕರ್ಯಗಳನ್ನು ಒದಗಿಸಿ, ಆರ್ಥಿಕತೆಯಲ್ಲಿ ಸದೃಢರನ್ನಾಗಿಸುವ ನಿಟ್ಟಿನಲ್ಲಿ ಕೈಗೊಳ್ಳುತ್ತಿರುವ ಸಾವಿರಾರು ಯೋಜನೆಗಳು ಇಡೀ ದೇಶಕ್ಕೆ ಮಾದರಿಯಾಗಿ ನಿಂತಿದೆ ಎಂದು ಶ್ಲಾಘನೆಯನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಸ್.ಡಿ.ಎಮ್. ಶಿಕ್ಷಣ ಸಂಸ್ಥೆಗಳು, ಉಜಿರೆ ಇದರ ಉಪಾಧ್ಯಕ್ಷ ಡಿ. ಸುರೇಂದ್ರ ಕುಮಾರ್, ಶ್ರೀ ಮಹಾಲಕ್ಷ್ಮಿ ಸೇವಾ ಪ್ರತಿಷ್ಠಾನ, ಧಾಮ, ಮಾಣಿಲ ಇಲ್ಲಿನ ಮೋಹನದಾಸ ಪರಮಹಂಸ ಸ್ವಾಮೀಜಿಯವರು, ಶ್ರೀ ಕ್ಷೇತ್ರ ಧರ್ಮಸ್ಥಳದ ಹಿರಿಯ ಮುತ್ಸದ್ಧಿ ಭುಜಬಲಿ, ಭಜನಾ ಕಮ್ಮಟ ಪರಿಷತ್ ಸಂಚಾಲಕ ಸುಬ್ರಹ್ಮಣ್ಯ ಪ್ರಸಾದ್, ಸರ್ವಸದಸ್ಯರು ಹಾಗೂ ಶಿಬಿರಾರ್ಥಿಗಳು ಭಾಗಿಯಾಗಿದ್ದರು

# ಕರ್ನಾಟಕದ ಬರಪೀಡಿತ ಪ್ರದೇಶಗಳಲ್ಲಿ ಕೇಂದ್ರ ತಂಡದಿಂದ ಪರಿಸ್ಥಿತಿ ವೀಕ್ಷಣೆ



**ಬೆಂಗಳೂರು, ಅ.3:** ರಾಜ್ಯದ ಬರ ಅಧ್ಯಯನಕ್ಕೆ ಆಗಮಿಸಿರುವ ಕೇಂದ್ರ ತಂಡ ರಾಜ್ಯದ ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಬರ ಪರಿಸ್ಥಿತಿಯ ವೀಕ್ಷಣೆ ನಡೆಸಿದೆ.

ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜಿತ್‌ಕುಮಾರ್ ಸಾಹು ನೇತೃತ್ವದಲ್ಲಿ ಮೂರು ತಂಡಗಳು ರಾಜ್ಯದ ಬರ ಅಧ್ಯಯನಕ್ಕೆ ಆಗಮಿಸಿದ್ದು, ಈ ಮೂರು ತಂಡಗಳು ರಾಜ್ಯದ ವಿವಿಧೆಡೆ ಬರಪೀಡಿತ ಸ್ಥಳಗಳಿಗೆ ತೆರಳಿ ಬರ ಪರಿಸ್ಥಿತಿಯನ್ನು ಖುದ್ದು ಅವಲೋಕಿಸಿದರು.

ಶನಿವಾರ ಮತ್ತು ಭಾನುವಾರ ಎರಡು ದಿನ ಕೇಂದ್ರದ ಈ ಮೂರು ತಂಡಗಳು ವಿವಿಧ ಜಿಲ್ಲೆಗಳಿಗೆ ತೆರಳಿ ಬರದಿಂದ ಆಗಿರುವ ಬೆಳೆಹಾನಿ, ಜಾನುವಾರುಗಳಿಗೆ ಮೇವಿನ ಕೊರತೆ, ಕುಡಿಯುವ ನೀರಿನ ಸಂಕಷ್ಟ ಎಲ್ಲವನ್ನು ಅವಲೋಕಿಸಲಿದೆ. ಜತೆಗೆ ಬರದಿಂದ ತೊಂದರೆಗೆ ಒಳಗಾಗಿರುವ ರೈತರ ಸಂಕಷ್ಟವನ್ನು ಆಲಿಸಲಿದೆ.

ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ಇದೆ. ಬರ ಅಧ್ಯಯನಕ್ಕೆ ಕೇಂದ್ರ ತಂಡವನ್ನು ಕಳುಹಿಸುವಂತೆ ರಾಜ್ಯ ಸರ್ಕಾರ ಕೇಂದ್ರ ಕೃಷಿ ಸಚಿವರಿಗೆ ಮನವಿ ಮಾಡಿತ್ತು. ಅದರಂತೆ ಕೇಂದ್ರದ ಮೂರು ತಂಡಗಳು ಇಂದು ರಾಜ್ಯಕ್ಕೆ ಬಂದಿಳಿದಿದ್ದು, ಬರ ಪರಿಸ್ಥಿತಿಯನ್ನು ಕಣ್ಣಾರೆ ಕಂಡು ಕೇಂದ್ರಕ್ಕೆ ವಸ್ತುಸ್ಥಿತಿಯ ವರದಿಯನ್ನು ಸಲ್ಲಿಸಲಿವೆ. ಈ ವರದಿ ಆಧಾರದಲ್ಲಿ ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಮಾಡಲಿದೆ.

## ಕೆಆರ್‌ಎಸ್ ವ್ಯಾಪ್ತಿಯಲ್ಲಿ ಕೇಂದ್ರ ಬರ ಅಧ್ಯಯನ ತಂಡದಿಂದ ಪರಿಶೀಲನೆ

ಕೇಂದ್ರ ಬರ ಅಧ್ಯಯನ ಸಮಿತಿ ಸದಸ್ಯ ಡಾ.ನವೀನ್ ಕುಮಾರ್ ಜೈನ್ ನೇತೃತ್ವದ ಅಧಿಕಾರಿಗಳ ತಂಡ, ಪ್ರಮುಖ ಜಲಾಶಯವಾದ ಕೆಆರ್‌ಎಸ್ ಡ್ಯಾಂ ಸೇರಿದಂತೆ ಜಿಲ್ಲೆಯ ಹಲವೆಡೆ ಶನಿವಾರ ಭೇಟಿ ನೀಡಿ ಬರಪೀಡಿತ ಪ್ರದೇಶಗಳ ನೈಜ ಸ್ಥಿತಿಯ ಮಾಹಿತಿ ಕಲೆಹಾಕಿತು.

ಮೊದಲಿಗೆ ಕೃಷ್ಣರಾಜ ಸಾಗರ ಅಣೆಕಟ್ಟೆಗೆ ಭೇಟಿ ನೀಡಿದ ಕೇಂದ್ರ ತಂಡ, ಜಲಾಶಯದ ಪ್ರಸ್ತುತ ನೀರಿನ ಮಟ್ಟ, ಒಳಹರಿವು ಹಾಗೂ ಹೊರಹರಿವಿನ ಬಗ್ಗೆ ಪರಿಶೀಲನೆ ನಡೆಸಿತು. ಡ್ಯಾಂನಲ್ಲಿ ಸದ್ಯ ಲಭ್ಯವಿರುವ ನೀರೆಷ್ಟು, ಅದರಲ್ಲಿ ಕುಡಿಯುವ ನೀರಿಗೆ ಎಷ್ಟು ಮೀಸಲಿಡಲಾಗಿದೆ ಮತ್ತು ಕೃಷಿ ಚಟುವಟಿಕೆಗಳಿಗೆ ನೀರು ಹರಿಸಲು ಸಾಧ್ಯವಿದೆಯೇ ಎಂಬ ಬಗ್ಗೆ ಸಮಗ್ರವಾಗಿ ಅವಲೋಕಿಸಿತು. ಕೆಆರ್‌ಎಸ್ ಪರಿಶೀಲನೆಯ ನಂತರ ಜಿಲ್ಲೆಯ ವಿವಿಧ ತಾಲೂಕುಗಳ ಬರಪೀಡಿತ ಹಳ್ಳಿಗಳಿಗೆ ತೆರಳಿದ ತಂಡ ಮಳೆಯ ಕೊರತೆಯಿಂದ ಕಂಗಾಲಾಗಿರುವ ರೈತರ ಸಮಸ್ಯೆಗಳನ್ನು ಆಲಿಸಿತು. ಒಣಗುತ್ತಿರುವ ಬೆಳೆಗಳು, ಕುಡಿಯುವ ನೀರಿನ ಸಮಸ್ಯೆ ಹಾಗೂ ಜಾನುವಾರುಗಳಿಗೆ ಎದುರಾಗಿರುವ ಮೇವಿನ ಕೊರತೆಯ ಬಗ್ಗೆ ಸ್ಥಳೀಯರಿಂದ ಮಾಹಿತಿ ಪಡೆಯಿತು.

ಇದೇ ವೇಳೆ, ಜಿಲ್ಲೆಯ ನೀರಾವರಿ ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಕೇಂದ್ರ ತಂಡಕ್ಕೆ ಜಿಲ್ಲೆಯ ಒಟ್ಟಾರೆ ಬೆಳೆ ಹಾನಿ ನೀರಿನ ಕೊರತೆ ಮತ್ತು ರೈತರು ಎದುರಿಸುತ್ತಿರುವ ವಾಸ್ತವ ಸಂಕಷ್ಟಗಳ ಕುರಿತು ವಿಸ್ತೃತ ಮಾಹಿತಿ ಹಾಗೂ ದಾಖಲೆಗಳನ್ನು ಸಲ್ಲಿಸಿದರು. ಪರಿಶೀಲನೆಯ ವರದಿಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸುವುದಾಗಿ ತಂಡ ತಿಳಿಸಿದೆ.




ಬಿಜೆಪಿ ಕಾರ್ಯಕರ್ತರ ವಿರುದ್ಧ ಸುಳ್ಳು ಮತ್ತು ಆಧಾರರಹಿತ ಕ್ರಿಮಿನಲ್ ಪ್ರಕರಣಗಳನ್ನು ದಾಖಲಿಸುವ ಮೂಲಕ ರಾಜ್ಯ ಪೊಲೀಸ್ ವ್ಯವಸ್ಥೆಯನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿ, ಪಕ್ಷದ ನಾಯಕ ಬಿ.ಎಸ್. ಯಡಿಯೂರಪ್ಪ ಮತ್ತು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದ ನಿಯೋಗವು ಶನಿವಾರ ಬೆಂಗಳೂರಿನಲ್ಲಿ ಡಿಜಿಪಿ ಎಂ.ಎ.ಸಲೀಂ ಅವರಿಗೆ ಮನವಿ ಸಲ್ಲಿಸಿತು.

### ಆದಾಯ ಸಂಗ್ರಹಣೆ, ಆರ್ಥಿಕ ಶಿಸ್ತಿನಿಂದಾಗಿ ಬೆಸ್ಕಾಂಗೆ 293.62 ರೂ. ಕೋಟಿ ಲಾಭ

# ಬೆಸ್ಕಾಂ ಆರ್ಥಿಕ ಕಾರ್ಯಕ್ಷಮತೆಯಲ್ಲಿ ಸುಧಾರಣೆ: ಕೆ.ಜೆ.ಜಾರ್ಜ್



**ಬೆಂಗಳೂರು, ಅ.3:** ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತವು 2025–26ನೇ ಹಣಕಾಸು ವರ್ಷದಲ್ಲಿ 293.62 ಕೋಟಿ ರೂ. ಲಾಭ ದಾಖಲಿಸಿದೆ.

ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ ಜಾರ್ಜ್ ಅವರ ಅಧ್ಯಕ್ಷತೆಯಲ್ಲಿ ನಡೆದ ಬೆಸ್ಕಾಂನ 144ನೇ ಆಡಳಿತ ಮಂಡಳಿ ಸಭೆಯಲ್ಲಿ 2025–26ನೇ ಸಾಲಿನ ಬೆಸ್ಕಾಂನ ಆರ್ಥಿಕ ಕಾರ್ಯಕ್ಷಮತೆ ಹಾಗೂ ಲಾಭ ದಾಖಲಿಸಲು ಕಾರಣವಾದ ಅಂಶಗಳನ್ನು ಮಂಡಿಸಲಾಯಿತು.

ಬೆಸ್ಕಾಂ ಲಾಭದ ಹಾದಿಯಲ್ಲಿ ಸಾಗಿರುವ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಇಂಧನ ಸಚಿವರು, "ಹೆಚ್ಚಿದ ಆದಾಯ ವಸೂಲಿ, ವಿದ್ಯುತ್ ಖರೀದಿಯಲ್ಲಿ ಸಮರ್ಪಕ ನಿರ್ವಹಣೆ ಮತ್ತು ಹಣಕಾಸು ವೆಚ್ಚದಲ್ಲಿನ ಇಳಿಕೆ, ಆರ್ಥಿಕ ಶಿಸ್ತು ಹೆಚ್ಚಿಸಿರುವುದು ಮುಂತಾದ ಸಂಯೋಜಿತ ಪರಿಣಾಮವಾಗಿ 2025–26ನೇ ಸಾಲಿನಲ್ಲಿ ಬೆಸ್ಕಾಂ 293.62 ಕೋಟಿ ರೂ. ಲಾಭ ದಾಖಲಿಸಲು ಸಾಧ್ಯವಾಗಿದೆ ಎಂದರು.

ಆದಾಯ ಹೆಚ್ಚಳ ಮತ್ತು ವೆಚ್ಚ ನಿಯಂತ್ರಣಕ್ಕೆ ಸಮಾನ ಆದ್ಯತೆ ನೀಡುವ ಮೂಲಕ ಬೆಸ್ಕಾಂನ ಆರ್ಥಿಕ ಕಾರ್ಯಕ್ಷಮತೆಯಲ್ಲಿ ಸುಧಾರಣೆ ತರಲಾಗಿದೆ," ಆದಾಯದ ಕುರಿತು ಮಾಹಿತಿ ಹಂಚಿಕೊಂಡ ಇಂಧನ ಸಚಿವರು, "ನಮ್ಮ ಸಮರ್ಪಕ ಬಿಲ್ಲಿಂಗ್ ವ್ಯವಸ್ಥೆಯು ಆರ್ಥಿಕ ಸುಧಾರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದೆ. ಪ್ರೋಬ್ ರೀಡಿಂಗ್ ವ್ಯವಸ್ಥೆಯಿಂದ ಸಿಬ್ಬಂದಿ ಹಸ್ತಕ್ಷೇಪ ಕಡಿಮೆಯಾಗಿದ್ದು, ಬಿಲ್ಲಿಂಗ್ ನಿಖರತೆ ಹೆಚ್ಚಿದೆ. ಇದರಿಂದ ಸುಮಾರು 100 ದಶಲಕ್ಷ ಯೂನಿಟ್ ಹೆಚ್ಚುವರಿ ವಿದ್ಯುತ್ ಮಾರಾಟಕ್ಕೆ ಕಾರಣವಾಗಿರುವುದರ ಜತೆಗೆ ಗರಿಷ್ಠ ಬೇಡಿಕೆಯನ್ನು ನಿಖರವಾಗಿ ದಾಖಲಿಸಲು ಸಹ ನೆರವಾಗಿದೆ. ಹೆಚ್ಚಿನ ಆದಾಯ ನೀಡುವ ವಾಣಿಜ್ಯ ಮತ್ತು ಕೈಗಾರಿಕಾ ಗ್ರಾಹಕರ ವಿಭಾಗದಲ್ಲಿ ಶೇ.100ರಷ್ಟು ಬಿಲ್ಲಿಂಗ್ ದಕ್ಷತೆ ಸಾಧಿಸಲು ಬೆಸ್ಕಾಂ ಮುಂದಾಗಿದೆ.'ಚ್ಚ ನಿರ್ವಹಣೆ ಹಾಗೂ ನಷ್ಟ ಆಗದಂತೆ ವಹಿಸಿದ ಎಚ್ಚರಿಕಾ ಕ್ರಮಗಳನ್ನು ವಿವರಿಸಿದ ಸಚಿವರು, "ವಿದ್ಯುತ್ ಖರೀದಿಯ ಸಮರ್ಪಕ ನಿರ್ವಹಣೆ, ಹಳೆಯ ಬಾಕಿಗಳನ್ನು ಕಂತುಗಳಲ್ಲಿ ಪಾವತಿಸುವ ಮೂಲಕ ವಿಳಂಬ ಪಾವತಿಯ ಹೆಚ್ಚುವರಿ ಶುಲ್ಕದ (ಎಲ್‌ಪಿಎಸ್) ಹೊರೆ ಕಡಿಮೆ ಮಾಡುವುದರ ಜತೆಗೆ, ಅರ್ಹ ಎಫ್.ಪಿ.ಪಿ.ಸಿ.ಎ. ಮೊತ್ತಗಳನ್ನು ಮತ್ತೆ ಪಡೆಯಲಾಗಿದೆ. ಅಲ್ಲದೇ, ವಿದ್ಯುತ್ ಉತ್ಪಾದನಾ ಸಂಸ್ಥೆಗಳು ನೀಡುವ ಮುಂಗಡ ಪಾವತಿ ರಿಯಾಯಿತಿ ಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗಿದೆ," ಎಂದರು.

"ಹೆಚ್ಚಿನ ಬಡ್ಡಿದರದ ಸಾಲಗಳ ಪುನರ್‌ರಚನೆ ಮೂಲಕ ಹಣಕಾಸು ವೆಚ್ಚವನ್ನು ಕಡಿಮೆ ಮಾಡಲಾಗಿದೆ. ಇದರಿಂದ ಬಡ್ಡಿ ವೆಚ್ಚ ಇಳಿಕೆಯಾಗುವುದರ ಜತೆಗೆ, ನಗದು ನಿರ್ವಹಣೆಯೂ ಸುಧಾರಿಸಿದೆ. ಸಾಲದ ಪಾವತಿಯಲ್ಲಿ ಬೆಸ್ಕಾಂ ಯಾವುದೇ ಡಿಫಾಲ್ಟ್ ಮಾಡಿಲ್ಲ," ಎಂದು ಸಚಿವರು ಹೇಳಿದರು.

> **ಬಾಕಿ ಆದಾಯ ವಸೂಲಿ, ವೆಚ್ಚ ನಿಯಂತ್ರಣ ಮತ್ತು ಆರ್ಥಿಕ ನಿರ್ವಹಣೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕೈಗೊಂಡ ನಿರಂತರ ಕ್ರಮಗಳ ಫಲವಾಗಿ ಬೆಸ್ಕಾಂ ಲಾಭ ದಾಖಲಿಸಿದೆ. ಬಿಲ್ಲಿಂಗ್ ದಕ್ಷತೆ, ವೆಚ್ಚ ಕಡಿತ ಮತ್ತು ಶಿಸ್ತುಬದ್ಧ ಆರ್ಥಿಕ ನಿರ್ವಹಣೆಗೆ ನೀಡಿದ ಆದ್ಯತೆ ಈ ಸಾಧನೆಗೆ ಪ್ರಮುಖವಾಗಿ ಕೊಡುಗೆ ನೀಡಿದೆ.**
> – ಡಾ. ಎನ್. ಶಿವಶಂಕರ, ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ

# ಡಿ.4 ರಿಂದ 13 ರವರೆಗೆ 10 ದಿನ "ಬೆಂಗಳೂರು ಜಾತ್ರೆ": ಕೃಷ್ಣಬೈರೇಗೌಡ

**ಬೆಂಗಳೂರು, ಅ3:** ಡಿಸೆಂಬರ್ 4ರಿಂದ 13ರವರೆಗೆ 10 ದಿನಗಳ ಕಾಲ ಬೆಂಗಳೂರು ಜಾತ್ರೆ ಕಾರ್ಯಕ್ರಮ ಆಯೋಜಿಸಲು ನಿರ್ಧರಿಸಲಾಗಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

ನಗರದಲ್ಲಿ ಬೆಂಗಳೂರು ಜಾತ್ರೆ ಕಾರ್ಯಕ್ರಮವನ್ನು ಆಚರಿಸುವ ಸಂಬಂಧ ಶನಿವಾರ ಜಿಬಿಎ ಕೇಂದ್ರ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯ ಬಳಿಕ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, "ಬೆಂಗಳೂರು ನಗರದಲ್ಲಿ ಪ್ರತಿದಿನವೂ ನಾನಾ ಮೂಲಭೂತ ಸೌಕರ್ಯಗಳ ಅಭಿವೃದ್ಧಿ, ರಸ್ತೆ, ನೀರು ಹಾಗೂ ಸಂಚಾರ ಸುಧಾರಣೆಯ ಕೆಲಸಗಳು ನಿರಂತರವಾಗಿ ನಡೆಯುತ್ತಿವೆ. ಮೂಲಭೂತ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದು ಪ್ರತಿದಿನದ ಕಡ್ಡಾಯ ಕಾರ್ಯವಾಗಿದೆ. ಆದರೆ, ಕೇವಲ ಮೂಲಭೂತ ಸೌಕರ್ಯಗಳಷ್ಟೇ ಜೀವನವಲ್ಲ; ನಾಗರಿಕರ ಜೀವನದ ಗುಣಮಟ್ಟ ಉತ್ತಮವಾಗಿರಬೇಕಾದರೆ ಕಲೆ, ಸಂಸ್ಕೃತಿ, ಸಾಹಿತ್ಯ, ಸಂಗೀತ, ಕ್ರೀಡೆ ಹಾಗೂ ನಮ್ಮ ಪರಂಪರೆ ಇತಿಹಾಸದ ಆಸ್ವಾದನೆಯೂ ಅಷ್ಟೇ ಮುಖ್ಯವಾಗುತ್ತದೆ. ಆ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಇದೇ ಮೊದಲ ಬಾರಿಗೆ ಬೆಂಗಳೂರು ಜಾತ್ರೆ ಕಾರ್ಯಕ್ರಮ ಆಯೋಜನೆಗೆ ಮುಂದಾಗಿದೆ.

ಆ.15ರಂದು ಸರ್ಕಾರ ಆಯೋಜಿಸಿದ್ದ ಫ್ರೀಡಂ ಹಬ್ಬ ಮೆಚ್ಚುಗೆ ಗಳಿಸಿತ್ತು. ನಗರದಲ್ಲಿ ಜನರನ್ನೂ ಒಳಗೊಳ್ಳುವ ಇಂತಹ ಸಾಂಸ್ಕೃತಿಕ ಚಟುವಟಿಕೆಗಳ ಅಗತ್ಯದ ಬಗ್ಗೆ ಮನಗಂಡ ಮಾನ್ಯ ಮುಖ್ಯಮಂತ್ರಿಗಳು ಡಿಸೆಂಬರ್‌ನಲ್ಲಿ ಬೆಂಗಳೂರು ಹಬ್ಬ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಆಶ್ವಾಸನೆ ನೀಡಿದ್ದರು. ಅದರಂತೆ ಇದೀಗ ಕಾರ್ಯಕ್ರಮಕ್ಕೆ ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.



ಬೆಂಗಳೂರಿನ ಪ್ರತಿಯೊಬ್ಬ ನಾಗರಿಕನೂ ಈ ಜಾತ್ರೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಖಾಸಗಿ ಸಂಸ್ಥೆಗಳು, ಸಂಘ–ಸಂಸ್ಥೆಗಳು ಸರ್ಕಾರದೊಂದಿಗೆ ಕೈಜೋಡಿಸಿ ಈ ಉತ್ಸವವನ್ನು ಯಶಸ್ವಿಗೊಳಿಸಬೇಕು. ಮುಂದಿನ ದಿನಗಳಲ್ಲಿ ಇದನ್ನು ಪ್ರತಿವರ್ಷ ಮುಂದುವರಿಸಿಕೊಂಡು ಹೋದರೆ ದೇಶ–ವಿದೇಶಗಳಿಂದ ಪ್ರವಾಸಿಗರು ಆಗಮಿಸಿ, ಬೆಂಗಳೂರಿನ ಆರ್ಥಿಕ ಹಾಗೂ ಸಾಂಸ್ಕೃತಿಕ ಪ್ರಗತಿಗೆ ಹೊಸಶಕ್ತಿ ಸಿಗಲಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಕರೆ ನೀಡಿದರು.

ಹೋಟೆಲ್ ಅಸೋಸಿಯೇಷನ್ ಸಂಸ್ಥೆಗಳ ಸಹಭಾಗಿತ್ವದಲ್ಲಿ ಕರ್ನಾ ಟಕದ ಸಾಂಪ್ರದಾಯಿಕ ಆಹಾರ ವೈವಿಧ್ಯಗಳನ್ನು ಸಾರ್ವಜನಿಕರಿಗೆ ಪರಿಚಯಿಸಲಾಗುವುದು. ಜೊತೆಗೆ ಬೆಂಗಳೂರಿನಲ್ಲಿ ಈಗಲೂ ಕೆಲವು ಹಳೆಯ ಊರುಗಳು ತಮ್ಮ ಪರಂಪರೆ ಸಂಸ್ಕೃತಿ ಆಚರಣೆಗಳನ್ನು ನಡೆಸಿಕೊಂಡು ಬರುತ್ತಿದ್ದು, ಆ ಹಳೆಯ ಊರುಗಳ (ಪೇಟೆ/ಪರಂಪರೆ ಪ್ರದೇಶಗಳು) ಪ್ರಮುಖರೊಂದಿಗೆ ಮಾತನಾಡಿ, ಸ್ಥಳೀಯ 'ಊರಹಬ್ಬ'ಗಳನ್ನು ಆಯೋಜಿಸಲು ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಜಿಬಿಎ ವ್ಯಾಪ್ತಿಯ ಐದು ನಗರಪಾಲಿಕೆಗಳ ಸಹಯೋಗದಲ್ಲಿ ರಸ್ತೆ, ಉದ್ಯಾನ, ಆಟದ ಮೈದಾನ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ಥಳೀಯ ಸಾಂಸ್ಕೃತಿಕ ಕಾರ್ಯಕ್ರಮ, ಸಂಗೀತ, ಕಲಾ ಪ್ರದರ್ಶನ, ಮಕ್ಕಳ ಚಟುವಟಿಕೆ ಮತ್ತು ಬೀದಿ ಉತ್ಸವಗಳನ್ನು ನಡೆಸುವ ಯೋಜನೆ ಇದೆ. ಸ್ಥಳೀಯ ವಿನ್ಯಾಸಕರ ಸಹಯೋಗದಲ್ಲಿ ಪ್ರತಿ ಪಾಲಿಕೆಯೂ ತನ್ನದೇ ಆದ ಸ್ಥಳೀಯ ಬ್ರ್ಯಾಂಡ್ ಗುರುತು ರೂಪಿಸುವ ಮೂಲಕ ಬಸ್‌ನಿಲ್ದಾಣ, ಬೀದಿದೀಪ, ಸಾರ್ವಜನಿಕ ಆಸನ ಸೇರಿದಂತೆ ನಾಗರಿಕ ಸೌಲಭ್ಯಗಳ ಸೌಂದರ್ಯೀಕರಣಕ್ಕೂ ಜಾತ್ರೆಯನ್ನು ಬಳಸಿಕೊಳ್ಳುವ ಚಿಂತನೆ ಮಾಡಲಾಗಿದೆ.

ಪ್ರತಿಯೊಂದು ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿದಿನ ಕಾರ್ಯಕ್ರಮಗಳು ನಡೆಯುವುದರ ಜೊತೆಗೆ, ನಗರದ ಮಧ್ಯಭಾಗದಲ್ಲಿ ಪ್ರಮುಖ ಕಾರ್ಯಕ್ರಮಗಳು ಜರುಗಲಿವೆ.

ಹಬ್ಬದ ಕೊನೆಯ ದಿನ (ಡಿಸೆಂಬರ್ 13) ಅತ್ಯಂತ ವಿಜೃಂಭಣೆಯ ಬೃಹತ್ ಸಮಾರೋಪ ಕಾರ್ಯಕ್ರಮ ಆಯೋಜಿಸುವ ಯೋಜನೆಯಿದೆ.

ಈ ಯೋಜನೆಯ ಅನುಷ್ಠಾನಕ್ಕೆ ಅಂದಾಜು ರೂ. 15 ರಿಂದ 20 ಕೋಟಿ ವ್ಯಯವಾಗುವ ನಿರೀಕ್ಷೆಯಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಯವ್ಯಯದಲ್ಲಿ ಮೀಸಲಿಡಲಾದ 5 ಕೋಟಿ ರೂ.ಗಳ ಜೊತೆಗೆ, 5 ನಗರ ಪಾಲಿಕೆಗಳು ತಲಾ 1 ಕೋಟಿ ರೂ. ನೀಡಲಿವೆ. ಉಳಿದ ಅನುದಾನವನ್ನು ಮೆಟ್ರೋ, ಬೆಸ್ಕಾಂ, ಜಲಮಂಡಳಿ ಹಾಗೂ ಬಿಡಿಎ ಸಂಸ್ಥೆಗಳು ಹಂಚಿಕೊಳ್ಳಲಿವೆ.

ಸಭೆಯಲ್ಲಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಮೆಟ್ರೋ ವ್ಯವಸ್ಥಾಪಕ ನಿರ್ದೇಶಕ ಡಾ।।ಪಿ.ಸಿ. ಜಾಫರ್, ಜಲಮಂಡಳಿ ವ್ಯವಸ್ಥಾಪಕ ನಿರ್ದೇಶಕಿ ಮಂಜುಳಾ, ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತ ಸುರಾಳ್ಕರ್ ವಿಕಾಸ್ ಕಿಶೋರ್, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಶಿವಶಂಕರ್, ಸಂಚಾರ ವಿಭಾಗದ ಜಂಟಿ ಪೊಲೀಸ್ ಆಯುಕ್ತ ಕಾರ್ತಿಕ್ ರೆಡ್ಡಿ ಹಾಗೂ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಪತ್ನಿ ಸ್ನಾತಕೋತ್ತರ ಪದವಿ ಪಡೆದಿದ್ದರೂ ಜೀವನಾಂಶ ನಿರಾಕರಣೆ ಸಲ್ಲದು: ಹೈಕೋರ್ಟ್




**ಬೆಂಗಳೂರು, ಅ.3:** ಪತ್ನಿ ಸ್ನಾತಕೋತ್ತರ ಪದವಿ ಪಡೆದಿದ್ದಾಳೆ ಎಂಬ ಕಾರಣಕ್ಕೆ ಮಾತ್ರ ಆಕೆಗೆ ಸಿಆರ್‌ಪಿಸಿ ಸೆಕ್ಷನ್ 125 ಅಡಿಯಲ್ಲಿ ಜೀವನಾಂಶ ನಿರಾಕರಿಸಲಾಗದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ವಿಚ್ಛೇದನ ಪ್ರಕರಣದಲ್ಲಿ ಶಾಶ್ವತ ಜೀವನಾಂಶದ ಬೇಡಿಕೆ ತಿರಸ್ಕೃತವಾಗಿದ್ದರೂ, ಅದನ್ನು ಆಧಾರವಾಗಿ ಬಳಸಿ ಮಾಸಿಕ ಜೀವನಾಂಶ ನಿರಾಕರಿಸಲು ಸಾಧ್ಯವಿಲ್ಲ ಎಂದು ನ್ಯಾಯಮೂರ್ತಿ ಡಾ. ಚಿಲ್ಲಕುರ್ ಸುಮಲತಾ ಅವರ ಏಕಸದಸ್ಯ ಪೀಠ ಆದೇಶಿಸಿದೆ. ವಾದ–ಪ್ರತಿವಾದ ಆಲಿಸಿದ ಪೀಠವು ವಿಚ್ಛೇದನ ಪ್ರಕರಣದಲ್ಲಿ ಶಾಶ್ವತ ಜೀವನಾಂಶ ತಿರಸ್ಕೃತವಾಗಿದ್ದು, ಪತಿಯ ಆರ್ಥಿಕ ಸಾಮರ್ಥ್ಯವನ್ನು ಪತ್ನಿ ಸಾಬೀತು ಪಡಿಸಲು ವಿಫಲವಾದ ಕಾರಣಕ್ಕೆ ಮಾತ್ರ. ಇದರಿಂದ ಸಿಆರ್‌ಪಿಸಿ ಸೆಕ್ಷನ್ 125ರಡಿ ಜೀವನಾಂಶ ಪಡೆಯುವ ಹಕ್ಕು ಕಳೆದುಹೋಗುವುದಿಲ್ಲ ಎಂದು ಹೇಳಿದೆ.

ಪತಿಯು ಖಾಸಗಿ ಸಂಸ್ಥೆಯಲ್ಲಿ ಸಹಾಯಕ ಲೆಕ್ಕಾಧಿಕಾರಿಯಾಗಿ ಕೆಲಸ ಮಾಡುತ್ತಿದ್ದು, ತಿಂಗಳಿಗೆ ಸುಮಾರು ರೂ.29,000 ಆದಾಯ ಗಳಿಸುತ್ತಿರುವುದನ್ನು ಪರಿಗಣಿಸಿದ ಹೈಕೋರ್ಟ್, ಪತ್ನಿ ಮತ್ತು ಮಗನಿಗೆ ತಲಾ ತಿಂಗಳಿಗೆ 5,000 ನಿರ್ವಹಣಾ ಭತ್ಯೆ ಪಾವತಿಸುವಂತೆ ಆದೇಶಿಸಿದೆ.

ಪ್ರಕರಣದಲ್ಲಿ ಪತ್ನಿಯ ಪರಿಷ್ಕರಣಾ ಅರ್ಜಿಯನ್ನು ಅಂಗೀಕರಿಸಿದ ನ್ಯಾಯಾಲಯವು ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಸ್ವಲ್ಪ ಮಾರ್ಪಾಟು ಮಾಡಿದೆ.

ಪತ್ನಿ ಕಲಾ ವಿಭಾಗದಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾಳೆ ಎಂಬುದಷ್ಟೇ ಆಕೆಗೆ ನಿರ್ವಹಣಾ ಭತ್ಯೆ ನಿರಾಕರಿಸಲು ಸಾಕಷ್ಟು ಕಾರಣವಲ್ಲ. ಆಕೆ ಉದ್ಯೋಗದಲ್ಲಿದ್ದಾಳೆ ಅಥವಾ ಸ್ವತಂತ್ರವಾಗಿ ಆದಾಯ ಗಳಿಸುತ್ತಿದ್ದಾಳೆ ಎಂಬುದನ್ನು ಪತಿ ಕೂಡ ಹೇಳಿಲ್ಲ ಎಂದು ಹೈಕೋರ್ಟ್ ಉಲ್ಲೇಖಿಸಿದೆ.

**ಪ್ರಕರಣದ ಹಿನ್ನೆಲೆ:** ಪತ್ನಿ ಹಾಗೂ ಅಪ್ರಾಪ್ತ ಮಗ ಸಿಆರ್‌ಪಿಸಿ ಸೆಕ್ಷನ್ 125 ರಡಿಯಲ್ಲಿ ಕ್ರಮವಾಗಿ ತಿಂಗಳಿಗೆ 20 ಸಾವಿರ ಮತ್ತು 10 ಸಾವಿರ ರೂ. ನಿರ್ವಹಣಾ ಭತ್ಯೆ ಕೋರಿ ಅರ್ಜಿ ಸಲ್ಲಿಸಿದ್ದರು. ಕೌಟುಂಬಿಕ ನ್ಯಾಯಾಲಯವು ಮಗನಿಗೆ ತಿಂಗಳಿಗೆ 5 ಸಾವಿರ ರೂ. ಮಂಜೂರು ಮಾಡಿತ್ತು, ಆದರೆ ಪತ್ನಿಯ ಹಿಂದಿನ 10 ಲಕ್ಷ ರೂ. ಶಾಶ್ವತ ಜೀವನಾಂಶದ ಬೇಡಿಕೆ ತಿರಸ್ಕೃತವಾಗಿತ್ತು ಎಂಬ ಕಾರಣ ನೀಡಿ ಆಕೆಯ ಅರ್ಜಿಯನ್ನು ತಿರಸ್ಕರಿಸಿತ್ತು. ಜೊತೆಗೆ, ಪತ್ನಿ ಎಂ ಎ ಪದವಿ ಹೊಂದಿರುವುದರಿಂದ ಉದ್ಯೋಗ ಪಡೆದು ಜೀವನ ನಡೆಸಬಹುದು ಎಂದು ಕೌಟುಂಬಿಕ ನ್ಯಾಯಾಲಯ ಅಭಿಪ್ರಾಯಪಟ್ಟಿತ್ತು. ಆ ಆದೇಶವನ್ನು ಪ್ರಶ್ನಿಸಿ ಪತ್ನಿ ಸಲ್ಲಿಸಿದ್ದ ಪರಿಷ್ಕರಣಾ ಅರ್ಜಿಯನ್ನು ಹೈಕೋರ್ಟ್ ಇದೀಗ ಭಾಗಶಃ ಮಾನ್ಯ ಮಾಡಿದೆ.

# ಇ–ಕೆವೈಸಿಗೆ 500 ರೂ. ಪಡೆದ ಆರೋಪ: ನ್ಯಾಯಬೆಲೆ ಅಂಗಡಿ ಪರವಾನಗಿ ರದ್ದು



**ಬೆಂಗಳೂರು,ಅ.3:** ಪಡಿತರ ಚೀಟಿದಾರರೊಬ್ಬರಿಂದ ಇ–ಕೆವೈಸಿ ಮಾಡಿಸಲು ರೂ.500 ಹಣ ಪಡೆದ ಆರೋಪ ಹಾಗೂ ನ್ಯಾಯಬೆಲೆ ಅಂಗಡಿಯ ನಿಯಮಗಳ ಉಲ್ಲಂಘನೆ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ವಲಯದ ಚಂದ್ರಪ್ಪನಗರ ಆರ್‌ಸಿಎಚ್‌ಎಸ್‌ನ ನ್ಯಾಯಬೆಲೆ ಅಂಗಡಿ ಸಂಖ್ಯೆ ಪರವಾಣಿಗೆಯನ್ನು ರದ್ದುಗೊಳಿಸಲಾಗಿದೆ.

ಈ ನ್ಯಾಯಬೆಲೆ ಅಂಗಡಿ ಕಾರ್ಯದರ್ಶಿ ಅಕ್ಟೋಬರ್ 2ರಂದು ಬಸವರಾಜಸ್ವಾಮಿ ಎಂಬುವವರ ಈ– ಕೆವೈಸಿ ಮಾಡಲು 500 ಹಣವನ್ನು ಫೋನ್– ಪೇ ಮೂಲಕ ಪಡೆದುಕೊಂಡಿದ್ದರು. ಈ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಅಧಿಕಾರಿಗಳು ನ್ಯಾಯಬೆಲೆ ಅಂಗಡಿಗೆ ಪರೀಶಿಲಿಸಿದಾಗ ಆರೋಪ ದೃಢಪಟ್ಟಿತ್ತು. ಪರಿಶೀಲನೆ ವೇಳೆ ದರಪಟ್ಟಿ, ದಾಸ್ತಾನು ಫಲಕ ಆಹಾರಧಾನ್ಯಗಳ ಮಾದರಿಗಳನ್ನು ಪ್ರದರ್ಶಿಸಿರಲಿಲ್ಲ. ತನಿಖಾ ಪುಸ್ತಕ ಇಟ್ಟಿರಲಿಲ್ಲ. ಅಂಗಡಿ ಮಳಿಗೆಯಲ್ಲಿ ಸ್ವಚ್ಛತೆ ಕಾಪಾಡಿರಲಿಲ್ಲ.

3.75 ಕ್ವಿಂಟಾಲ್ ರಾಗಿ ದಾಸ್ತಾನು ಸೂಕ್ತ ರೀತಿಯಲ್ಲಿ ಸಂಗ್ರಹಿಸಿರಲಿಲ್ಲ. ಅಂಗಡಿಯ ಸೀಲ್ ಸೇರಿದಂತೆ ನಿಯಮಗಳನ್ನು ಪಾಲಿಸಿರಲಿಲ್ಲ. ಅಕ್ರಮಹಣ ಸ್ವೀಕಾರ, ನಿಯಮಗಳ ಉಲ್ಲಂಘನೆ ಕುರಿತು ಕಾರಣ ಕೇಳಿ ನೋಟಿಸ್ ನೀಡ ಲಾಗಿದ್ದರೂ, ನ್ಯಾಯಬೆಲೆ ಅಂಗಡಿ ಯಿಂದ ಸಮರ್ಪಕ ಲಿಖಿತ ಸಮಜಾಯಿಷಿ ಸಲ್ಲಿಸಿರಲಿಲ್ಲ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಅಗತ್ಯ ವಸ್ತುಗಳ ಸಾರ್ವಜನಿಕ ವಿತರಣಾ ಪದ್ಧತಿ (ನಿಯಂತ್ರಣ) ಆದೇಶ–2016ರ ನಿಯಮಗಳಡಿ ವಿಚಾರಣೆ ಕಾಯ್ದಿರಿಸಿ, ನ್ಯಾಯಬೆಲೆ ಅಂಗಡಿ ಪರವಾನಿಗೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ಇಲಾಖೆ ಆದೇಶ ಹೊರಡಿಸಿದೆ.

ಈ– ಕೆವೈಸಿ ಮಾಡಿಕೊಡಲು ಪಡಿತರ ಚೀಟಿದಾರರಿಂದ ನ್ಯಾಯಬೆಲೆ ಅಂಗಡಿಯವರು ಹಣ ಪಡೆಯುತ್ತಿರುವ ಆರೋಪಗಳ ಕುರಿತು ಕಳವಳ ವ್ಯಕ್ತಪಡಿಸಿರುವ ಆಹಾರ, ನಾಗರೀಕ ಪೂರೈಕೆ ಹಾಗೂ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ರಿಜ್ವಾನ್ ಅರ್ಷದ್ ಅವರು ಇಂತಹ ದೂರುಗಳು ಬಂದರೆ ತಕ್ಷಣವೇ ಅಂತಹ ಅಂಗಡಿಗಳ ಪರವಾನಿಗೆ ರದ್ದುಪಡಿಸುವ ಜೊತೆಗೆ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದ್ದಾರೆ.

# ಗುತ್ತಿಗೆದಾರರಿಗೆ 2,400 ಕೋಟಿ ರೂ ಬಿಡುಗಡೆ, ಗುತ್ತಿಗೆದಾರರ ಹೋರಾಟಕ್ಕೆ ಎಚ್ಚೆತ್ತ ಸರ್ಕಾರ

**ಬೆಂಗಳೂರು, ಅ.3:** ರಾಜ್ಯ ಗುತ್ತಿಗೆದಾರರ ಸಂಘದ ಪ್ರತಿಭಟನೆಗೆ ಎಚ್ಚೆತ್ತಿರುವ ಸರ್ಕಾರ ಕಳೆದ ಮೂರು ದಿನಗಳಲ್ಲಿ ನೀರಾವರಿ ಇಲಾಖೆಗೆ ಸಂಬಂಧಪಟ್ಟಂತೆ 2,400 ಕೋಟಿ ರೂ. ಬಿಡುಗಡೆ ಮಾಡಿದೆ. 38,000 ಕೋಟಿ ರೂ. ಬಾಕಿ ಪಾವತಿಸಬೇಕು ಎಂದು ಕರ್ನಾಟಕ ರಾಜ್ಯ ಗುತ್ತಿಗೆದಾರರ ಸಂಘ ಪ್ರತಿಭಟನೆಗೆ ಎಚ್ಚರಿಕೆ ನೀಡಿತ್ತು. ಸರ್ಕಾರದ ಈ ಕ್ರಮವನ್ನು ಬಾಕಿ ಪಾವತಿ ಪ್ರಕ್ರಿಯೆಗೆ ಚಾಲನೆ ನೀಡುವ ಪ್ರಯತ್ನವೆಂದು ಪರಿಗಣಿಸಲಾಗಿದೆ.

ಆದರೆ, ಗುತ್ತಿಗೆದಾರರ ಸಂಘದ ಪ್ರಕಾರ ಬಿಡುಗಡೆಯಾಗಿರುವ 2,400 ಕೋಟಿ ರೂ. ಮೊತ್ತವು ಒಟ್ಟು ಬಾಕಿಯ ಶೇ.10ರಷ್ಟು ಕಡಿಮೆಯಾಗಿದ್ದು, ಇದರಿಂದ ಹಲವು ವರ್ಷಗಳಿಂದ ಮುಂದುವರಿ ದಿರುವ ಆರ್ಥಿಕ ಸಂಕಷ್ಟಕ್ಕೆ ಶಾಶ್ವತ ಪರಿಹಾರ ಸಿಗುವುದಿಲ್ಲ. ಮೂರು–ನಾಲ್ಕು ತಿಂಗಳಿಗೊಮ್ಮೆ ಅಲ್ಪ ಪ್ರಮಾಣದ ಹಣ ಬಿಡುಗಡೆ ಮಾಡುವ ಬದಲು ಬಾಕಿ ಮೊತ್ತವನ್ನು ಸಮರ್ಪಕವಾಗಿ ಪಾವತಿಸಬೇಕು ಎಂದು ಸಂಘ ಒತ್ತಾಯಿಸಿದೆ.

ಸಂಘದ ಅಧ್ಯಕ್ಷ ಆರ್. ಮಂಜುನಾಥ್, ಬಾಕಿ ಹಣದ ಮೇಲಿನ ಸಾಲದ ಹೊರೆ ಹೆಚ್ಚುತ್ತಿರುವುದರಿಂದ ಗುತ್ತಿಗೆದಾರರು ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ಹೇಳಿದ್ದಾರೆ. ಗುತ್ತಿಗೆದಾರರ ಬಾಕಿ ಬಿಲ್‌ಗಳ ಸಮಸ್ಯೆ ಹೊಸದಲ್ಲ. ಮಾರ್ಚ್ 6ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಗುತ್ತಿಗೆದಾರರು ಪ್ರತಿಭಟನೆ ನಡೆಸಿ ಬಾಕಿ ಹಣ ಬಿಡುಗಡೆಗೆ ಆಗ್ರಹಿಸಿದ್ದರು. ಆ ಸಂದರ್ಭದಲ್ಲಿ ಡಿ.ಕೆ.ಶಿವಕುಮಾರ್ ಅವರು ಗುತ್ತಿಗೆದಾರರೊಂದಿಗೆ ಮುಖ್ಯಮಂತ್ರಿಗಳ ಸಭೆ ನಡೆಸಿ ಸಮಸ್ಯೆ ಪರಿಹರಿಸುವುದಾಗಿ ಭರವಸೆ ನೀಡಿದ್ದರು. ಆದರೆ ತಿಂಗಳುಗಳು ಕಳೆದರೂ ನಿರೀಕ್ಷಿತ ಪ್ರಮಾಣದಲ್ಲಿ ಹಣ ಬಿಡುಗಡೆಯಾಗಿಲ್ಲ ಎಂಬುದು ಸಂಘದ ಅಸಮಾಧಾನಕ್ಕೆ ಕಾರಣವಾಗಿದೆ. ಫೆಬ್ರವರಿಯಲ್ಲಿಯೂ ಗುತ್ತಿಗೆದಾರರ ಸಂಘವು ರಾಜ್ಯದ ಪ್ರಮುಖ ಎಂಟು ಇಲಾಖೆಗಳಲ್ಲೇ ಸುಮಾರು 37,370 ಕೋಟಿ ರೂ. ಬಿಲ್‌ಗಳು ಬಾಕಿ ಉಳಿದಿವೆ ಎಂದು ಹೇಳಿ, ಹಣ ಬಿಡುಗಡೆ ಮಾಡದಿದ್ದರೆ ಮೂಲಸೌಕರ್ಯ ಕಾಮಗಾರಿಗಳನ್ನು ಸ್ಥಗಿತಗೊಳಿಸುವ ಎಚ್ಚರಿಕೆ ನೀಡಿತ್ತು.

**ಬಾಕಿ ವಿವರ:** ಸಂಘದ ಇತ್ತೀಚಿನ ಲೆಕ್ಕಾಚಾರದ ಪ್ರಕಾರ, ಜಲಸಂಪನ್ಮೂಲ/ಪ್ರಮುಖ ನೀರಾವರಿ ಇಲಾಖೆಯಲ್ಲಿ ಸುಮಾರು 14,000 ಕೋಟಿ ರೂ., ಲೋಕೋಪಯೋಗಿ ಇಲಾಖೆಯಲ್ಲಿ 8,370 ಕೋಟಿ ರೂ., ಸಣ್ಣ ನೀರಾವರಿಯಲ್ಲಿ 3,600 ಕೋಟಿ ರೂ., ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ 3,000 ಕೋಟಿ ರೂ., ವಸತಿ ಮತ್ತು ವಕ್ಫ್ ನಲ್ಲಿ 2,600 ಕೋಟಿ ರೂ., ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ 2,600 ಕೋಟಿ ರೂ., ಕಾರ್ಮಿಕ ಇಲಾಖೆಯಲ್ಲಿ 2,000 ಕೋಟಿ ರೂ. ಹಾಗೂ ನಗರಾಭಿವೃದ್ಧಿ ಇಲಾಖೆಯಲ್ಲಿ 1,800 ಕೋಟಿ ರೂ. ಬಾಕಿ ಇದೆ ಎಂದು ಸಂಘ ಹೇಳಿದೆ. ಈ ಮೊತ್ತಗಳು ಒಟ್ಟಾಗಿ ಸುಮಾರು 38,000 ಕೋಟಿ ರೂ.ಗೆ ಸಮೀಪಿಸುತ್ತವೆ.

**ಪಿಡಬ್ಲ್ಯುಡಿ ಬಾಕಿಯೂ ಬಿಡುಗಡೆ ಸಾಧ್ಯತೆ:**

ನೀರಾವರಿ ಇಲಾಖೆಯ ನಂತರ ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರ ಬಾಕಿ ಬಿಲ್‌ಗಳಿಗೂ ಇದೇ ರೀತಿಯಲ್ಲಿ ಸರ್ಕಾರ ಹಣ ಬಿಡುಗಡೆ ಮಾಡುವ ಸಾಧ್ಯತೆ ಇದೆ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ. ಹಣಕಾಸು ಇಲಾಖೆ ಅಗತ್ಯ ನಿರಾಕ್ಷೇಪಣಾ ಪತ್ರ ನೀಡಿದ ಬಳಿಕ ಪಾವತಿ ಪ್ರಕ್ರಿಯೆ ಆರಂಭವಾಗಬಹುದು ಎನ್ನಲಾಗಿದೆ.

# ಎಸ್‌ಐಆರ್: ನೋ ಮ್ಯಾಪಿಂಗ್ ಮತದಾರರ ವಿಚಾರಣೆ ಚುರುಕು

**ಬೆಂಗಳೂರು, ಅ.3:** ಚುನಾವಣಾ ಆಯೋಗದ ವಿರುದ್ಧ ರಾಜ್ಯದಲ್ಲಿ ಪ್ರತಿಭಟನೆ ಹಾಗೂ ಆಕ್ಷೇಪಣೆಗಳು ಕೇಳಿಬರುತ್ತಿರುವ ಬೆನ್ನಲ್ಲೇ, ಕರ್ನಾಟಕದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯಡಿ ನೋ ಮ್ಯಾಪಿಂಗ್ ಮತದಾರರ ವಿಚಾರಣೆ ಚುರುಕುಗೊಂಡಿದೆ.

ರಾಜ್ಯದಲ್ಲಿ ನೋ ಮ್ಯಾಪಿಂಗ್ ಎಂದು ಗುರುತಿಸಲಾದ ಸುಮಾರು 43.43 ಲಕ್ಷ ಮತದಾರರಿಗೆ ನೋಟಿಸ್ ನೀಡಲಾಗಿದ್ದು, ಈ ಪೈಕಿ 33.60 ಲಕ್ಷ ಮತದಾರರ ವಿಚಾರಣೆ ಪೂರ್ಣಗೊಂಡಿದೆ. ಅಂದರೆ, ಒಟ್ಟು ವಿಚಾರಣೆಯ 81.99ರಷ್ಟು ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನೂ ಸುಮಾರು 7.82 ಲಕ್ಷ ಮತದಾರರ ವಿಚಾರಣೆ ಬಾಕಿ ಇದೆ. ಕೇಂದ್ರ ಚುನಾವಣಾ ಆಯೋಗದ ಸೂಚನೆಯಂತೆ, ಬೂತ್ ಮಟ್ಟದ ಅಧಿಕಾರಿಗಳು ಮನೆ–ಮನೆಗೆ ತೆರಳಿ ಮತದಾರರ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ನಿಗದಿತ ದಾಖಲೆ ಪಡೆದು ಇಸಿಐಎನ್‌ಇಟಿ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲಾಗುತ್ತಿದೆ.

ನೋ ಮ್ಯಾಪಿಂಗ್‌ಗೆ ಸಂಬಂಧಿಸಿದ ವಿಚಾರಣೆ ಪ್ರಕ್ರಿಯೆ ಅ.12ರಂದು ಅಂತ್ಯಗೊಳ್ಳಲಿದೆ.ಆಕ್ಷೇಪಣೆ ಮತ್ತು ಕ್ಲೇಮ್‌ಗಳ ವಿಲೇವಾರಿ ಬಳಿಕ ಅ.22ರಿಂದ 27ರ ಅವಧಿಯಲ್ಲಿ ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ಪ್ರಕ್ರಿಯೆ ನಡೆಯಲಿದೆ.

ಇದೇ ವೇಳೆ, ರಾಜ್ಯದಲ್ಲಿ ಹೊಸದಾಗಿ ಮತದಾರರ ಪಟ್ಟಿಗೆ ಸೇರ್ಪಡೆಯಾಗಲು 8.85 ಲಕ್ಷ ಮಂದಿ ಫಾರ್ಮ್–6 ಮೂಲಕ ಅರ್ಜಿ ಸಲ್ಲಿಸಿದ್ದಾರೆ. ವಿದೇಶ ದಲ್ಲಿರುವ 4,648 ಮಂದಿ ಫಾರ್ಮ್–6ಎ ಮೂಲಕ ಹೊಸದಾಗಿ ನೋಂದಣಿಗೆ ಅರ್ಜಿ ಸಲ್ಲಿಸಿದ್ದಾರೆ.

ಮತ್ತೊಂದೆಡೆ, ತಮ್ಮ ಹೆಸರು ಮತದಾರರ ಪಟ್ಟಿಯಿಂದ ಅಳಿಸಲು 84,900 ಮಂದಿ ಫಾರ್ಮ್–7ರಲ್ಲಿ ಸಲ್ಲಿಸಿದ್ದಾರೆ.

ಹೆಸರು ಅಥವಾ ಇತರ ವಿವರಗಳಲ್ಲಿ ತಿದ್ದುಪಡಿ ಕೋರಿ 11.78 ಲಕ್ಷ ಮತದಾರರು ಅರ್ಜಿ ಸಲ್ಲಿಸಿದ್ದಾರೆ. ಆಯೋಗದ ಅಂಕಿ–ಅಂಶಗಳ ಪ್ರಕಾರ, ಈ ಎಲ್ಲಾ ಅರ್ಜಿಗಳು, ಆಕ್ಷೇಪಣೆಗಳು ಮತ್ತು ದಾಖಲೆಗಳ ಪರಿಶೀಲನೆಯ ಬಳಿಕ ಅಂತಿಮ ಮತದಾರರ ಪಟ್ಟಿಯಲ್ಲಿ ಬದಲಾವಣೆಗಳು ಸಂಭವಿಸಲಿವೆ.

# ಅಗಲಿದ ಪತ್ರಕರ್ತರಿಗೆ ಕೆಯುಡಬ್ಲ್ಯುಜೆ ಶ್ರದ್ಧಾಂಜಲಿ




**ಬೆಂಗಳೂರು,ಅ.03–** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯುಜೆ) ವತಿಯಿಂದ ಅಗಲಿದ ಪತ್ರಕರ್ತರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ನಗರದ ಕೆಯುಡಬ್ಲ್ಯುಜೆ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಗಲಿದ ಪತ್ರಕರ್ತರ ಭಾವಚಿತ್ರಗಳಿಗೆ ಪುಷ್ಪಾರ್ಚನೆ ಮಾಡಿ, ಒಂದು ನಿಮಿಷ ಮೌನಾಚರಣೆ ಮೂಲಕ ಗೌರವ ಸಲ್ಲಿಸಲಾಯಿತು.

ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಪತ್ರಕರ್ತರ ಒತ್ತಡದ ಬದುಕಿನಿಂದಾಗಿ ಇತ್ತೀಚಿನ ದಿನಗಳಲ್ಲಿ ಆರೋಗ್ಯ ಸಮಸ್ಯೆಗಳು ತೀವ್ರಗೊಳ್ಳುತ್ತಿದ್ದು, ಸಾವಿನ ಪ್ರಕರಣಗಳು ಹೆಚ್ಚುತ್ತಿರುವುದು ನೋವಿನ ಸಂಗತಿಯಾಗಿದೆ. ಪತ್ರಕರ್ತರ ಆರೋಗ್ಯ ಮತ್ತು ಅವರ ಸಂಕಷ್ಟಗಳ ಬಗ್ಗೆ ಸರ್ಕಾರ ವಿಶೇಷ ಗಮನಹರಿಸಿ, ಸಂಕಷ್ಟದಲ್ಲಿರುವ ಪತ್ರಕರ್ತರಿಗೆ ಅಗತ್ಯ ನೆರವು ನೀಡಬೇಕು ಎಂದು ಒತ್ತಾಯಿಸಿದರು. ಅಗಲಿದ ಪತ್ರಕರ್ತರ ಸೇವೆ ಸ್ಮರಿಸಿದರು.

ಐಎಫ್‌ಡಬ್ಲ್ಯುಜೆ ಅಧ್ಯಕ್ಷ ಬಿ.ವಿ. ಮಲ್ಲಿಕಾರ್ಜುನಯ್ಯ ಮಾತನಾಡಿ, ಬದುಕಿನಲ್ಲಿ ಅವಕಾಶ ದೊರೆತಾಗ ನಾವು ಮಾಡುವ ಉತ್ತಮ ಕೆಲಸಗಳೇ ಜೀವನದ ಸಾರ್ಥಕತೆಗೆ ಸಾಕ್ಷಿಯಾಗುತ್ತವೆ ಎಂದರು. ಗೋಪಾಲರಾವ್ ಮತ್ತು ಎನ್.ಎಸ್.ಶಂಕರ್ ಸೇವೆ ಸ್ಮರಿಸಿದರು

ಹಿರಿಯ ಪತ್ರಕರ್ತರು ಹಾಗೂ ಚಿತ್ರ ನಿರ್ದೇಶಕ ಎನ್.ಎಸ್. ಶಂಕರ್, ಜನವಾಹಿನಿ ಪತ್ರಿಕೆಯ ಮಾಜಿ ಸಂಪಾದಕ ಪ್ರೊ. ಕೆ.ಟಿ. ಬಾಲಕೃಷ್ಣಗಟ್ಟಿ, ಕೆಯುಡಬ್ಲ್ಯುಜೆ ಮಾಜಿ ರಾಜ್ಯ ಕಾರ್ಯದರ್ಶಿ ದಾವಣಗೆರೆಯ ಪೆ.ನ. ಗೋಪಾಲರಾವ್, ಓ.ಎನ್. ಸಿದ್ದಯ್ಯ, ತುಮಕೂರಿನ ಕಮಲಾ ಗಂಗಹನುಮಯ್ಯ, ಈಶ್ವರಪ್ಪ, ಬಳ್ಳಾರಿಯ ವೇಣು ಲೋಕನಾಥ್, ಚಿತ್ರದುರ್ಗದ ಉಜಿನಪ್ಪ, ಇಂದಿರಾ ಲಂಕೇಶ್, ಉಡುಪಿಯ ನಾಗೇಶ್ ಗಾಣಿಗ ಸಿದ್ದಾಪುರ, ಬೈಂದೂರಿನ ಜನಾರ್ದನ ಮರವಂತೆ, ಮಹೇಶ್ ಕುಮಾರ್, ಸಿಂದಗಿಯ ಇಸ್ಮಾಯಿಲ್ ಶೇಖ್, ಬಸವಾಪಟ್ಟಣದ ಜಯ ಕುಮಾರ್, ಬಸವರಾಜಪ್ಪ, ತುಮಕೂರಿನ ವೆಂಕಟೇಶ್‌ಮೂರ್ತಿ, ಧ್ರುವ ಕುಮಾರ್, ನಾಗೇಂದ್ರ ಹಾಗೂ ಶೇಷಗಿರಿ ಸೇರಿದಂತೆ ಅಗಲಿದ ಪತ್ರಕರ್ತರನ್ನು ಸ್ಮರಿಸಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಕೆಯುಡಬ್ಲ್ಯುಜೆ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಖಜಾಂಚಿ ವಾಸು ದೇವ ಹೊಳ್ಳ, ಬೆಂಗಳೂರು ಘಟಕದ ರವೀಶ್, ಶಿವಾನಂದ, ಶಶಿಕಲಾಇದ್ದರು.



ತುಮಕೂರಿನ ಬಿಜಿಎಸ್ ವೃತ್ತದಲ್ಲಿ ಶನಿವಾರ ನಡೆದ ಗಣೇಶ ಮೂರ್ತಿ ವಿಸರ್ಜನಾ ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯ ಜನರು ಪಾಲ್ಗೊಂಡರು.

# ನ್ಯಾಯಾಲಯಗಳಿಗೆ ಸಂಬಂಧಿಸಿದ ಸಮಸ್ಯೆಗಳಲ್ಲಿ ಜನರಿಗೆ ನೆರವಾಗಲು ಕಾನೂನು ನೆರವು ಕೇಂದ್ರ: ಸಿಎಂ ಡಿ.ಕೆ. ಶಿವಕುಮಾರ್

**ಮೈಸೂರು, ಅ.3:** ಪ್ರಜಾಸೇವೆ ಇಲಾಖೆಯ ಮೂಲಕ ಜನರ ಸಮಸ್ಯೆ ಆಲಿಸಿ ಪರಿಹಾರ ಒದಗಿಸಲು ಇಡೀ ಸರ್ಕಾರ ನಿಮ್ಮ ಮುಂದಿದೆ. ನ್ಯಾಯಾಲಯಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಉಚಿತ ಸೇವೆ ಒದಗಿಸಲು ಪ್ರಜಾಸೇವೆ ಅಭಿಯಾನದಲ್ಲಿ ಪ್ರತ್ಯೇಕ ಕಾನೂನು ಕೇಂದ್ರ ಆರಂಭಿಸಲಾಗಿದೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಪಿರಿಯಾಪಟ್ಟಣದಲ್ಲಿ ಶನಿವಾರ ನಡೆದ ಪ್ರಜಾಸೇವೆ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಜಾಸೇವೆ ಇಲಾಖೆ ಆರಂಭಿಸಿ ರಾಜ್ಯದ ಹಿರಿಯ ಪ್ರಮಾಣಿಕ ಅಧಿಕಾರಿಗೆ ಜವಾಬ್ದಾರಿ ವಹಿಸಿದ್ದೇವೆ. ಜನರ ಸೇವೆಗಾಗಿ ಜನರ ಸಮಸ್ಯೆಗೆ ಸ್ಪಂದಿಸಲು ನನ್ನ 40 ವರ್ಷಗಳ ರಾಜಕೀಯ ಅನುಭವದಲ್ಲಿ ಈ ಹೊಸ ಇಲಾಖೆ ಆರಂಭಿಸಿದ್ದೇನೆ. ನಾನು ಶಾಸಕನಾದ ಬಳಿಕ ಪ್ರತಿ ವರ್ಷ ಪ್ರತಿ ಹಳ್ಳಿಗೆ ತೆರಳಿ ಅನುಭವ ಪಡೆದಿದ್ದೇನೆ. ಜನರ ಸಮಸ್ಯೆಗಳಿಗೆ ಮುಕ್ತಿ ನೀಡಿ, ಅವರ ಆಶಯಗಳಿಗೆ ಧ್ವನಿಯಾಗಿ, ನ್ಯಾಯ ಒದಗಿಸಲು, ಮಂತ್ರಿಗಳು ಹಾಗೂ ಸ್ಥಳೀಯ ಶಾಸಕರು ಸೇರಿದಂತೆ ಸರ್ಕಾರವು ಅಧಿಕಾರಿಗಳ ಸಮೇತ ಜನರ ಮನೆ ಬಾಗಿಲಿಗೆ ಹೋಗಲು ಈ ಇಲಾಖೆ ಆರಂಭಿಸಲಾಗಿದೆ ಎಂದರು.

### 620 ಕಡೆ ಪ್ರಜಾಸೇವೆ ಅಭಿಯಾನ

ಸೆ.5ರಂದು ಈ ಇಲಾಖೆ ಆರಂಭಿಸಲಾಗಿದೆ. ಈಗಾಗಲೇ 620 ಕಡೆ ಪ್ರಜಾಸೇವೆ ಅಭಿಯಾನ ಆಯೋಜಿಸಲಾಗಿದೆ. 1 ಲಕ್ಷಕ್ಕೂ ಹೆಚ್ಚು ಜನ ಅರ್ಜಿ ಸಲ್ಲಿಸಿದ್ದು, ಕಂದಾಯ, ಗ್ರಾಮೀಣಾಭಿವೃದ್ಧಿ, ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಹೆಚ್ಚು ಅರ್ಜಿಗಳು ಬರುತ್ತಿವೆ. ಪ್ರತಿ ತಾಲ್ಲೂಕಿನಲ್ಲಿ ನ್ಯಾಯಾಲಯದಲ್ಲಿ ಕಾನೂನು ನೆರವು ನೀಡುವ ವಿಭಾಗವಿದ್ದು, ಅವರನ್ನು ಕರೆಸಿ ಈ ಕಾರ್ಯಕ್ರಮದಲ್ಲಿ ಒಂದು ಕೇಂದ್ರ ಆರಂಭಿಸಲಾಗಿದೆ. ಜನರಿಗೆ ಕಾನೂನಿನಲ್ಲಿ ತೊಡಕು ಇದ್ದರೆ ಉಚಿತವಾಗಿ ಸಹಾಯ ಮಾಡಲಾಗುವುದು. ಪ್ರಜಾಸೇವೆ ಇಲಾಖೆ ನಡೆಯುವಾಗ ಈ ವಿಭಾಗದವರು ಅಧಿಕಾರಿಗಳೊಂದಿಗೆ ಕೂತಿರುತ್ತಾರೆ. ಇಡೀ ದೇಶದಲ್ಲೇ ಬೇರೆ ಯಾವುದೇ ರಾಜ್ಯಗಳು ಮಾಡದ ಕೆಲಸವನ್ನು ನಮ್ಮ ಸರ್ಕಾರ ಮಾಡುತ್ತಿದೆ ಎಂದರು.



ರಸ್ತೆ, ಪೋಡಿ, ಪಿಂಚಣಿ, ಕುಡಿಯುವ ನೀರು, ವಿದ್ಯುತ್ ಸಮಸ್ಯೆ, ಅರಣ್ಯ, ಆರೋಗ್ಯ, ಪೊಲೀಸ್, ಕಾರ್ಮಿಕ, ಕೃಷಿ, ತೋಟಗಾರಿಕೆ ಸೇರಿದಂತೆ ಇಲಾಖೆವಾರು ಅಹವಾಲುಗಳನ್ನು ಅಧಿಕಾರಿಗಳ ಸಮ್ಮುಖದಲ್ಲಿ ಆಲಿಸಿ ಪರಿಹಾರ ಒದಗಿಸಲು ಪ್ರಜಾ ಸೇವಕನಾಗಿ ಇಡೀ ಸರ್ಕಾರ ನಿಮ್ಮ ಮುಂದೆ ಇದೆ. ನೀವು ಚೆನ್ನಾಗಿದ್ದರೆ, ನಾವು ಚೆನ್ನಾಗಿದ್ದಂತೆ. ನಿಮ್ಮ ನೋವುಗಳನ್ನು ಬಗೆಹರಿಸಿದರೆ, ನಮಗೆ ಆತ್ಮತೃಪ್ತಿ ಸಿಗುತ್ತದೆ. ಪ್ರತಿ ತಿಂಗಳು ವಾರಕ್ಕೆ 2 ದಿನ, ಮೊದಲ ಹಾಗೂ ಮೂರನೇ ಶನಿವಾರ ಜಿಲ್ಲಾ ಮಂತ್ರಿಗಳು ಹಾಗೂ ಶಾಸಕರು, ತಾಲ್ಲೂಕು ಮಟ್ಟದಲ್ಲಿ ಈ ಸಭೆ ಮಾಡಬೇಕು ಎಂದು ನಿರ್ದೇಶನ ನೀಡಲಾಗಿದೆ. ತಾಲ್ಲೂಕು ಮಟ್ಟದಲ್ಲಿ ಮುಗಿದ ಬಳಿಕ ಪಂಚಾಯ್ತಿ ಮಟ್ಟದಲ್ಲಿ ಈ ಕಾರ್ಯಕ್ರಮ ಮಾಡಬೇಕು. ಶಾಸಕರು ಹೋಗಿದ್ದರೆ, ಅಧಿಕಾರಿಗಳೇ ಹೋಗಿ ಜನರ ಸಮಸ್ಯೆ ಆಲಿಸಬೇಕು ಎಂದರು.

ಯಾರು ಯಾವ ಅರ್ಜಿ ಕೊಟ್ಟಿದ್ದಾರೆ ಅವರಿಗೆ ನನ್ನ ಪರವಾಗಿ ಉತ್ತರ ಬರುತ್ತದೆ. ಪ್ರತಿ ಇಲಾಖೆ ಅರ್ಜಿಗಳನ್ನು ಅಧಿಕಾರಿಗಳು ಪರಿಶೀಲನೆ ಮಾಡುತ್ತಾರೆ. ಪ್ರತಿ ಇಲಾಖೆಯಲ್ಲಿ ಎಷ್ಟು ಅರ್ಜಿ ವಿಲೇವಾರಿ ಆಗಿದೆ ಎಂದು ನಾನು ಪರಿಶೀಲನೆ ಮಾಡುತ್ತೇನೆ. ಒಂದು ವೇಳೆ ಅರ್ಜಿ ವಿಲೇವಾರಿ ಆಗದೇ ಇದ್ದರೆ, ಯಾಕೆ ಆಗಲಿಲ್ಲ ಎಂದು ವಿವರಣೆ ನೀಡಿ, ಅದಕ್ಕೆ ಪರಿಹಾರ ತಿಳಿಸಲಾಗುವುದು. ನನಗೆ ಆರಂಭದಲ್ಲಿ ಪಿಂಚಣಿ ವಿಚಾರವಾಗಿ ಹೆಚ್ಚಿನ ಅರ್ಜಿಗಳು ಬರುತ್ತಿದ್ದವು.

32,000 ಆದಾಯ ಮಿತಿಯನ್ನು ನಿಗದಿ ಮಾಡಿದ್ದು, ಪಿಂಚಣಿ ನಿಂತಿದೆ ಎಂದಾಗ, ಅದಕ್ಕೆ 1.20 ಲಕ್ಷದವರೆಗೆ ಆದಾಯ ಮಿತಿಯನ್ನು ನಿಗದಿ ಮಾಡಿ ಸಮಸ್ಯೆಯನ್ನು ಬಗೆಹರಿಸಲಾಗಿದೆ. ಸರ್ಕಾರದ ಒಂದು ತೀರ್ಮಾನದಿಂದ 12 ಲಕ್ಷ ಜನರಿಗೆ ಪ್ರಯೋಜನವಾಗಿದೆ ಎಂದರು.

ನಿವೇಶನರಹಿತರು ಅರ್ಜಿಗಳನ್ನು ನೀಡುತ್ತಿದ್ದು, ಜಿಲ್ಲಾಧಿಕಾರಿಗಳು ಸರ್ಕಾರಿ ಜಮೀನುಗಳನ್ನು ಗುರುತಿಸಬೇಕು. ಅದಿಲ್ಲದಿದ್ದರೆ ಖಾಸಗಿ ಜಮೀನು ಅಥವಾ ಹೊಸ ಬಡಾವಣೆಗಳನ್ನು ನಿರ್ಮಾಣ ಮಾಡಿ ಎಂದು ಸೂಚಿಸಲಾಗಿದೆ. ಮೊದಲ ಹಂತದಲ್ಲಿ ಸೂರು ಕೊಡಬೇಕೆಂದು 5 ಲಕ್ಷ ಬಡವರಿಗೆ ನಿವೇಶನ ನೀಡಲು ತೀರ್ಮಾನ ಮಾಡಲಾಗಿದೆ ಎಂದರು.

# ನೇತ್ರದಾನದಿಂದ ಅಂಧರ ಬಾಳಿಗೆ ಬೆಳಕು: ಎಸ್.ಪಿ.ಅಡೂರು ಶ್ರೀನಿವಾಸಲು



**ಕಲಬುರಗಿ, ಅ. 3:** ವಿದ್ಯಾರ್ಥಿಗಳಿಗೆ ಶಿಕ್ಷಣ ಮುಖ್ಯ. ಆದರೆ ಅವರು ಶಿಕ್ಷಣಕ್ಕೆ ಮಾತ್ರ ಸೀಮಿತವಾಗದೇ ಸಾಮಾಜಿಕ ಚಟುವಟಿಕೆಗಳಲ್ಲೂ ಸಕ್ರೀಯವಾಗಿ ತೊಡಗಿಸಿಕೊಳ್ಳಬೇಕು. ಸಮಾಜದ ಆಗುಹೋಗುಗಳನ್ನು ತಿಳಿದುಕೊಂಡು ಸಮಾಜದ ಸಮಸ್ಯೆಗಳಿಗೆ ಸ್ಪಂದಿಸಬೇಕು. ನೇತ್ರದಾನದಂತಹ ಮಾನವೀಯ ಕಾರ್ಯಗಳ ಮೂಲಕ ಇತರ ಅಂಧರ ಬಾಳಿಗೆ ಬೆಳಗುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠ ಅಡೂರು ಶ್ರೀನಿವಾಸಲು ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ನೇತ್ರದಾನ ಎಂದ ಮಾತ್ರಕ್ಕೆ ವಿದ್ಯಾರ್ಥಿಗಳನ್ನು ಕೂಡಿಹಾಕಿ ಅವರ ಕಣ್ಣುಗಳನ್ನು ಕೀಳುವದಿಲ್ಲ. ನೇತ್ರಾನವೆಂದರೆ ನಮ್ಮ ಮರಣದ ನಂತರವೂ ಹಲವು ಕಾಲ ನೇತ್ರಗಳು ಜೀವಂತವಾಗಿರುತ್ತವೆ. ಅವುಗಳನ್ನು ತೆಗೆದು ಅಂಧರಿಗೆ ಅಳವಡಿಸುವ ಮೂಲಕ ಅವರ ಬಾಳಿಗೆ ಬೆಳಕನ್ನು ನೀಡುವುದಾಗಿದೆ. ಹಲವು ವರ್ಷಗಳಿಂದ ನೇತ್ರದಾನಿಗಳು ಮೊದಲೇ ತಮ್ಮ ಹೆಸರನ್ನು ನೋಂದಾಯಿಸಿದ್ದಾರೆ. ಅವರ ಮರಣದ ನಂತರ ಆಸ್ಪತ್ರೆಗೆ ಕರೆಮಾಡಿ ತಿಳಿಸಿದರೆ ಅವರು ಬಂದು ತೆಗೆದುಕೊಂಡು ಹೋಗುತ್ತಾರೆ. ಹೀಗಾಗಿ ದಾನಿಯು ಮೃತಪಟ್ಟಿದ್ದರೂ, ಆತನ ಕಣ್ಣುಗಳು ಜೀವಂತವಾಗಿ ಜಗತ್ತನ್ನು ನೋಡುತ್ತವೆ ಎಂದರು.

ಅತಿಥಿಗಳಾಗಿದ್ದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ್ ಯಡ್ರಾಮಿ ಹಾಗೂ ಡಾ. ಸಿದ್ದು ಪಾಟೀಲ ಮಾತನಾಡಿದರು. ಹಿರಿಯ ಪತ್ರಕರ್ತ ಬಸವರಾಜ ಚಿನಿವಾರ ಮುಖ್ಯ ಅತಿಥಿಯಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ನ್ಯಾಯವಾದಿ ರಾಘವೇಂದ್ರ ಕುಲಕರ್ಣಿ, ಸಮಾಜಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ.ಗಣಪತಿ ಪೂಜಾರಿ, ಪಿಡಿಓ ಜೇವರ್ಗಿಯ ಎಇ ಶಂಕರಗೌಡ ಪಾಟೀಲ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ (ಬಿ–ಗ್ರೇಡ್) ಹುದ್ದೆ ಉನ್ನತೀಕರಣ ಸಂಘದ ರಾಜ್ಯ ನಿರ್ದೇಶಕಿ ಹಾಗೂ ಕಲಬುರಗಿ ಜಿಲ್ಲಾಧ್ಯಕ್ಷೆ ರಾಜೇಶ್ವರಿ ಸಾಹು ಗೌರವ ಉಪಸ್ಥಿತರಿದ್ದರು.

'ನೇತ್ರದಾನ ಮಾಡಿ, ಅಂಧರ ಬಾಳಿಗೆ ಬೆಳಕಾಗಿ' ಎಂಬ ಸಂದೇಶದೊಂದಿಗೆ ನೇತ್ರದಾನದ ಮಹತ್ವದ ಕುರಿತು ಜಾಗೃತಿ ಮೂಡಿಸಲಾಯಿತು. ಶಿಬಿರದ ಮೂಲಕ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಲ್ಲಿ ನೇತ್ರದಾನದ ಕುಯಿರಿತು ಅರಿವು ಮೂಡಿಸುವ ಪ್ರಯತ್ನ ನಡೆಯಿತು.

# ಎಸ್‌ಐಆರ್‌ನಲ್ಲಿ ಕರ್ನಾಟಕಕ್ಕೆ ಅನ್ಯಾಯ: ಚಲುವರಾಯಸ್ವಾಮಿ ಕಿಡಿ



ಮೈಸೂರು, ಅ.3: ವಿರೋಧ ಪಕ್ಷದ ನಾಯಕನಾಗಿ ಜವಾಬ್ದಾರಿಯಿಂದ ನಡೆದುಕೊಳ್ಳಬೇಕೇ ಹೊರತು, ಎಸ್‌ಐಆರ್‌ನಲ್ಲಿ ನಡೆದಿರುವ ಅಕ್ರಮಗಳ ಪರ ಮಾತನಾಡುವವರಿಗೆ ಯಾವ ಮರ್ಯಾದೆ ಇದೆಯೇ ಎಂದು ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು.

ಮಾಧ್ಯಮಗಳೊಂದಿಗೆ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಅಕ್ರಮಗಳ ಸರಣಿಯೇ ನಡೆದಿದೆ. ಬಿಎಲ್‌ಒಗಳು 450ಕ್ಕೂ ಹೆಚ್ಚು ಫಾರಂ ನಂಬರ್ 7 ವಿತರಿಸಿದ್ದಾರೆ. ಇದಕ್ಕೆ ಕಾನೂನಿನಲ್ಲಿ ಅವಕಾಶವಿದೆಯೇ ಎಂದು ಪ್ರಶ್ನಿಸಿದ ಅವರು, ದೇಶದ ಸಂವಿಧಾನದ ಪಾವಿತ್ರ್ಯ ಕಾಪಾಡಬೇಕಾದ ಚುನಾವಣಾ ಆಯೋಗವೇ ಎಸ್‌ಐಆರ್ ಮೂಲಕ ಅಕ್ರಮ ಎಸಗಿದೆ. ಎಸ್‌ಐಆರ್‌ನಿಂದ ಕರ್ನಾಟಕಕ್ಕೆ ಅನ್ಯಾಯವಾಗಿದೆ. ಹೀಗಾಗಿ ಕರ್ನಾಟಕದ ಪರವಾಗಿ ಮಾತನಾಡಬೇಕಿರುವ ವಿರೋಧ ಪಕ್ಷದ ನಾಯಕರು ಕೇಂದ್ರದ ಪರವಾಗಿ ಮಾತನಾಡುತ್ತಿದ್ದಾರೆ. ಇಂತಹವರಿಗೆ ಜನಪರ ಕಾಳಜಿ ಹಾಗೂ ಜವಾಬ್ದಾರಿ ಏನು ಎಂದು ಚಲುವರಾಯಸ್ವಾಮಿ ಪ್ರಶ್ನಿಸಿದರು. ಬಿಜೆಪಿ ಮತ್ತು ಜೆಡಿಎಸ್‌ನ ಕೆಲವರು ಇದೇ ಹಾದಿಯಲ್ಲಿ ಸಾಗುತ್ತಿದ್ದಾರೆ. ಮೂಲ ಕಾಂಗ್ರೆಸಿಗರು ಮಾತನಾಡುತ್ತಿಲ್ಲ, ವಲಸಿಗರೇ ಮಾತನಾಡುತ್ತಿದ್ದಾರೆ ಎಂಬ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ಹೇಳಿಕೆಗೂ ಚಲುವರಾಯಸ್ವಾಮಿ ತಿರುಗೇಟು ನೀಡಿದರು.

ಎಚ್.ಡಿ. ಕುಮಾರಸ್ವಾಮಿ ಅವರಿಗೆ ಡಿ.ಕೆ. ಶಿವಕುಮಾರ್ ಹಾಗೂ ತಮ್ಮನ್ನು ಕಂಡರೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಚಲುವರಾಯಸ್ವಾಮಿ ಹೇಳಿದರು. ಸಚಿವ ಕೆ.ಎಂ. ಶಿವಲಿಂಗೇಗೌಡರ ಬಗ್ಗೆಯೂ ಇದೇ ರೀತಿಯ ಅಸಮಾಧಾನ ಅವರಿಗಿದೆ ಎಂದು ಹೇಳಿದರು.

ನಾನು ಈಗ ಕಾಂಗ್ರೆಸ್‌ನಲ್ಲಿದ್ದೇನೆ. ನಾನೂ ಕಾಂಗ್ರೆಸಿಗ. ಶಿವಲಿಂಗೇಗೌಡರು ಅವರ ಪಕ್ಷದಲ್ಲೇ ಉಳಿದುಕೊಂಡಿದ್ದರೆ ಬೋರ್ಡ್ ಅಧ್ಯಕ್ಷರನ್ನಾಗಿಯೂ ಮಾಡುತ್ತಿರಲಿಲ್ಲ ಎಂದು ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು. ರಾಮನಗರದ ಉಸ್ತುವಾರಿ ಸಚಿವ ಬಾಲಕೃಷ್ಣ ಅವರು ತಮ್ಮ ವ್ಯಾಪ್ತಿಯಲ್ಲಿರುವ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಬಗ್ಗೆ ಮಾತನಾಡುತ್ತಿದ್ದಾರೆ. ಇದರಲ್ಲಿ ಅವರಿಗೇನು ಸಮಸ್ಯೆ ಎಂದು ಪ್ರಶ್ನಿಸಿದ ಚಲುವರಾಯಸ್ವಾಮಿ, ಈ ವಿಚಾರದಲ್ಲಿ ಅನಗತ್ಯವಾಗಿ ಟೀಕೆ ಮಾಡಲಾಗುತ್ತಿದೆ ಎಂದರು.ಕಳೆದ ಮೂರು ತಿಂಗಳಿಂದ ಎಚ್.ಡಿ. ಕುಮಾರಸ್ವಾಮಿ ಮಾಡುತ್ತಿರುವ ರಾಜಕೀಯ ಸರಿಯೇ ಎಂದು ಪ್ರಶ್ನಿಸಿದ ಚಲುವರಾಯಸ್ವಾಮಿ, ಪ್ರಧಾನಿಗಳು ಅವರಿಗೆ ಕೆಲಸವನ್ನೇ ನೀಡಿಲ್ಲ ಅನ್ನಿಸುತ್ತದೆ. ವಾರಪೂರ್ತಿ ಬೆಂಗಳೂರಿನ ಮಾಧ್ಯಮಗಳ ಮುಂದೆಯೇ ಇರುತ್ತಾರೆ"ಎಂದು ವ್ಯಂಗ್ಯವಾಡಿದರು.

ಇದೇ ವೇಳೆ ರಾಜ್ಯದ ಬರ ಪರಿಸ್ಥಿತಿ ಹಾಗೂ ಕೇಂದ್ರದ ನೆರವಿನ ಬಗ್ಗೆಯೂ ಚಲುವರಾಯಸ್ವಾಮಿ ಮಾತನಾಡಿದರು. ಬರ ಅಧ್ಯಯನಕ್ಕಾಗಿ ಕೇಂದ್ರದ ತಂಡ ಕರ್ನಾಟಕಕ್ಕೆ ಬಂದಿದೆ. ತಂಡ ಯಾವ ರೀತಿಯ ವರದಿ ನೀಡಲಿದೆ ಎಂಬುದನ್ನು ನೋಡಬೇಕು. ರೈತರ ಪರವಾಗಿಯೇ ವರದಿ ನೀಡುವ ವಿಶ್ವಾಸವಿದೆ ಎಂದರು.ಆದರೆ ಕೇಂದ್ರ ಸರ್ಕಾರ ಈವರೆಗೂ ಕರ್ನಾಟಕದ ನಿರೀಕ್ಷೆಗೆ ತಕ್ಕಂತೆ ಬರ ಪರಿಹಾರ ನೀಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿಯೂ ರಾಜ್ಯಕ್ಕೆ ಸಂಪೂರ್ಣ ಪ್ರಮಾಣದ ಬರ ಪರಿಹಾರ ಬಿಡುಗಡೆಯಾಗಿರಲಿಲ್ಲ ಎಂದು ಚಲುವರಾಯಸ್ವಾಮಿ ಹೇಳಿದರು.

# ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ ಹೊತ್ತಿಉರಿದ ಕಾರು



**ಮಂಡ್ಯ, ಅ.3:** ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್‌ವೇನಲ್ಲಿ ಚಲಿಸುತ್ತಿದ್ದ ಐಷಾರಾಮಿ ಕಾರೊಂದು ಏಕಾಏಕಿ ಬೆಂಕಿಗೆ ಆಹುತಿಯಾಗಿ ಧಗಧಗನೆ ಹೊತ್ತಿ ಉರಿದ ಘಟನೆ ಮಂಡ್ಯ ಜಿಲ್ಲೆಯ ಮದ್ದೂರು ತಾಲೂಕಿನ ನಿಡಘಟ್ಟ ಸಮೀಪ ನಡೆದಿದೆ. ಕಾರು ಚಾಲಕ ಸಮಯಪ್ರಜ್ಞೆ ಮೆರೆದು ತಕ್ಷಣವೇ ಕೆಳಗೆ ಇಳಿದಿದ್ದರಿಂದ ಸಂಭವನೀಯ ಭಾರೀ ದುರಂತ ತಪ್ಪಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಮೈಸೂರು–ಬೆಂಗಳೂರು ಹೆದ್ದಾರಿಯಲ್ಲಿ ಬೆಂಜ್ ಕಾರು ವೇಗವಾಗಿ ಸಂಚರಿಸುತ್ತಿದ್ದ ಸಂದರ್ಭದಲ್ಲಿ, ಮುಂಭಾಗದ ಎಂಜಿನ್ ಭಾಗದಿಂದ ದಿಢೀರನೆ ದಟ್ಟ ಹೊಗೆ ಹೊರಬರಲಾರಂಭಿಸಿದೆ. ಇದನ್ನು ತಕ್ಷಣವೇ ಗಮನಿಸಿದ ಚಾಲಕ, ವಾಹನವನ್ನು ತಕ್ಷಣ ರಸ್ತೆಬದಿಗೆ ನಿಲ್ಲಿಸಿ ಕೆಳಗಿಳಿಯುತ್ತಿದ್ದಂತೆಯೇ ಕಾರಿನಾದ್ಯಂತ ಬೆಂಕಿ ವ್ಯಾಪಿಸಿ ಇಡೀ ವಾಹನ ಹೊತ್ತಿ ಉರಿದಿದೆ.

ಸುದ್ದಿ ತಿಳಿಯುತ್ತಿದ್ದಂತೆಯೇ ಮದ್ದೂರು ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ನೀರು ಹರಿಸಿ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸುವಲ್ಲಿ ಯಶಸ್ವಿಯಾದರು.

ಆದಾಗ್ಯೂ, ಬೆಂಕಿಯ ತೀವ್ರತೆಗೆ ಐಷಾರಾಮಿ ಕಾರು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿದೆ. ಸ್ಥಳಕ್ಕೆ ಮದ್ದೂರು ಠಾಣಾ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಹೆದ್ದಾರಿಯಲ್ಲಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟಿದ್ದಾರೆ. ಈ ಸಂಬಂಧ ಮದ್ದೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಒನ್ ಹೆಲ್ತ್ ಪರಿಕಲ್ಪನೆ ಜತೆಗೆ ರೇಬಿಸ್‌ಮುಕ್ತ ಸಮಾಜ ನಿರ್ಮಾಣಕ್ಕೆ ಸಿಇಓ ರಾಹುಲ್ ಸಂಕನೂರ ಕರೆ



**ಕಲಬುರಗಿ, ಅ. 3:** ಮಾನವನ ಆರೋಗ್ಯ ಬೇರೆ, ಪ್ರಾಣಿ–ಪಕ್ಷಿಗಳ ಆರೋಗ್ಯ ಬೇರೆ ಅಥವಾ ಗಿಡ–ಮರಗಳ ಆರೋಗ್ಯ ಬೇರೆ ಅಲ್ಲ. ಎಲ್ಲದಕ್ಕೂ ಇರುವುದು ಒಂದೇ ಆರೋಗ್ಯ. (ಒನ್ ಹೆಲ್ತ್) ಪರಿಕಲ್ಪನೆಯಿಂದ ರೇಬಿಸ್ ಮುಕ್ತ ಸಮಾಜ ನಿರ್ಮಾಣ ಮಾಡಬೇಕೆಂದು ಜಿಲ್ಲಾ ಪಂಚಾಯತ್ ಸಿಇಓ ರಾಹುಲ್ ಎಸ್. ಸಂಕನೂರ ಹೇಳಿದರು.

"ವಿಶ್ವ ರೇಬಿಸ್ ದಿನಾಚರಣೆಗೆ–2026" ಅಂಗವಾಗಿ ಮಾನವರು, ಪ್ರಾಣಿ–ಪಕ್ಷಿಗಳು ಹಾಗೂ ಪರಿಸರದ ಆರೋಗ್ಯ ಒಂದಕ್ಕೊಂದು ಬೆಸೆದುಕೊಂಡಿದ್ದು, ಒಂದರಲ್ಲಿ ಏರುಪೇರಾದರೂ ಇಡೀ ಪ್ರಕೃತಿಯ ಸಮತೋಲನ ತಪ್ಪುತ್ತದೆ. "ಪ್ರಕೃತಿ ಮತ್ತು ಪ್ರಾಣಿಗಳು ಆರೋಗ್ಯ ವಾಗಿದ್ದಾಗ ಮಾತ್ರ ಮಾನವ ಜನಾಂಗ ಸುರಕ್ಷಿತವಾಗಿರಲು ಸಾಧ್ಯ. ರೇಬಿಸ್ ಲಸಿಕೆಯನ್ನು ಪ್ರಥಮ ಬಾರಿಗೆ ಸಂಶೋಧಿಸಿದ ಪ್ರಸಿದ್ಧ ವಿಜ್ಞಾನಿ ಲುಯಿ ಪಶ್ಚರ್ ಅವರ ನೆನಪಿನಲ್ಲಿ 'ರೇಬಿಸ್ ತಡೆಗಟ್ಟುವಿಕೆ ಮತ್ತು ಜಾಗೃತಿ ಮೂಡಿಸುವ' 'ವಿಶ್ವ ರೇಬಿಸ್ ದಿನ'ವನ್ನು ಆಚರಿಸಲಾಗುತ್ತದೆ

ರೇಬಿಸ್ ಕಾಯಿಲೆಯು ನಾಯಿ, ಬೆಕ್ಕು, ಅಳಿಲು ಮುಂತಾದ ಪ್ರಾಣಿಗಳ ಕಚ್ಚುವಿಕೆಯಿಂದ ಹರಡುತ್ತದೆ. ರೇಬಿಸ್ ಶೇ. 100 ರಷ್ಟು ಮಾರಕವಾದರೂ, ಶೇ. 100 ರಷ್ಟು ತಡೆಗಟ್ಟಬಹುದಾದ ರೋಗವಾಗಿದೆ. ಸಮಯಕ್ಕೆ ಸರಿಯಾಗಿ ಆಂಟಿ–ರೇಬಿಸ್ ಲಸಿಕೆ ಪಡೆಯುವುದರಿಂದ ಜೀವ ಉಳಿಸಬಹುದು. ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಲಸಿಕೆಗಳು ಲಭ್ಯವಿದ್ದು, ಸಾರ್ವಜನಿಕರು ಹಾಗೂ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ರೇಬಿಸ್ ಮುಕ್ತ ವಾತಾವರಣ ನಿರ್ಮಿ ಸಲು ಶ್ರಮಿಸಬೇಕು ಎಂದರು.

## ಗ್ರಾಮೀಣ ಪತ್ರಕರ್ತರಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಸಲಹೆ

# ಗಾಂಧಿ ಭವನದಲ್ಲಿ 40 ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ವಿತರಣೆ




**ವಿಜಯಪುರ, ಅ.3** ಗ್ರಾಮೀಣ ಪತ್ರಕರ್ತರಿಗೆ ರಾಜ್ಯ ಸರ್ಕಾರ ನೀಡಿರುವ ಬಸ್ ಪಾಸ್ ಸದ್ಬಳಕೆ ಮಾಡಿಕೊಂಡು, ಗ್ರಾಮೀಣ ಭಾಗದಲ್ಲಿರುವ ಸಮಸ್ಯೆಗಳನ್ನು ಬೆಳಕಿಗೆ ತರುವ ಮೂಲಕ ಸರ್ಕಾರದ ಕಣ್ತೆರೆಸುವ ಕೆಲಸವನ್ನು ಗ್ರಾಮೀಣ ಪತ್ರಕರ್ತರು ಮಾಡಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಬಿ. ಪಾಟೀಲ ಹೇಳಿದರು.

ಜಿಲ್ಲೆಯ ವಿವಿಧ ತಾಲೂಕುಗಳ 40 ಗ್ರಾಮೀಣ ಪತ್ರಕರ್ತರಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕೊಡಮಾಡಿದ ಗ್ರಾಮೀಣ ಬಸ್ ಪಾಸ್‌ಗಳನ್ನು ನಗರದ ಗಾಂಧಿ ಭವನದಲ್ಲಿ ಶನಿವಾರ ವಿತರಿಸಿ ಅವರು ಮಾತನಾಡಿದರು. ನಮ್ಮ ಭವ್ಯ ಭಾರತ ಪ್ರತಿಶತ ಶೇ.80ರಷ್ಟು ಹಳ್ಳಿಗಳಿಂದ ಕೂಡಿದೆ. ಗ್ರಾಮಗಳ ಅಭಿವೃದ್ಧಿಯಾದಾಗಲೇ ಭಾರತದ ನೈಜ ಅಭಿವೃದ್ಧಿ ಎಂದು ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರು ಹೇಳಿದ್ದರು. ಈ ಹಿನ್ನೆಲೆಯಲ್ಲಿ ಗ್ರಾಮೀಣ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವ ಮೂಲಕ ಗ್ರಾಮೀಣ ಪತ್ರಕರ್ತರು ಭವ್ಯ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದರು.

ಗ್ರಾಮೀಣ ಪತ್ರಕರ್ತರು ತಮ್ಮ ಹೋಬಳಿ ಇಲ್ಲವೇ ತಾಲೂಕು ಕೇಂದ್ರಗಳಿಂದ ಜಿಲ್ಲಾ ಕೇಂದ್ರಕ್ಕೆ ಸಂಚರಿಸಲು ಅನುಕೂಲ ಆಗಬೇಕು ಎಂಬ ಸದುದ್ದೇಶದಿಂದ ಹಿಂದಿನ ಮುಖ್ಯಮಂತ್ರಿ ಗಳು ಈ ಬಸ್ ಪಾಸ್ ವ್ಯವಸ್ಥೆಗೆ ಅಸ್ತು ನೀಡಿದ್ದರು. ಆದರೆ ಈ ಬಸ್ ಪಾಸ್ ವಿತರಣೆಗೆ ಮಾನದಂಡಗಳ ಗೊಂದಲದಿಂದಾಗಿ ಬಸ್ ಪಾಸ್ ವಿತರಣೆಯಲ್ಲಿ ಕೊಂಚ ವಿಳಂಬವಾಗಿತ್ತು. ಈಗ ಮಾನದಂಡಗಳನ್ನು ಸರಳೀಕರಣಗೊಳಿಸಿದ ಹಿನ್ನೆಲೆಯಲ್ಲಿ ಜಿಲ್ಲೆಯ 40 ಜನ ಪತ್ರಕರ್ತರಿಗೆ ಬಸ್ ಪಾಸ್ ಗಳನ್ನು ರಾಜ್ಯ ಸರ್ಕಾರ ವಿತರಿಸುತ್ತಿರುವುದು ಸಂತಸದ ಸಂಗತಿ ಎಂದರು.

# ರಾಯಚೂರು ನಗರದಲ್ಲಿ ಆಟೋಚಾಲಕರು ನಿಂತಲ್ಲೇ ನಿಲ್ದಾಣ....!

**ರಾಯಚೂರು, ಅ. 3:** ನಗರದಲ್ಲಿ ಆಟೋಚಾಲಕರು ನಿಂತಲ್ಲೇ ನಿಲ್ದಾಣ ಎಂಬಂತಾಗಿದ್ದು, ಅವರಿಗೆ ಆಟೋ ನಿಲ್ದಾಣಗಳ ಅಗತ್ಯವೇ ಇಲ್ಲ. ಅವರು ನಗರದಲ್ಲಿ ಎಲ್ಲಿ ಬೇಕಾದರೂ ಯಾವುದೇ ದಟ್ಟಣೆಯಲ್ಲೂ ನಿಂತು ಪ್ರಯಣಿಕರನ್ನು ಹತ್ತಿಸಿಕಿಂಡು ಹೋಗುವುದರಿಂದ ಸಂಚಾರಕ್ಕೆ ತೀವ್ರ ವ್ಯತ್ಯಯ ಉಂಟಾಗಿದೆ.



ನಗರದಲ್ಲಿ ಮುಖ್ಯವಾಗಿ ಪ್ರಮುಖ ರಸ್ತೆ, ವೃತ್ತ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಆಟೋಚಾಲಕರು ಮನಬಂದಂತೆ ವಾಹನ ನಿಲುಗಡೆ ಮಾಡುತ್ತಿರುವುದರಿಂದ ಸುಗಮ ಸಂಚಾರಕ್ಕೆ ತೀವ್ರ ಅಡ್ಡಿಯಾಗುತ್ತಿದೆ. ಸಂಚಾರ ನಿಯಮಗಳನ್ನು ಉಲ್ಲಂಘಿಸಿ ಪ್ರಯಾಣಿಕರನ್ನು ಹತ್ತಿಸಿಕೊಳ್ಳಲು ರಸ್ತೆ ಮಧ್ಯದಲ್ಲೇ ಆಟೋಗಳನ್ನು ನಿಲ್ಲಿಸುತ್ತಿರುವುದರಿಂದ ದಿನನಿತ್ಯ ವಾಹನ ಸವಾರರು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ.

ನಗರದ ಕೇಂದ್ರ ಬಸ್ ನಿಲ್ದಾಣ, ರೈಲು ನಿಲ್ದಾಣ, ರಿಮ್ಸ್ ಆಸ್ಪತ್ರೆ, ನವೋದಯ ಆಸ್ಪತ್ರೆ, ಕನಕದಾಸ ವೃತ್ತ, ಗಾಂಧಿ ವೃತ್ತ, ಮಹಾನಗರ ಪಾಲಿಕೆ ಕಚೇರಿ ಎದುರು, ಸ್ಟೇಷನ್ ಮಾರ್ಗ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಆಟೋಗಳ ಅಡ್ಡಾದಿಡ್ಡಿ ನಿಲುಗಡೆ ಸಾಮಾನ್ಯವಾಗಿದೆ. ವಿಶೇಷವಾಗಿ ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ, ಚಂದ್ರಮೌಳೇಶ್ವರ ವೃತ್ತ, ಪೂರ್ಣಿಮಾ ಚಿತ್ರಮಂದಿರ, ಗಾಂಧಿ ವೃತ್ತ, ತೀನ್ ಕಂದಿಲ್ ಹಾಗೂ ಮಡಿವಾಳ ವೃತ್ತಗಳಲ್ಲಿ ಪ್ರಯಾಣಿಕರನ್ನು ಹತ್ತಿಸಿಕೊಳ್ಳಲು ಆಟೋಚಾಲಕರ ನಡುವೆ ಪೈಪೋಟಿ ನಡೆಯುತ್ತದೆ.

ಕೇಂದ್ರ ಬಸ್ ನಿಲ್ದಾಣದಿಂದ ಎಲ್‌ವಿಡಿ ಕಾಲೇಜು ಹಾಗೂ ವಾಸವಿ ನಗರದ ಕಡೆಗೆ ತೆರಳುವ ಮಾರ್ಗದಲ್ಲಿ ಬೆಳಗಿನ ವೇಳೆಯಲ್ಲಿ ರಸ್ತೆ ಮಧ್ಯದಲ್ಲೇ ಆಟೋಗಳನ್ನು ನಿಲ್ಲಿಸಿ ಪ್ರಯಾಣಿಕರನ್ನು ಹತ್ತಿಸಿಕೊಳ್ಳಲಾಗುತ್ತಿದೆ. ಇದರಿಂದ ಹಿಂದೆ ಬರುತ್ತಿರುವ ವಾಹನಗಳಿಗೆ ಸಂಚರಿಸಲು ಸ್ಥಳಾವಕಾಶ ಕಡಿಮೆಯಾಗುತ್ತಿದ್ದು, ಕೆಲ ಸಂದರ್ಭಗಳಲ್ಲಿ ಸಂಚಾರ ದಟ್ಟಣೆ ಉಂಟಾಗುತ್ತಿದೆ. ಸಂಚಾರ ದಟ್ಟಣೆ ನಿಯಂತ್ರಿಸಲು ನಿಯೋಜಿಸಲಾಗಿರುವ ಗೃಹರಕ್ಷಕ ಸಿಬ್ಬಂದಿಗೆ ಹಾಗೂ ಸಂಚಾರ ಪೊಲೀಸರಿಗೆ ಆಟೋಚಾಲಕರು ಕವಡೆ ಕಾಸಿನ ಬೆಲೆ ಕೊಡುತ್ತಿಲ್ಲ.

ಇದರೊಂದಿಗೆ ಶಾಲಾ ಮಕ್ಕಳನ್ನು ನಿಗದಿತ ಸಾಮರ್ಥ್ಯಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಆಟೋ ಹಾಗೂ ವ್ಯಾನ್‌ಗಳಲ್ಲಿ ಕರೆದೊಯ್ಯುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ವಾಹನಗಳ ಸಾಮರ್ಥ್ಯ, ಚಾಲಕರ ದಾಖಲೆಗಳು ಹಾಗೂ ಸುರಕ್ಷತಾ ನಿಯಮಗಳ ಕುರಿತು ಕಟ್ಟುನಿಟ್ಟಿನ ತಪಾಸಣೆ ನಡೆಸಬೇಕಿದೆ.

ಪ್ರಯಾಣಿಕರಿಂದ ಹೆಚ್ಚಿನ ದರ ವಸೂಲಿ ಮಾಡಲಾಗುತ್ತಿದೆ ಎಂಬ ದೂರುಗಳೂ ಕೇಳಿಬರುತ್ತಿವೆ. ರಿಮ್ಸ್, ಒಪೆಕ್ ಹಾಗೂ ನವೋದಯ ಆಸ್ಪತ್ರೆಗಳಿಗೆ ತೆರಳುವ ಪ್ರಯಾಣಿಕರಿಂದ ಕೆಲ ಆಟೋ ಚಾಲಕರು ?100 ರಿಂದ ರೂ. 150ರವರೆಗೆ ಪಡೆಯುತ್ತಿದ್ದಾರೆ ಎನ್ನಲಾಗುತ್ತಿದೆ.

ನಿಗದಿತ ದರಕ್ಕಿಂತ ಹೆಚ್ಚಿನ ಹಣ ನೀಡಲು ನಿರಾಕರಿಸಿದರೆ ಪ್ರಯಾಣಿಕರೊಂದಿಗೆ ವಾಗ್ವಾದ ನಡೆಸುವುದು ಅಥವಾ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪಗಳೂ ಇವೆ.

ನಗರದಲ್ಲಿ ಆಟೋ ಸಂಚಾರ ವ್ಯವಸ್ಥೆಯನ್ನು ಶಿಸ್ತುಬದ್ಧಗೊಳಿಸಲು ಜಿಲ್ಲಾಡಳಿತ ಹಾಗೂ ಸಂಚಾರ ಪೊಲೀಸರು ಕ್ರಮ ಕೈಗೊಳ್ಳಬೇಕು. ಪ್ರಮುಖ ಸ್ಥಳಗಳಲ್ಲಿ ಆಟೋ ನಿಲ್ದಾಣಗಳನ್ನು ಗುರುತಿಸಿ, ರಸ್ತೆ ಮಧ್ಯೆ ಹಾಗೂ ನಿಷೇಧಿತ ಪ್ರದೇಶಗಳಲ್ಲಿ ನಿಲುಗಡೆ ಮಾಡುವವರಿಗೆ ದಂಡ ವಿಧಿಸಬೇಕು.

ಜತೆಗೆ ಆಟೋಗಳಿಗೆ ನಿಗದಿತ ದರಪಟ್ಟಿ ಕಡ್ಡಾಯಗೊಳಿಸಿ, ಪ್ರಯಾಣಿಕರಿಂದ ಹೆಚ್ಚುವರಿ ಹಣ ವಸೂಲಿ ಮಾಡುವುದನ್ನು ತಡೆಯ ಬೇಕು. ಶಾಲಾ ಮಕ್ಕಳನ್ನು ಕರೆದೊಯ್ಯುವ ವಾಹನಗಳನ್ನು ನಿಯಮಿತ ತಪಾಸಣೆ ನಡೆಸಿ ಸುರಕ್ಷತಾ ನಿಯಮಗಳ ಪಾಲನೆ ಖಚಿತಪಡಿಸಬೇಕು ಎಂಬುದು ಸಾರ್ವಜನಿಕರಾದ ಸಂತೋಷ, ಶಿವರಾಜ, ಅಭಿಷೇಕ, ಮುದುಕಪ್ಪ ನಾಯಕ ಅವರ ಆಗ್ರಹವಾಗಿದೆ.

**ಸಂಚಾರ ನಿಯಮ ಉಲ್ಲಂಘಿಸುವ ಆಟೋ ಚಾಲಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕರ ಸುಗಮ ಹಾಗೂ ಸುರಕ್ಷಿತ ಸಂಚಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು.ವಿನೋದ ಕುಮಾರ, ಸಾಮಾಜಿಕ ಕಾರ್ಯಕರ್ತ ಆಟೋಚಾಲಕರು ಪ್ರಯಾಣಿಕರಿಂದ ಮನಬಂದಂತೆ ಹೆಚ್ಚಿನ ಹಣ ವಸೂಲಿ ಮಾಡುತ್ತಿದ್ದಾರೆ. ಇದಕ್ಕೆ ಕಡಿವಾಣ ಹಾಕಲು ಜಿಲ್ಲಾಡಳಿತ ಆಟೋ ಪ್ರಯಾಣ ದರವನ್ನು ನಿಗದಿಪಡಿಸಿ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಬೇಕು.ಕರಿಯಪ್ಪ, ಬೈಕ್ ಸವಾರಆಟೋಚಾಲಕರು ರಸ್ತೆ ಮೇಲೆಯೇ ಆಟೋಗಳನ್ನು ನಿಲುಗಡೆ ಮಾಡುತ್ತಿರುವುದರಿಂದ ವಾಹನಗಳ ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿದೆ. ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲು ಸಂಚಾರ ಪೊಲೀಸರು ನಿಯಮ ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳಬೇಕು.**

## ಹಾನಗಲ್ಲ ಕುಮಾರ ಶಿವಯೋಗಿಗಳ 159 ನೇ ಕಾಯಕಯೋಗಿ

# ಡಾ. ಸಂಗನಬಸವ ಮಹಾಸ್ವಾಮಿಗಳ 88ನೇ ಜಯಂತ್ಯೋತ್ಸವದ ಅಂಗವಾಗಿ 1111 ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮ

**ಬಳ್ಳಾರಿ ಅ 03.**ಬಳ್ಳಾರಿ ನಗರದ ಜಗದ್ಗುರು ಕೊಟ್ಟೂರುಸ್ವಾಮಿ ಸಂಸ್ಥಾನ ಮಠದಲ್ಲಿ ಅ. 3 ಮತ್ತು 4 ರಂದು ಕಾರಣಿಕ ಯುಗಪುರುಷ ಹಾನಗಲ್ಲ ಕುಮಾರ ಶಿವಯೋಗಿಗಳ 159ನೇ, ಕಾಯಕಯೋಗಿ ಡಾ. ಸಂಗನಬಸವ ಮಹಾಸ್ವಾಮಿಗಳವರ 88ನೇ ಜಯಂತ್ಯೋತ್ಸವದ ಅಂಗವಾಗಿ ಕೊಟ್ಟೂರು ಸಂಸ್ಥಾನ ಮಠದ ಬಸವಲಿಂಗ ಮಹಾಸ್ವಾಮಿಗಳ ಸಾನಿಧ್ಯ ದಲ್ಲಿ ನಡೆಯಿತ್ತಿರುವ ಪ್ರವಚನ ಮಂಗಲ ಮಹೋತ್ಸವ, ಸೋಮ ಸಮುದ್ರದಿಂದ ಶ್ರೀಧರಗಡ್ಡೆ ಮತ್ತು ಬಳ್ಳಾರಿಯ ಶ್ರೀಮಠದವರೆಗೆ ಪಾದಂ ಯಾತ್ರೆ, ಕೊಟ್ಟೂರೇಶ್ವರ ರಥೋತ್ಸವ, 1111 ಮುತ್ತೈದೆಯರಿಗೆ ಉಡಿ ತುಂಬುವ ಸಮಾರಂಭ ಹಾಗೂ ಪೂಜ್ಯದ್ವಯರ ಭಾವಚಿತ್ರದ ಉತ್ಸವದ ಕಾರ್ಯಕ್ರಮಗಳು ಅ.3 ಮತ್ತು 4 ರಂದು ಹಮ್ಮಿಕೊಳ್ಳಲಾಗಿದೆ.



ಅ.3 ರಂದು ಸಂಜೆ 5–30 ಗಂಟೆಗೆ ಬೃಹತ್ ಪಾದಯಾತ್ರೆ ಸೋಮಸಮುದ್ರ ಹಾಗೂ ಶ್ರೀಧರಗಡ್ಡೆ ಗ್ರಾಮದಿಂದ ಭಕ್ತಸಮೂಹ ಬಳ್ಳಾರಿಯ ಕೊಟ್ಟೂರುಸ್ವಾಮಿ ಮಠಕ್ಕೆ ಪಾದಯಾತ್ರೆಯಲ್ಲಿ ಆಗಮಿಸು ವರು. ನಂತರ ಕೊಟ್ಟೂರೇಶ್ವರ ರಥೋತ್ಸವ ವಾದ್ಯ ವೈಭವಗಳೊಂದಿಗೆ ಜರುಗಿದೆ. ಸಂಜೆ 7 ಗಂಟೆಗೆ 'ಜೀವನ ದರ್ಶನ' ಪ್ರವಚನ ಮಂಗಲೋತ್ಸವ ಶ್ರೀಗಳ ಸಾನಿಧ್ಯದಲ್ಲಿ ದರೂರು, ಸಂಗನ ಬಸವೇಶ್ವರಮಠ ದರೂರು, ಹಾಗು ಸೋಮಸಮುದ್ರ ಮಠದ ಶ್ರೀಗಳ ಉಪಸ್ಥಿತಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಜ್ಯ ಅಧ್ಯಕ್ಷ ಶಂಕರ ಮಹಾದೇವ ಬಿದರಿ, ಸಂಸದ ಈ. ತುಕಾರಾಂ, ವಿಧಾನ ಪರಿಷತ್ ಸದಸ್ಯ ವೈ. ಎಂ.ಸತೀಶ್, ಜಿಲ್ಲೆಯ ಶಾಸಕರಾದ ಬಿ.ನಾಗೇಂದ್ರ, ನಾರಾ ಭರತರೆಡ್ಡಿ, ಜೆ.ಎನ್. ಗಣೇಶ್, ಬಿ.ಎಂ. ನಾಗರಾಜ್, ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಡಾ. ಕೆ. ಮಹಾಂತೇಶ್ ಮೊದಲಾದವರು ಆಗಮಿಸಲಿದ್ದಾರೆ.

ಅಖಿಲಭಾರತ ವೀರಶೈವ–ಲಿಂಗಾಯತ ಮಹಾಸಭಾದ ನವದೆಹಲಿಯ ರಾಜ್ಯ ಅಧ್ಯಕ್ಷ ಶ್ರೀಕಂಠ ಚೌಕಿಮಠ ಅವರು ಕುಮಾರ ಶಿವಯೋಗಿಗಳ ಸಾಧನೆ ಮತ್ತು ಕೊಡುಗೆಗಳ ಕುರಿತು ಉಪನ್ಯಾಸ ನೀಡಲಿದ್ದಾರೆ.ವೀರಶೈವ ಲಿಂಗಾಯತ ಸಮಾಜದ ಮುಖಂಡರು ಪಾಲ್ಗೊಳ್ಳಲಿದ್ದಾರೆ. ಪ್ರವಚನ ಮಂಗಲ ನುಡಿಯನ್ನು ವೇದಮೂರ್ತಿ ಸದಾನಂದ ಶಾಸ್ತ್ರಿಗಳು, ಹರ್ತಿಮಠ ಸಂಸ್ಥಾನ ಹರ್ಲಾಪುರ, ಸಂಗೀತ ಸೇವೆ ಶಿವ ಲಿಂಗಯ್ಯ ಗವಾಯಿಗಳು, ಬಿಳೇಬಾಳ ತಬಲಾ ಸೇವೆ ಸಿದ್ದಲಿಂಗೇಶ, ಹೊಳಲು ವಾಯೋಲಿನ್ ಸೇವೆ ಷಣ್ಮುಖಯ್ಯ ಬ. ಹಿರೇಮಠ, ಕಂಚಿನೆಗಳೂರು ಇವರಿಂದ ನಡೆಯಲಿದೆಂದು ಮಠದ ಪದಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಬುರಗಿಯ ಆಯುರ್ವೇದ, ನ್ಯಾಚರೋಪತಿ ಆಸ್ಪತ್ರೆಗೆ ಭಾರತದ ಮೊದಲ ಆಯುಷ್ ಗುಣಮಟ್ಟದ ಪ್ರಮಾಣಪತ್ರ..

**ಕಲಬುರಗಿ, ಅ. 3:** ಕಲಬುರಗಿ ಹೊರವಲಯದಲ್ಲಿರುವ ಅರುಜೀವ ಆಯುರ್ವೇದ ಮತ್ತು ನ್ಯಾಚುರೋಪತಿ ಆಸ್ಪತ್ರೆಯು ಮಹತ್ವದ ಸಾಧನೆ ಮಾಡಿದ್ದರಿಂದ ಕೇಂದ್ರ ಸರ್ಕಾರದ ಆಯುಷ್ ಗುಣಮಟ್ಟ ಪ್ರಮಾಣಪತ್ರ ಪಡೆದ ದೇಶದ ಮೊದಲ ಆಯುರ್ವೇದ ಆಸ್ಪತ್ರೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಆಯುರ್ವೇದ ಹಾಗೂ ನ್ಯಾಚುರೋಪತಿ ಕ್ಷೇತ್ರದಲ್ಲಿ ಸಂಸ್ಥೆಗಳು ನೀಡುತ್ತಿರುವ ಗುಣಮಟ್ಟದ ಸೇವೆಗಳನ್ನು ಗುರುತಿಸಿ ಕೇಂದ್ರ ಆಯುಷ್ ಸಚಿವಾಲಯವು ಈ ಗುಣಮಟ್ಟದ ಪ್ರಮಾಣಪತ್ರವನ್ನು ನೀಡಿ ಗೌರವಿಸುತ್ತದೆ.



ಕಲಬುರಗಿ ನಗರದ ಹೊರವಲಯದಲ್ಲಿರುವ ಅರುಜೀವ ಆಯುರ್ವೇದ ಮತ್ತು ನ್ಯಾಚುರೋಪತಿ ಆಸ್ಪತ್ರೆಯು ಮಾನವೀಯ ಕಲ್ಯಾಣ ಟ್ರಸ್ಟ್‌ನ ಉಪಕ್ರಮವಾಗಿದೆ. ಕೇಂದ್ರ ಆಯುಷ್ ಸಚಿವಾಲಯದಿಂದ ದೊರೆತಿರುವ ಈ ಮಾನ್ಯತೆ, ಸಾಂಪ್ರದಾಯಿಕ ಭಾರತೀಯ ಆರೋಗ್ಯ ಪದ್ಧತಿಯಲ್ಲಿ ಗುಣಮಟ್ಟ ಹಾಗೂ ಉನ್ನತ ಮಾನದಂಡಗಳನ್ನು ಕಾಪಾಡಿಕೊಂಡು ಸೇವೆ ಸಲ್ಲಿಸುವ ಆಸ್ಪತ್ರೆಯ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಅರುಜೀವ ಆಸ್ಪತ್ರೆ, ಕ್ಯೂಎಐ 1707 ಮಾನ್ಯತೆ ಪಡೆದ ಭಾರತದ ಮೊದಲ ಆಯುರ್ವೇದ ಆಸ್ಪತ್ರೆ ಎಂಬ ಮತ್ತೊಂದು ಹೆಗ್ಗಳಿಕೆಯನ್ನು ಹೊಂದಿದೆ. 28 ಹಾಸಿಗೆಗಳ ಸೌಲಭ್ಯ ಹೊಂದಿರುವ ಆಸ್ಪತ್ರೆಯು ಸುಮಾರು ಎರಡು ವರ್ಷಗಳ ಅವಧಿಯಲ್ಲಿ 4,000ಕ್ಕೂ ಅಧಿಕ ರೋಗಿಗಳಿಗೆ ಚಿಕಿತ್ಸೆ ನೀಡಿದೆ. ಮಧುಮೇಹ, ಕೀಲು ಮತ್ತು ಬೆನ್ನು ನೋವು, ಜೀರ್ಣಕ್ರಿಯೆ ಸಮಸ್ಯೆಗಳು, ಪಾರ್ಶ್ವವಾಯು ಪುನರ್ವಸತಿ ಹಾಗೂ ಜೀವನಶೈಲಿ ಸಂಬಂಧಿತ ಕಾಯಿಲೆಗಳು ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಇಲ್ಲಿ ವೈಯಕ್ತಿಕ ಅಗತ್ಯಗಳಿಗೆ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತಿದೆ.

ಆಯುರ್ವೇದ, ಯೋಗ, ನ್ಯಾಚುರೋಪತಿ ಹಾಗೂ ಫಿಸಿಯೋಥೆರಪಿಯನ್ನು ಸಮನ್ವಯಗೊಳಿಸಿ, ವೈಯಕ್ತಿಕ ಚಿಕಿತ್ಸಾ ಯೋಜನೆಗಳು, ಆರೋಗ್ಯ–ಕ್ಷೇಮ ಚಿಕಿತ್ಸೆಗಳು ಹಾಗೂ ಪೌಷ್ಟಿಕಾಂಶ ಆಧಾರಿತ ಆರೈಕೆಯನ್ನು ಆಸ್ಪತ್ರೆ ಒದಗಿಸುತ್ತಿದೆ. ರಷ್ಯಾ, ಐಸ್‌ಲ್ಯಾಂಡ್ ಹಾಗೂ ಆಫ್ರಿಕಾ ಸೇರಿದಂತೆ ವಿವಿಧ ದೇಶಗಳಿಂದಲೂ ರೋಗಿಗಳು ಮತ್ತು ಆರೋಗ್ಯ ಪ್ರವಾಸಿಗರು ಇಲ್ಲಿಗೆ ಆಗಮಿಸುತ್ತಿದ್ದು, 30 ದಿನಗಳ ವರೆಗಿನ ವಿಶೇಷ ವೆಲ್‌ನೆಸ್ ಕಾರ್ಯಕ್ರಮಗಳನ್ನು ಸಹ ಆಸ್ಪತ್ರೆ ನಡೆಸುತ್ತಿದೆ.

ಅರುಜೀವವು ಆಯುಷ್ ಎಕ್ಸೆಲ್‌ನ ಸ್ಥಾಪಕ ಸಮಿತಿ ಸದಸ್ಯವಾಗಿದ್ದು, ಡಿಮೆನ್ಷಿಯಾ ಸೊಸೈಟಿ ಆಫ್ ಇಂಡಿಯಾದೊಂದಿಗೆ ಸಹ ಕಾರ್ಯ ನಿರ್ವಹಿಸುತ್ತಿದೆ. ಅಲ್ಲದೆ, ಘಾನಾದ ನ್ಯಾಕೋರ್ಟ ಕಾಲೇಜ್ ಆಫ್ ಹೋಲಿಸ್ಟಿಕ್ ಮೆಡಿಸಿನ್‌ನೊಂದಿಗೆ ತಿಳುವಳಿಕೆ ಒಪ್ಪಂದ ಮಾಡಿಕೊಂಡಿದ್ದು, ಜಂಟಿ ತರಬೇತಿ ಕಾರ್ಯಕ್ರಮಗಳು, ಚಿಕಿತ್ಸಾ ತಜ್ಞರ ವಿನಿಮಯ ಹಾಗೂ ರೋಗಿಗಳ ಚಿಕಿತ್ಸಾ ಉಲ್ಲೇಖ ಸೇರಿರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಯೋಗಕ್ಕೆ ಒಪ್ಪಂದ ಮಾಡಿಕೊಂಡಿದೆ.



ಮೈಸೂರು ಜಿಲ್ಲೆಯ ಪಿರಿಯಾಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಶನಿವಾರ ನಡೆದ 'ಪ್ರಜಾಸೇವಾ ಅಭಿಯಾನ'ದಡಿ ಆಯೋಜಿಸಲಾಗಿದ್ದ 'ಜನರ ಮನೆಬಾಗಿಲಿಗೆ ಸರ್ಕಾರ' ಎಂಬ ಸಾರ್ವಜನಿಕ ಅಹವಾಲು ಸ್ವೀಕಾರ ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಿದ್ದರು.

# ಗ್ರಾಮಗಳಿಗೆ ಜಿ.ಪಂ ಸಿಇಓ ದಿಢೀರ್ ಭೇಟಿ

**ಬೀದರ, ಅ.3:** ಜಿಲ್ಲಾ ಪಂಚಾಯತ್ ಸಿಇಓ ಗಿತ್ತೇ ಮಾಧವ ವಿಠ್ಠಲ್‌ರಾವ್ ಅವರು, ತಾಲ್ಲೂಕಿನ ಮನ್ನಳ್ಳಿ, ಬರೂರು ಹಾಗೂ ನಾಗೋರಾ ಗ್ರಾಮಗಳಿಗೆ ದಿಢೀರ್ ಭೇಟಿ ನೀಡಿ, ವ್ಯವಸ್ಥೆಯನ್ನು ಪರಿಶೀಲಿಸಿದರು. ಮೊದಲಿಗೆ ಮನ್ನಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ಕೊಟ್ಟು, ವಿದ್ಯಾರ್ಥಿಗಳ ವಸತಿ ಕೊಠಡಿ ವೀಕ್ಷಿಸಿದರು.

ಹಾಸ್ಟೆಲ್ ಕೊಠಡಿಗಳನ್ನು ಪರಿಶೀಲಿಸಿ, ಮಂಚಗಳ ಸುರಕ್ಷತೆ ಕುರಿತು ಗಮನ ಹರಿಸಲು ಸಂಬಂಧಿಸಿದವರಿಗೆ ಸೂಚಿಸಿದರು.

ವಿದ್ಯಾರ್ಥಿಗಳೊಂದಿಗೆ ಪಠ್ಯಕ್ರಮ ಹಾಗೂ ಸಾಮಾನ್ಯ ಜ್ಞಾನಕ್ಕೆ ಸಂಬಂಧಿಸಿದಂತೆ ಸಂವಾದ ನಡೆಸಿದರು. ಕೂಸಿನ ಮನೆ, ಗ್ರಂಥಾಲಯಕ್ಕೆ ಭೇಟಿ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ಕೊಟ್ಟು, ಔಷಧಿ ದಾಸ್ತಾನು, ಪ್ರಯೋಗಾಲಯ, ತಪಾಸಣಾ ವ್ಯವಸ್ಥೆ ಪರಿಶೀಲಿಸಿದರು.

ವಿಬಿಜಿ ರಾಮ್ ಜಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ, ಕಾರ್ಮಿಕರ ಹಾಜರಾತಿ ಪರಿಶೀಲಿಸಿ, ಸ್ವತಃ ಕೆಲ ಕಾಲ ಶ್ರಮದಾನ ಸಹ ಮಾಡಿದರು. ಬರೂರು ಗ್ರಾಮ ಪಂಚಾಯಿತಿ ಕಚೇರಿಗೆ ಭೇಟಿಕೊಟ್ಟು, ಜನರ ಅಹವಾಲು ಆಲಿಸಿ, ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ಭರವಸೆ ನೀಡಿದರು.



**ಬೀದರ ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ ವಿಠ್ಠಲ್‌ರಾವ್ ಅವರು, ತಾಲ್ಲೂಕಿನ ಮನ್ನಳ್ಳಿ, ಬರೂರು, ನಾಗೋರಾ ಗ್ರಾಮಗಳಿಗೆ ದಿಢೀರ್ ಭೇಟಿ ನೀಡಿ ಮೊರಾರ್ಜಿ ವಸತಿ ಶಾಲೆಯ ವ್ಯವಸ್ಥೆಗಳನ್ನು ಗಮನಿಸಿ ವಿದ್ಯರ್ಥಿಗಳೊಂದಿಗೆ ಪಾಠ ಪ್ರವಚನಗಳ ಕುರಿತು ಚರ್ಚಿಸಿ ಮಾಹಿತಿ ಪಡೆದುಕೊಂಡರು.**

# ಹಾಲಿಗಿಂತ ನೀರು ದುಬಾರಿಯಾಗುವ ಕಾಲ ದೂರವಿಲ್ಲ: ಮಾರುತಿ ಬೌದ್ಧೆ

**ಬೀದರ್, ಅ. 3:** ಹಾಲಿಗಿಂತ ನೀರು ದುಬಾರಿಯಾಗುವ ಕಾಲ ದೂರವಿಲ್ಲ. ಪರಿಸರದ ಮೇಲಿನ ನಿರಂತರ ದಾಳಿಯಿಂದ ಮಳೆ ಬರುತ್ತಿಲ್ಲ. ಅಂತರ್ಜಲವನ್ನು ಭೂಮಿ ಕೊರೆದೂ ಕೊರೆದು ಇನ್ನಷ್ಟು ಆಳಕ್ಕೆ ಇಳಿದಿದೆ. ಇದೇ ಪರಿಸ್ಥಿತಿ ಮುಂದುವರೆದರೆ ಹಾಲಿಗಿಂತ ನೀರು ದುಬಾರಿಯಾಗುವುದರಲ್ಲಿ ಅನುಮಾನವಿಲ್ಲ ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ಮಾರುತಿ ಬೌದ್ಧೆ ಹೇಳಿದರು.

ನಗರದ ಸಿದ್ಧಾರ್ಥ ಪದವಿಪೂರ್ವ ಕಾಲೇಜಿನಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘ, ಸಿದ್ದಾರ್ಥ ಪದವಿಪೂರ್ವ ಕಾಲೇಜು, ಟೀಂ ಯುವಾ ಹಾಗೂ ಬುದ್ಧ ಬೆಳಕು ಸಾಮಾಜಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ ಸಹಯೋಗದಲ್ಲಿ ಏರ್ಪಡಿಸಿದ್ದ 'ನೀರು, ಪರಿಸರ,



ಬರ, ಕರೇಜ್ – ನೀರಿನ ಭವಿಷ್ಯಕ್ಕೆ ಭೂತಕಾಲದ ಪಾಠ' ವಿಚಾರ ಸಂಕಿರಣ ಉದ್ಘಾಟಿಸಿ, 30 ವರ್ಷಗಳ ಹಿಂದೆ ನೀರು ಇಂದಿನ ರೀತಿಯಲ್ಲಿ ಸರಳವಾಗಿ ಸಿಗುತ್ತಿರಲಿಲ್ಲ. ಇಡಿ ಕುಟುಂಬದವರು ಮೂರು ನಾಲ್ಕು ಕಿ.ಮೀ ವರೆಗೆ ನಡೆದುಕೊಂಡು ಹೋಗಿ ನೀರು ತರುವ ಕಾಲವಿತ್ತು. ಕ್ರಮೇಣವಾಗಿ ಇಂದು ಬಾವಿ, ಬೋರವೆಲ್ ಮನೆ ಮನೆಯಲ್ಲಿ ಇರುವ ಕಾರಣ ನೀರು ಸಿಗುತ್ತಿದೆ. ಇದರ ನಿರಂತರವಾಗಿ ಪರಿಸರ ನಾಶಗೊಳಿಸುತ್ತಿರುವುದರಿಂದ ಪುನಃ ನೀರಿಗೆ ಹುಡುಕಿಕೊಂಡು ಹೋಗುವ ಕಾಲ ಬಂದರೂ ಬರಬಹುದು. ಹಾಲಿಗಿಂತ ಹೆಚ್ಚಿನ ಬೆಲೆ ನೀರು ಮಾರಾಟವಾಗಬಹುದು ಎಂದು ಎಚ್ಚರಿಸಿದರು.

ಬೀದರ್ ವಿಶ್ವವಿದ್ಯಾಲಯ ಸಿಂಡಿಕೇಟ್ ಸದಸ್ಯ ವಿಠ್ಠಲದಾಸ್ ಪ್ಯಾಗೆ, ವಿದ್ಯಾರ್ಥಿಗಳು, ಯುವಕರು, ಮಹಿಳೆಯರು, ಸಂಘ ಸಂಸ್ಥೆಗಳು ನಾಗರಿಕ ಪ್ರಜ್ಞಾವಂತ ಸಮಾಜ ಬರಗಾಲ ಬರದಂತೆ ಜಾಗೃತಿ ವಹಿಸಿ ಕನಿಷ್ಠ ಮನೆಗೊಂದು ಮರ ನೆಟ್ಟು, ಪರಿಸರ ನಾಶದ ಅಂಚಿಗೆ ಹೋಗುವುದು ತಪ್ಪಿಸುವ ಸಂಕಲ್ಪ ಮಾಡಬೇಕು ಎಂದು ಸಲಹೆ ಮಾಡಿದರು.

## ಬರದಲ್ಲಿ ಕರೇಜ್ ಸದ್ಬಳಕೆಯಾಗಲಿ

ಟೀಂ ಯುವಾ ಸಹ ಸಂಸ್ಥಾಪಕ ವಿನಯ್ ಕುಮಾರ್ ಮಾಳಗೆ ಮಾತನಾಡಿ, ಬಹಮನಿ ಸುಲ್ತಾನ್ ಅಹಮ್ಮದ್ ಶಾ ಅವರು 1,420ರ ದಶಕದಲ್ಲಿ ರಾಜಧಾನಿಯನ್ನು ಕಲಬುರ್ಗಿಯಿಂದ ಬೀದರ್‌ಗೆ ಸ್ಥಳಾಂತರಿಸಿದರು. ಆಗಿನ ಬಹಮನಿ ಸಂಸ್ಥಾನದಲ್ಲಿ ಅನೇಕ ಪರ್ಷಿಯನ್ ತಂತ್ರಜ್ಞರಿದ್ದರು. ಅವರು ಕನತ್ (ಕರೇಜ್) ತಂತ್ರಜ್ಞಾನವನ್ನು ಬೀದರ್‌ಗೆ ಪರಿಚಯಿಸಿದರು. ಗುಡ್ಡದ ಬುಡದ ಅಂತರ್ಜಲವನ್ನು ಸ್ವಲ್ಪವೇ ಇಳಿಜಾರಿನ ಸುರಂಗದ ಮೂಲಕ ಊರಿನವರೆಗೆ ಗುರುತ್ವದಿಂದಲೇ ಹರಿಸುವ ವ್ಯವಸ್ಥೆ ಇದು. ಪಂಪ್ ಅಥವಾ ವಿದ್ಯುತ್ ಬೇಕಿಲ್ಲ, ನೀರು ಬಿಸಿಲಿಗೆ ಆವಿಯಾಗುವುದೂ ಇಲ್ಲ. 600 ವರ್ಷಗಳ ಹಿಂದೆಯೇ ಬೀದರ್ ಸಮೃದ್ಧ, ಜನನಿಬಿಡ ರಾಜಧಾನಿಯಾಗಿ ಬೆಳೆದಿತ್ತು. ಸಾವಿರಾರು ಜನರಿಗೆ, ಕಟ್ಟಡ ಕಾಮಗಾರಿಗೆ, ಕೃಷಿ ಮತ್ತು ಜಾನುವಾರುಗಳಿಗೆ ನೀರು ಒದಗಿಸಿದ್ದು ಕರೇಜ್ ವ್ಯವಸ್ಥೆ. ಇಂದಿಗೂ ನಗರ ಮತ್ತು ಸುತ್ತಮುತ್ತಲ ನಾಲ್ಕೈದು ಕರೇಜ್‌ಗಳು ದಿನಕ್ಕೆ ಕೋಟಿಗಟ್ಟಲೆ ಲೀಟರ್ ನೀರು ನೆಲದಾಳದಲ್ಲಿ ಹರಿಸುತ್ತಿವೆ. ಇದರ ಸದ್ಬಳಕೆಯನ್ನು ನಾವೆಲ್ಲರೂ ಮಾಡಿಕೊಳ್ಳಬೇಕು ಎಂದು ಹೇಳಿದರು.

# ಬಜರಂಗದಳ ಅಧ್ಯಕ್ಷನಿಗೆ ಗಾಯ: ಅಂಗಡಿ ಮುಂಗಟ್ಟುಗಳು ಬಂದ್

**ಬಸವಕಲ್ಯಾಣ, ಅ. 3:** ತಾಲ್ಲೂಕಿನ ಹುಲಸೂರ ಪಟ್ಟಣದ ಮುಖ್ಯ ರಸ್ತೆಯಲ್ಲಿ ವಾಹನ ಸಂಚಾರದ ವಿಚಾರವಾಗಿ ಎರಡು ಗುಂಪುಗಳ ನಡುವೆ ತಡರಾತ್ರಿ ನಡೆದ ಮಾತಿನ ಚಕಮಕಿ ವಿಕೋಪಕ್ಕೆ ತಿರುಗಿ, ಬಜರಂಗದಳದ ತಾಲ್ಲೂಕು ಅಧ್ಯಕ್ಷ ಸೇರಿದಂತೆ ಕೆಲವರು ಗಾಯಗೊಂಡಿದ್ದಾರೆ. ಘಟನೆಯ ಹಿನ್ನೆಲೆಯಲ್ಲಿ ಬೆಳಿಗ್ಗೆ ಪಟ್ಟಣದಲ್ಲಿ ಅಂಗಡಿ–ಮುಂಗಟ್ಟುಗಳು ಸ್ವಯಂಪ್ರೇರಿತವಾಗಿ ಬಂದ್ ಮಾಡಿ ಪ್ರತಿಭಟಿಸಲಾಯಿತು.

ಅಧಿಕೃತ ಮಾಹಿತಿ ಪ್ರಕಾರ, ಮುಖ್ಯ ರಸ್ತೆಯಲ್ಲಿ ವ್ಯಾಗನರ್ ಕಾರೊಂದು ಸಂಚರಿಸುತ್ತಿದ್ದ ವೇಳೆ ದ್ವಿಚಕ್ರ ವಾಹನ ಕಾರಿಗೆ ತಗುಲಿದ ಹಿನ್ನೆಲೆಯಲ್ಲಿ ಕಾರು ಚಾಲಕ ಹಾಗೂ ದ್ವಿಚಕ್ರ ವಾಹನ ಸವಾರರ ನಡುವೆ ಮಾತಿನ ಚಕಮಕಿ ನಡೆದಿದೆ. ಬಳಿಕ ಕೆಲವರು ಕಾರು ಚಾಲಕನೊಂದಿಗೆ ವಾಗ್ವಾದ ನಡೆಸಿದ್ದು, ಸ್ಥಳೀಯರು




ಮಧ್ಯಪ್ರವೇಶಿಸಿದ ಸಂದರ್ಭದಲ್ಲಿ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಿದೆ ಎನ್ನಲಾಗಿದೆ.

ಸಮೀಪದ ಅಂಗಡಿ ಬಳಿ ಕೆಲವರ ನಡುವೆ ಕೈಕೈ ಮಿಲಾಯಿಸುವ ಹಂತಕ್ಕೆ ಗಲಾಟೆ ತಲುಪಿದ್ದು, ಕಬ್ಬಿಣದ ರಾಡ್ ಸೇರಿದಂತೆ ಕೈಗೆ ಸಿಕ್ಕ ವಸ್ತುಗಳಿಂದ ಹಲ್ಲೆ ನಡೆದಿದೆ ಎಂದು ತಿಳಿದುಬಂದಿದೆ. ಘಟನೆಯಲ್ಲಿ ಬಜರಂಗದಳದ ಅಧ್ಯಕ್ಷರ ಮುಖಕ್ಕೆ ಗಾಯಗಳಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಬೀದರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಇತರ ಕೆಲವರಿಗೂ ಗಾಯಗಳಾಗಿರುವುದಾಗಿ ತಿಳಿದುಬಂದಿದೆ.

ಮಾಹಿತಿ ತಿಳಿದು ಹುಲಸೂರು ಪೊಲೀಸರು ಹಾಗೂ ಪಿಎಸ್‌ಐ ಶಿವಪ್ಪ ಮೇಟಿ ಸ್ಥಳಕ್ಕೆ ಧಾವಿಸಿ ಪರಿಸ್ಥಿತಿ ನಿಯಂತ್ರಿಸಿದರು. ಬಳಿಕ ಡಿವೈಎಸ್‌ಪಿ ಮಾಡೋಳಪ್ಪ, ಸಿಪಿಐ ಅಲಿಸಾಬ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ನಾಲ್ವರ ವಿರುದ್ಧ ಪ್ರಕರಣ: ಘಟನೆಗೆ ಸಂಬಂಧಿಸಿ ಹುಲಸೂರು ಪೊಲೀಸ್ ಠಾಣೆಯಲ್ಲಿ ತಡರಾತ್ರಿ 1 ಗಂಟೆಗೆ ನಾಲ್ವರ ವಿರುದ್ಧ ಪ್ರಕರಣ ದಾಖಲಾಗಿದೆ. ಡಿವೈಎಸ್‌ಪಿ ಮಡೋಳಪ್ಪ, ಸಿಪಿಐ ಅಲಿಸಾಬ್ ಹಾಗೂ ಪಿಎಸ್‌ಐ ಶಿವಪ್ಪ ಮೇಟಿ ನೇತೃತ್ವದ ಪೊಲೀಸರು ಕೆಲವರನ್ನು ವಿಚಾರಣೆಗಾಗಿ ಬಸವಕಲ್ಯಾಣಕ್ಕೆ ಕರೆದೊಯ್ದಿದ್ದಾರೆ ಎಂದು ತಿಳಿದುಬಂದಿದೆ.

## ಸ್ವಯಂಪ್ರೇರಿತ ಬಂದ್

ಘಟನೆಯ ಹಿನ್ನೆಲೆಯಲ್ಲಿ ಬುಧವಾರ ಬೆಳಿಗ್ಗೆ ಪಟ್ಟಣದಲ್ಲಿ ಅಂಗಡಿ–ಮುಂಗಟ್ಟುಗಳು ಸ್ವಯಂಪ್ರೇರಿತವಾಗಿ ಬಂದ್ ಆಗಿದ್ದವು. ಇದರಿಂದ ಮುಖ್ಯ ರಸ್ತೆಗಳು ಬಿಕೋ ಎನ್ನುತ್ತಿದ್ದವು. ಉಪಾಹಾರ ಸೇರಿದಂತೆ ಅಗತ್ಯ ವಸ್ತುಗಳು ಹಾಗೂ ಮೂಲಭೂತ ಸೇವೆಗಳು ಸಿಗದೆ ಸಾರ್ವಜನಿಕರಿಗೆ ಕೆಲಕಾಲ ತೊಂದರೆ ಉಂಟಾಯಿತು.

ವಿಧಿ ವಿಜ್ಞಾನ ಪ್ರಯೋಗಾಲಯ ತಂಡ ಭೇಟಿ: ಗಲಾಟೆ ನಡೆದ ಸ್ಥಳಕ್ಕೆ ವಿಧಿ ವಿಜ್ಞಾನ ಪ್ರಯೋಗಾಲಯದ (ಎಫ್‌ಎಸ್‌ಎಲ್) ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು. ಘಟನಾ ಸ್ಥಳದಲ್ಲಿದ್ದ ವಸ್ತುಗಳು ಹಾಗೂ ಲಭ್ಯವಿದ್ದ ಸಾಕ್ಷ್ಯಗಳನ್ನು ಪರಿಶೀಲಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸಿತು ಎಂದು ತಿಳಿದುಬಂದಿದೆ.

ಯಾವುದೇ ಅಹಿತಕರ ಘಟನೆ ನಡೆಯದಂತೆ ಪಟ್ಟಣದಲ್ಲಿ ಪೊಲೀಸ್ ಬಂದೋಬಸ್ತ್ ಮುಂದುವರಿಸಲಾಗಿದೆ. ಸಾರ್ವಜನಿಕರು ಅನಗತ್ಯವಾಗಿ ಗುಂಪುಗೂಡದಂತೆ ಪೊಲೀಸರು ಸೂಚಿಸಿದ್ದಾರೆ. ಸದ್ಯ ಪಟ್ಟಣದ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

# ಕಲಬುರಗಿ ಜಿಲ್ಲಾ ಹಾಪ್‌ಕಾಮ್ಸ್‌ನ 27ನೇ ವಾರ್ಷಿಕ ಮಹಾಸಭೆ




**ಕಲಬುರಗಿ, ಅ. 3:** ನಗರದಲ್ಲಿ 2025–26ನೇ ಸಾಲಿನ ಜಿಲ್ಲಾ ಹಾಪ್‌ಕಾಮ್ಸ್, ಕಲಬುರಗಿ–ಯಾದಗಿರಿ 27ನೇ ವಾರ್ಷಿಕ ಮಹಾಸಭೆಯು ಸಂಘದ ಕಚೇರಿ ಆವರಣದಲ್ಲಿ ಜರುಗಿತು.

ಸಭೆಯಲ್ಲಿ ಸಂಘದ ಉಪಾಧ್ಯಕ್ಷರಾದ ಸುಭಾಷಚಂದ್ರ ಬೋವಿ ಅವರು ಸಂಘದ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸಿದರು. ವ್ಯವಸ್ಥಾಪಕ ನಿರ್ದೇಶಕರಾದ ಅನಿಲ ರಾಠೋಡ್ ಅವರು 2025–26ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ, ಅಡ್ವಾನ್ಸ್ ಅನುದಾನ ಹಾಗೂ 2026–27ನೇ ಸಾಲಿಗೆ ಕಾಯ್ದಿರಿಸಿದ ಅನುದಾನದ ವಿವರವನ್ನು ಸಭೆಗೆ ತಿಳಿಸಿದರು.

ಸಭೆಯಲ್ಲಿ ಸಂಘದ ಬೈಲಾ ತಿದ್ದುಪಡಿ, ಹೆಚ್ಚುವರಿಯಾಗಿ ಖರ್ಚು ಮಾಡಿದ ಅನುದಾನ ಹಾಗೂ ಕಾಯ್ದಿರಿಸಿದ ಅನುದಾನವನ್ನು ಅಂಗೀಕರಿಸಲಾಯಿತು. ಸಂಘದ ನಿರ್ದೇಶಕರಾದ ಶ್ರೀ ತಿಪ್ಪಣ್ಣ ರೆಡ್ಡಿ ಎಲ್. ಮತ್ತು ಬಸವರಾಜ ಆರ್. ಪಾಟೀಲ ಅವರು ಮಾತನಾಡಿ, ಸಂಘದ ಆರ್ಥಿಕ ಬಲವರ್ಧನೆಗಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾರ್ಗದರ್ಶನ ನೀಡಿದರು.

ಸದಸ್ಯರು ಹಲವು ಸಲಹೆ–ಸೂಚನೆಗಳನ್ನು ನೀಡಿದರು. ಮುಂದಿನ ವರ್ಷದಿಂದ 10ನೇ ತರಗತಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ಸದಸ್ಯರ ಮಕ್ಕಳಿಗೆ ಬಹುಮಾನ ವಿತರಿಸುವ ಬಗ್ಗೆ ಸರ್ವಾನುಮತದಿಂದ ತೀರ್ಮಾನಿಸಲಾಯಿತು.

ಇದೇ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಹೊಸದಾಗಿ ಸ್ಟಾರ್ ಫ್ರೂಟ್ ಬೆಳೆದ ಹಡಗಿಲಹಾರ್ತಿಯ ರೈತ ಮಹಿಳೆ ಶ್ರೀಮತಿ ಶೀಲಾ ಹತ್ತಿ ಅವರನ್ನು ಸೇರಿದಂತೆ ಕಲಬುರಗಿ ಮತ್ತು ಯಾದಗಿರಿಯ ಕೆಲವು ಪ್ರಗತಿಪರ ರೈತರನ್ನು ಸನ್ಮಾನಿಸಲಾಯಿತು.

# ಶರಣಪ್ಪ ಮಟ್ಟೂರ್ ಪರವಾಗಿ ಬಿರುಸಿನ ಪ್ರಚಾರ



**ಬಳ್ಳಾರಿ, ಅ 03.** ಕರ್ನಾಟಕ ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ–2026 ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರ್ ಅವರ ಪರವಾಗಿ ಶನಿವಾರ ಬಳ್ಳಾರಿ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳು, ಖಾಸಗಿ ಹಾಗೂ ಅನುಮೋದಿತ ಶಾಲೆಗಳಲ್ಲಿ ಪ್ರಚಾರ ಮಾಡಲಾಯಿತು.

ಈ ಸಂದರ್ಭದಲ್ಲಿ ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ಜೆ.ಎಸ್. ಆಂಜನೇಯುಲು, ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಅಲ್ಲಂ ಪ್ರಶಾಂತ್, ಡಿ.ಸಿ.ಸಿ. ಕಾರ್ಯಾಧ್ಯಕ್ಷರು ಬೋಯಪಾಟಿ ವಿಷ್ಣುವರ್ಧನ, ಡಿ.ಸಿ.ಸಿ. ಉಪಾಧ್ಯಕ್ಷರು ಕೆ. ಶ್ರೀನಿವಾಸಲು, ಮಾಜಿ ಎಪಿಎಂಸಿ ಅಧ್ಯಕ್ಷರು ಸರಗು ನಾಗರಾಜು, ಡಿ.ಸಿ.ಸಿ. ಕಾರ್ಯದರ್ಶಿ ಶೋಭ ಕಲಿಂಗ, ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಶಿಕ್ಷಕರ ವಿಭಾಗದ ಅಧ್ಯಕ್ಷರು ಅಖೀಲ್ ಅಹಮ್ಮದ್, ಸೇವದಾಳ ಜಿಲ್ಲಾಧ್ಯಕ್ಷರು ಅತಾವುಲ್ಲಾ, ಕೊಟ್ಟಾಲ್ ರಘು, ಮಲ್ಲಿಶ್ವರಿ, ಲಕ್ಷ್ಮೀನಾರಾಯಣ, ಸಂತೋಷ್ ಸ್ವಾಮಿ, ಅಖಿಲ್ ಹಾಗೂ ಕಾರ್ಯಕರ್ತರು ಹಾಜರಿದ್ದರು. ಎಂದು ಬೋಯಪಾಟಿ ವಿಷ್ಣುವರ್ಧನ ಕಾರ್ಯಾಧ್ಯಕ್ಷರು ಬಳ್ಳಾರಿ ನಗರ ಜಿಲ್ಲಾ ಕಾಂಗ್ರೆಸ್ ಸಮಿತಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕ ಪ್ರಯಾಣಿಕರ ಅಹವಾಲು ಹಾಗೂ ಕುಂದುಕೊರತೆಗಳನ್ನು ಆಲಿಕೆ

# ವಿಜಯಪುರದಲ್ಲಿ ನಾಳೆ ಫೋನ್-ಇನ್

**ವಿಜಯಪುರ,ಅ.3–** ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗದಿಂದ ಸಾರ್ವಜನಿಕ ಪ್ರಯಾಣಿಕರ ಅಹವಾಲು ಹಾಗೂ ಕುಂದುಕೊರತೆಗಳನ್ನು ಆಲಿಸಲು ಅ.5ರಂದು ಸೋಮವಾರ ಫೋನ್–ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ. ಮ:3.30ರಿಂದ 4.30ರವರೆಗೆ ನಡೆಯುವ ಕಾರ್ಯಕ್ರಮದಲ್ಲಿ ಸಾರ್ವಜನಿಕರು 6366423887 ದೂರವಾಣಿ ಸಂಖ್ಯೆಗೆ ಕರೆ ಮಾಡಿ ಸಾರಿಗೆ ಸೌಕರ್ಯಕ್ಕೆ ಸಂಬಂಧಿಸಿದ ಅಹವಾಲು ಹಾಗೂ ಕುಂದುಕೊರತೆಗಳನ್ನು ತಿಳಿಸಬಹುದಾಗಿದೆ. ಸ್ವೀಕರಿಸಲಾದ ಅಹವಾಲುಗಳ ಕುರಿತು ಅಗತ್ಯ ಕ್ರಮಕೈಗೊಳ್ಳಲಾಗುವುದು ಎಂದು ಕಕರಾಸಾ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## 68 ಕಾರ್ಯಕರ್ತೆಯರು, 68 ಸಹಾಯಕಿಯರ ಹುದ್ದೆಗಳ ಭರ್ತಿ

# ಅಂಗನವಾಡಿ-ಕಂ-ಕ್ರಷ್ ಕೇಂದ್ರಗಳ ನೇಮಕಾತಿಗೆ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ವಿಜಯಪುರ, ಅ.3–**ಇಂಡಿ ತಾಲೂಕಿನಲ್ಲಿ 8 ಕಾರ್ಯಕರ್ತೆಯರು ಹಾಗೂ 8 ಸಹಾಯಕಿಯರು, ಚಡಚಣದಲ್ಲಿ 4 ಕಾರ್ಯಕರ್ತೆಯರು ಹಾಗೂ 4 ಸಹಾಯಕಿಯರು, ಸಿಂದಗಿಯಲ್ಲಿ 8 ಕಾರ್ಯಕರ್ತೆಯರು ಹಾಗೂ 8 ಸಹಾಯಕಿಯರು, ವಿಜಯಪುರ ಗ್ರಾಮೀಣ ವ್ಯಾಪ್ತಿಯಲ್ಲಿ 10 ಕಾರ್ಯಕರ್ತೆಯರು ಹಾಗೂ 10 ಸಹಾಯಕಿಯರು, ವಿಜಯಪುರ ನಗರದಲ್ಲಿ 24 ಕಾರ್ಯಕರ್ತೆಯರು ಹಾಗೂ 24 ಸಹಾಯಕಿಯರು, ಬಸವನ ಬಾಗೇವಾಡಿಯಲ್ಲಿ 8 ಕಾರ್ಯಕರ್ತೆಯರು ಹಾಗೂ 8 ಸಹಾಯಕಿಯರು ಮತ್ತು ಮುದ್ದೇಬಿಹಾಳ ತಾಲೂಕಿನಲ್ಲಿ 6 ಕಾರ್ಯಕರ್ತೆಯರು ಹಾಗೂ 6 ಸಹಾಯಕಿಯರ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತದೆ.

# ಕರಾವಳಿ, ಮಲೆನಾಡು ಭಾಗದಲ್ಲಿ ಹತ್ತು ದಿನ ವ್ಯಾಪಕ ಮಳೆ

**ಮಂಗಳೂರು,ಅ.3:** ರಾಜ್ಯದ ಕರಾವಳಿ ಮತ್ತು ಮಲೆನಾಡು ಭಾಗದ 8ಕ್ಕೂ ಹೆಚ್ಚು ಜಿಲ್ಲೆಗಳಲ್ಲಿ ಮುಂದಿನ 10 ದಿನಗಳ ಕಾಲ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ಕೇರಳ ಕಾಸರಗೋಡು ಸೇರಿದಂತೆ ರಾಜ್ಯದ ಕರಾವಳಿ ಮತ್ತು ಮಲೆನಾಡಿನ ಘಟ್ಟ ಪ್ರದೇಶಗಳಲ್ಲಿ ಸಂಜೆ ವೇಳೆ ಗುಡುಗು ಸಹಿತ ಮಳೆ ಸುರಿಯಲಿದೆ. ಕರಾವಳಿಯ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳು, ಮಲೆನಾಡಿನ ಕೊಡಗು, ಹಾಸನ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳು ಹಾಗೂ ಬೆಂಗಳೂರು ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಅಧಿಕ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಇನ್ನು, ಉತ್ತರ ಕರ್ನಾಟಕದಲ್ಲಿ ಒಣಹವೆ ಮುಂದುವರೆಯಲಿದೆ ಎಂದು ಇಲಾಖೆ ವಿವರಿಸಿದೆ. ರಾಜ್ಯದಲ್ಲಿ ಈಗಾಗಲೇ ಮುಂಗಾರು ಮಳೆ ಸಂಪೂರ್ಣವಾಗಿ ಹಿಂದೆ ಸರಿದಿದ್ದು, ಅಕ್ಟೋಬರ್ 15ರ ನಂತರ ಹಿಂಗಾರು ಮಳೆ ಆಗಮಿಸಲಿದೆ.

ಮುಂಗಾರು ಮಳೆ ಅವಧಿಯಲ್ಲಿ ಮಳೆ ಕೊರತೆ ಉಂಟಾಗಿತ್ತು. ಹಿಂಗಾರು ಮಳೆಯಾದರೂ ಸರಾಸರಿಯಷ್ಟು ಸುರಿಯಬಹುದು ಎಂಬ ನಿರೀಕ್ಷೆಯಿದೆ.

# ವಿಕಸಿತ ಭಾರತ ಯುವಶಕ್ತಿ ಕ್ವಿಜ್‌ಗೆ 7 ಸಾವಿರಕ್ಕೂ ಅಧಿಕ ನೋಂದಣಿ

**ರಾಯಚೂರು, ಅ. 3:** ವಿಕಸಿತ ಭಾರತ ಯುವ ಶಕ್ತಿ ಕಾರ್ಯಕ್ರಮದ ಅಂಗವಾಗಿ ನಡೆಯಲಿರುವ ಕ್ವಿಜ್‌ಗೆ ಜಿಲ್ಲೆಯಿಂದ ಇದುವರೆಗೆ 7 ಸಾವಿರಕ್ಕೂ ಅಧಿಕ ಯುವಜನರು ತಮ್ಮ ಹೆಸರುಗಳನ್ನು ನೋಂದಣಿ ಮಾಡಿಕೊಂಡಿದ್ದಾರೆ ಎಂದು ಮೈ ಭಾರತ್ ಜಿಲ್ಲಾ ಯುವ ಅಧಿಕಾರಿ ಸ್ವಾತಿ ಗುಗುಲೋತ್ ತಿಳಿಸಿದರು.




ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ವಿಕಸಿತ ಭಾರತ ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಿಂದ 10,934 ಯುವ ಜನರ ನೋಂದಣಿಯ ಗುರಿ ನಿಗದಿಪಡಿಸಲಾಗಿದೆ. ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್), ರಾಷ್ಟ್ರೀಯ ಕೆಡೆಟ್ ಕಾರ್ಪ್ಸ್ (ಎನ್‌ಸಿಸಿ), ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ಸಹಕಾರದಿಂದ ನೋಂದಣಿ ಪ್ರಕ್ರಿಯೆ ನಡೆಸಲಾಗುತ್ತಿದೆ. ಕಾಲೇಜುಗಳಿಗೆ ನೇರವಾಗಿ ಭೇಟಿ ನೀಡಿ ಜಾಗೃತಿ ಮೂಡಿಸುವುದರ ಜೊತೆಗೆ ಸ್ಥಳದಲ್ಲಿಯೇ ಕ್ವಿಜ್‌ಗೆ ನೋಂದಣಿ ಮಾಡಿಸಲಾಗುತ್ತಿದೆ ಎಂದರು.

20 ಪ್ರಶ್ನೆ, 10 ನಿಮಿಷ: ವಿಕಸಿತ ಭಾರತ ಯಂಗ್ ಲೀಡರ್ಸ್ ಡೈಲಾಗ್–2027ರ ಅಂಗವಾಗಿ ಕ್ವಿಜ್ ಸ್ಪರ್ಧೆ ನಡೆಯಲಿದೆ. 10 ನಿಮಿಷಗಳ ಅವಧಿಯಲ್ಲಿ 20 ಪ್ರಶ್ನೆಗಳಿಗೆ ಉತ್ತರಿಸಬೇಕಿದ್ದು, ಪ್ರಚಲಿತ ವಿದ್ಯಮಾನಗಳು ಹಾಗೂ ಸಾಮಾನ್ಯ ಜ್ಞಾನ ಆಧಾರಿತ ಪ್ರಶ್ನೆಗಳು ಇರಲಿವೆ. ಎಂಜಿನಿಯರಿಂಗ್, ವೈದ್ಯಕೀಯ, ಪದವಿ, ಪಿಯು ಸೇರಿದಂತೆ ಯಾವುದೇ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಬಹುದು.

> **ವಿವಿಧ ಇಲಾಖೆಗಳ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಮಾಹಿತಿಯನ್ನು ವಿದ್ಯಾರ್ಥಿಗಳು ಮತ್ತು ಯುವಜನರಿಗೆ ತಲುಪಿಸಲು ಅಧಿಕಾರಿಗಳ ಸಹಕಾರ ಅಗತ್ಯ.**
> **–ಸ್ವಾತಿ ಗುಗುಲೋತ್, ಮೈ ಭಾರತ್ ಜಿಲ್ಲಾ ಯುವ ಅಧಿಕಾರಿ, ರಾಯಚೂರು.**

ಕ್ವಿಜ್ ಪೂರ್ಣಗೊಂಡ ಬಳಿಕ ಪ್ರತಿ ಜಿಲ್ಲೆಯ ಅಗ್ರ ಶೇ 10ರಷ್ಟು ಸ್ಪರ್ಧಿಗಳನ್ನು ಮುಂದಿನ ಹಂತಕ್ಕೆ ಆಯ್ಕೆ ಮಾಡಲಾಗುತ್ತದೆ. ಎರಡನೇ ಹಂತದಲ್ಲಿ 500 ಪದಗಳ ಪ್ರಬಂಧ ಸ್ಪರ್ಧೆ ಡಿಜಿಟಲ್ ಮೂಲಕ ನಡೆಯಲಿದೆ. ನಂತರ ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಪೇಪರ್ ಪ್ರೆಸೆಂಟೇಶನ್ ನಡೆಯಲಿದ್ದು, ಅಲ್ಲಿಂದ ಆಯ್ಕೆಯಾಗುವ ಜಿಲ್ಲಾ ತಂಡ ನವದೆಹಲಿಯಲ್ಲಿ ನಡೆಯುವ ಅಂತಿಮ ಕಾರ್ಯಕ್ರಮದಲ್ಲಿ ಭಾಗವಹಿಸಲಿದೆ.

**ಯುವಜನರೊಂದಿಗೆ ನೇರ ಸಂವಾದ:** ವಿಕಸಿತ ಭಾರತ ಯುವ ಶಕ್ತಿ ಕಾರ್ಯಕ್ರಮವು ರಾಷ್ಟ್ರೀಯ ಯುವಜನೋತ್ಸವದ ಮಾದರಿಯಲ್ಲಿ ನಡೆಯಲಿದೆ. ಜನವರಿ 10, 11 ಮತ್ತು 12ರಂದು ನವದೆಹಲಿಯಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ಜನವರಿ 12ರಂದು ಸ್ವಾಮಿ ವಿವೇಕಾನಂದರ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಯುವದಿನ ಆಚರಿಸಲಾಗುತ್ತದೆ.

ಕೇಂದ್ರ ಸಚಿವರು ಹಾಗೂ ವಿವಿಧ ಕ್ಷೇತ್ರಗಳ ತಜ್ಞರೊಂದಿಗೆ ನೇರ ಸಂವಾದ ನಡೆಸಲು ಯುವಜನರಿಗೆ ಅವಕಾಶ ಕಲ್ಪಿಸಲಾಗುತ್ತದೆ. ಪ್ರಾದೇಶಿಕ ಮಟ್ಟದಲ್ಲಿ ಆಯ್ಕೆಯಾಗುವ ತಂಡಗಳಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ಸಂವಾದ ನಡೆಸುವ ಅವಕಾಶವೂ ಇರಲಿದೆ ಎಂದು ಸ್ವಾತಿ ಗುಗುಲೋತ್ ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ. ಸುರೇಶ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ, ಸಾಮಾಜಿಕ ಪಿಂಚಣಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ರವಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧೀಕ್ಷಕ ಸಂತೋಷ ಹಾಜರಿದ್ದರು.

# ಜನಕಪುರಿ ಕನ್ನಡ ಕೂಟ (ರಿ), ನವದೆಹಲಿ




## ಸ್ಮರಣ ಸಂಚಿಕೆ ಬಿಡುಗಡೆ ಹಾಗೂ ಸನ್ಮಾನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು

ದಿನಾಂಕ: 04.10.2026, ಭಾನುವಾರ
ಸಮಯ: ಬೆಳಗ್ಗೆ : 10 ರಿಂದ ರಾತ್ರಿ 9 ಗಂಟೆಯವರೆಗೆ
ಸ್ಥಳ: ದೆಹಲಿ ಕರ್ನಾಟಕ ಸಂಘದ ಸಭಾಂಗಣ, ಆರ್.ಕೆ.ಪುರಂ, ಸೆಕ್ಟರ್ 12, ನವದೆಹಲಿ-110 022

### ಬೆಳಗ್ಗೆ 10 ಗಂಟೆಗೆ ಉದ್ಘಾಟನಾ ಸಮಾರಂಭ

**ಉದ್ಘಾಟಕರು**
**ಡಾ.ಜಯತೀರ್ಥ ಆರ್.ಜೋಶಿ**
ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿ ಹಾಗೂ ಡೈರೆಕ್ಟರ್ ಜನರಲ್ ಬ್ರಹ್ಮೋಸ್ ಏರೋಸ್ಪೇಸ್

**ಮುಖ್ಯ ಅತಿಥಿಗಳು**
**ಶ್ರೀಬಸವರಾಜ ಎಸ್.ದೇಸಳ್ಳಿ**
ಜನರಲ್ ಮ್ಯಾನೇಜರ್, ಕರ್ನಾಟಕ ಬ್ಯಾಂಕ್ ಲಿ. ಪ್ರಾದೇಶಿಕ ಕಚೇರಿ, ನವದೆಹಲಿ

**ಅಧ್ಯಕ್ಷತೆ**
**ಡಾ.ಅಶೋಕ ಎಂ.ಈಟಿ**
ಅಧ್ಯಕ್ಷರು
ಜನಕಪುರಿ ಕನ್ನಡ ಕೂಟ

### ಸಂಜೆ 5.30ಕ್ಕೆ ಸಮಾರೋಪ ಸಮಾರಂಭ

ಮುಖ್ಯ ಅತಿಥಿಗಳು — ವಿಶೇಷ ಆಹ್ವಾನಿತರು — ಗೌರವ ಆಹ್ವಾನಿತರು



**ಶ್ರೀ ಟಿ.ಬಿ.ಜಯಚಂದ್ರ**
ಮಾಜಿ ಕಾನೂನು ಮಂತ್ರಿಗಳು ಹಾಗೂ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ, ನವದೆಹಲಿ



**ಸಮೀರ್ ಶುಕ್ಲ, ಐಎಎಸ್**
ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ, ಕರ್ನಾಟಕ ಸರ್ಕಾರ



**ಶ್ರೀ ಪ್ರದ್ಯುಮ್ನ ರಾಜಪುತ್**
ಶಾಸಕರು -ದ್ವಾರಕ , ದೆಹಲಿ ಹಾಗೂ ಚೇರ್ಮನ್ ಡಿಸ್ಟಿಕ್ ಡೆವಲಪ್ಮೆಂಟ್, ಸೌತ್‌ವೆಸ್ಟ್ ದೆಹಲಿ



**ಶ್ರೀ ರೇಣುಕುಮಾರ್**
ಅಧ್ಯಕ್ಷರು ದೆಹಲಿ ಕರ್ನಾಟಕ ಸಂಘ, ನವದೆಹಲಿ



**ಶ್ರೀರಾಧ ಕೃಷ್ಣ**
ಪ್ರಧಾನ ಕಾರ್ಯದರ್ಶಿಗಳು ದೆಹಲಿ ಕರ್ನಾಟಕ ಸಂಘ, ನವದೆಹಲಿ

### ಬೆಳಗ್ಗೆ 11.30 ಘಂಟೆಗೆ 'ಸಾಂಸ್ಕೃತಿಕ ಕಾರ್ಯಕ್ರಮ

ಜನಕಪುರಿ ಮಹಿಳಾ ಮಂಡಳಿಯಿಂದ ಹಾಗೂ ದೆಹಲಿ ಎನ್‌ಸಿಆರ್‌ನ ವಿವಿಧ ಸಂಘ ಸಂಸ್ಥೆಗಳ ಕಲಾವಿದರಿಂದ

### ನಾಟಕ: ಅಮ್ಮಾವ್ರ ಗಂಡ

ಚಲನಚಿತ್ರ ನಟ ಮೂಗ್ ಸುರೇಶ್ ತಂಡದವರಿಂದ

### ಸಂಜೆ 4.30 ಘಂಟೆಗೆ ಸನ್ಮಾನ ಕಾರ್ಯಕ್ರಮ

ದೆಹಲಿಯ ಸ್ಥಳೀಯ ಕನ್ನಡ ಸಂಘ-ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಸನ್ಮಾನ ಮತ್ತು ಜನಕಪುರಿ ಕನ್ನಡ ಕೂಟದ ಮಾಜಿ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳಿಗೆ ಸನ್ಮಾನ

### ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ವರ್ಷದ ಕಾರ್ಯಕಾರಿ ಸಮಿತಿ



**ಡಾ.ಅಶೋಕ್ ಎಂ.ಈಟಿ**
ಅಧ್ಯಕ್ಷರು, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಡಾ.ಎಸ್.ಎಲ್.ಭಂಡಾರಕರ್**
'ಉಪಾಧ್ಯಕ್ಷರು, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಡಾ,ಬಸವರಾಜ್**
ಕಾರ್ಯದರ್ಶಿಗಳು, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಎಂ.ವಿ.ವೆಂಕಟೇಶ್**
ಖಜಾಂಜಿಗಳು, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಕೃಷ್ಣರಾಜ್**
ಜಂಟಿ ಕಾರ್ಯದರ್ಶಿ, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಬಿ.ಕೆ.ಬಸವರಾಜ್**
ಸಂಚಾಲಕರು, ಜನಕಪುರಿ ಕನ್ನಡಕೂಟದ ಸುವರ್ಣ ಮಹೋತ್ಸವ ಕಾರ್ಯಕಾರಿ ಸಮಿತಿ



**ಶ್ರೀಮತಿ ರೂಪಶ್ರೀ ಈಟಿ**
ಅಧ್ಯಕ್ಷರು, ಜನಕಪುರಿ ಮಹಿಳಾ ಮಂಡಳಿ



**ಶ್ರೀಮತಿ ಪವಿತ್ರಾ ತಾಮ್ಹಣಕರ್**
ಕಾರ್ಯದರ್ಶಿಗಳು, ಜನಕಪುರಿ ಮಹಿಳಾ ಮಂಡಳಿ

**ಕಾರ್ಯಕ್ರಮಕ್ಕೆ ಶುಭಕೋರುವವರು:**
**ಜನಕಪುರಿ ಕನ್ನಡ ಕೂಟದ ಕಾರ್ಯಕಾರಿ ಸಮಿತಿ, ಸುವರ್ಣ ಮಹೋತ್ಸವ ಸಮಿತಿ ಹಾಗೂ ಜನಕಪುರಿ ಮಹಿಳಾ ಮಂಡಳಿ ಹಾಗೂ ಕೂಟದ ಸರ್ವ ಸದಸ್ಯರು**